ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 179 ಸಂಚಿಕೆ- 179 | PAGE-8 ಪುಟ-8 | ಬುಧವಾರ 27.08.2025 | RS.2/- ಬೆಲೆ 2/-

## ಬಿಡುವು




ಗೌರಿ ಗಣೇಶ ಹಬ್ಬದ ಪ್ರಯುಕ್ತ ಮಲ್ಲಮ್ಮ ನುಡಿ ಪ್ರಾದೇಶಿಕ ಪತ್ರಿಕೆಗೆ 27-08-25 ರಂದು ರಜೆಯಿರುವುದರಿಂದ 28-08-25 ರ ಸಂಚಿಕೆ ಪ್ರಕಟವಾಗುವುದಿಲ್ಲ,ಓದುಗರು ಸಹಕರಿಸಬೇಕು.

**ಗೌರಿ ಗಣೇಶ ಹಬ್ಬದ ಶುಭಾಶಯಗಳು**

ಮಲ್ಲಮ್ಮ ನುಡಿ ಪ್ರಾದೇಶಿಕ ಪತ್ರಿಕೆ ಎಲ್ಲಾ ಓದುಗರು, ಜಾಹೀರಾತುದಾರರು, ಪತ್ರಿಕಾ ಏಜೆಂಟರು, ವಿತರಕರಿಗೆ ಗೌರಿ ಗಣೇಶ ಹಬ್ಬದ ಶುಭಾಶಯಗಳು.

ಸಂಪಾದಕರು.

## ಮಳೆಯಿಂದಾಗಿ ಹಾನಿಯಾದ ಗ್ರಾಮಗಳಿಗೆ ಸಚಿವರ ಭೇಟಿ: ತ್ವರಿತವಾಗಿ ಪರಿಹಾರ : ಸಚಿವ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ ಬೀದರ, ಅ 26: ಕಮಲನಗರ ಮತ್ತು ಔರಾದ ತಾಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಮಳೆಯಿಂದ ಹಾನಿಯಾದ ಪ್ರದೇಶಗಳ ಪರಿಶೀಲನೆ ನಡೆಸಿ, ತ್ವರಿತವಾಗಿ ಪರಿಹಾರ ನೀಡಲಾಗುವುದು ಎಂದು ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಹೇಳಿದರು.

ಅವರು ಮಂಗಳವಾರ ಕಮಲನಗರ ಮತ್ತು ಔರಾದ ತಾಲೂಕಿನಲ್ಲಿ ಸುರಿದ ಮಳೆಯ ವಿಕೋಪದಿಂದ ಮನೆ ಹಾನಿ, ಪ್ರಾಣಿ ಹಾನಿ, ಬೆಳೆ ಹಾನಿ, ಸೇತುವೆ ಮತ್ತು ಕೆರೆಕಟ್ಟೆ ಹಾನಿಯಾದ ಸ್ಥಳ ವೀಕ್ಷಣೆ ಮಾಡಿದರು.

ಕಮಲನಗರ ತಾಲೂಕಿನ ಅಕನಾಪೂರನ ಎಂ.ಐ ಟ್ಯಾಂಕ್ ಕೆರೆಯ ವೀಕ್ಷಿಸಿ, ರೈತರ ಸಮಸ್ಯೆ ಆಲಿಸಿದರು. ಮುತಖೇಡನಲ್ಲಿ ಬೆಳೆ ಹಾನಿ ವೀಕ್ಷಿಸಿ, ನಂದಿ ಬೀಜಲಗಾಂವ್ ಬ್ರಿಡ್ಜ್ ಮತ್ತು ಮನೆ ಹಾನಿ ವೀಕ್ಷಿಸಿದರು. ಔರಾದ ತಾಲೂಕಿನ ಬಾವಲಗಾಂವ, ಹಂಗರಗಾ, ಸಾವರಗಾಂವ, ಬೋಂತಿ ಗಾಮಾನಾಯಕ ತಾಂಡಾ ಗಳ ಬೆಳೆ ಹಾನಿ, ರಸ್ತೆ, ಮನೆ, ಸೇತುವೆ ಮುಂತಾದವುಗಳನ್ನು ವೀಕ್ಷಿಸಿ ಮಾತನಾಡಿದ ಸಚಿವರು ಕಮಲನಗರ ಮತ್ತು ಔರಾದ ತಾಲೂಕಿನಲ್ಲಿ 300 ಎಂಎಂ ಮಳೆಯಾಗಿದ್ದು, ಇದರಿಂದಾಗಿ ಅನೇಕ ರೀತಿಯ ಹಾನಿಗಳು ಉಂಟಾಗಿವೆ ಎಂದರು. ರಸ್ತೆ, ಮನೆ, ಸೇತುವೆ ಮುಂತಾದವುಗಳು ಹಾನಿಗೊಳಗಾಗಿವೆ ಮತ್ತು ಇವುಗಳನ್ನು ತಕ್ಷಣ ಪರಿಹರಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಅತಿಯಾದ ಮಳೆಯಿಂದಾಗಿ ರೈತರ ಬೆಳೆಗಳಾದ ಹೆಸರು ಉದ್ದು, ಸೋಯಾ, ತೊಗರಿ ಹೆಚ್ಚು ಹಾನಿಯಾಗಿವೆ. ಆದರೆ ರೈತರು ಯಾವುದೇ ಆತಂಕ ಪಡಬೇಕಾಗಿಲ್ಲ, ತ್ವರಿತವಾಗಿ ಪರಿಹಾರ ನೀಡಲಾಗುವುದು ಎಂದರು. ಎನ್.ಡಿ.ಆರ್.ಎಫ್. ಮತ್ತು ಎಸ್.ಡಿ.ಆರ್.ಎಫ್. ಅಡಿಯಲ್ಲಿ ನಿರಾವರಿ ಭೂಮಿಗೆ 18,000 ಹಾಗೂ ಒಣ ಭೂಮಿಗೆ 8,500 ರೂ. ಪ್ರತಿ ಹೆಕ್ಟೇರ್ ಗೆ ಪರಿಹಾರ ನೀಡಲಾಗುವುದು. ಸಮೀಕ್ಷೆಗೆ ಈಗಾಗಲೇ ಆದೇಶ ನೀಡಲಾಗಿದೆ ಹಾಗೂ ಗ್ರಾಮ ಸಭೆ ಮೂಲಕ ಜನರ ಸಮಸ್ಯೆಗಳನ್ನು ಕ್ರೋಢೀಕರಿಸಿ, ಪರಿಹರಿಸಲು ತಿಳಿಸಲಾಗಿದೆ. ಈಗಾಗಲೇ ಮುಖ್ಯಮಂತ್ರಿ ಅವರಿಗೆ ಜಿಲ್ಲೆಯಲ್ಲಿ ಮಳೆಯಿಂದ ಆದ ಹಾನಿಯ ಬಗ್ಗೆ ತಿಳಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಬಾವಲಗಾಂವ ಸರಕಾರಿ ಕಿರಿಯ ಉರ್ದು ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಮಕ್ಕಳೊಂದಿಗೆ ಸಂವಾದ ನಡೆಸಿ, ಶಾಲೆಯಲ್ಲಿ ಕನ್ನಡ ಕಲಿಕೆ ಹೆಚ್ಚಾಗಬೇಕು ಎಂದು ಮುಖ್ಯ ಶಿಕ್ಷಕರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಪೌರಾಡಳಿತ ಹಾಗೂ

ಹಜ್ ಸಚಿವ ರಹೀಂ ಖಾನ್, ವಿಧಾನ ಪರಿಷತ್ ಸದಸ್ಯ ಭೀಮರಾವ್ ಪಾಟೀಲ, ಜಿಲ್ಲಾಧಿಕಾರಿ

ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ಬದೋಲೆ, ಬೀದರ ಸಹಾಯಕ ಆಯುಕ್ತ ಮೊಹಮದ್ ಶಕೀಲ್, ಕಮಲನಗರ

ಮತ್ತು ಔರಾದ ತಹಶೀಲ್ದಾರರು, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ,

ಲೋಕೋಪಯೋಗಿ ಇಲಾಖೆ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಾಗಿಲ ಕೊಂಡಿ ಮುರಿದು ಚಿನ್ನಾಭರಣ ಕಳುವು



ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಆ.26: ಮನೆ ಬಾಗಿಲ ಕೊಂಡಿ ಮುರಿದು 43 ಗ್ರಾಮ್ ತೂಕದ ಚಿನ್ನಾಭರಣಗಳು, 150 ಗ್ರಾಮ್ ತೂಕದ ಬೆಳ್ಳಿ ಹಾಗೂ ಒಂದು ಲಕ್ಷ ರೂ.ಗಳನ್ನು ಚಿನ್ನಾಭರಣಗಳನ್ನು ದೋಚಿ ಪರಾರಿಯಾದ ಘಟನೆ ನಗರದ ಪಾರ್ವತಿ ಲೇಔಟ್‌ನಲ್ಲಿ ವರದಿಯಾಗಿದೆ. ಶರಣಬಸಪ್ಪ ಶಂಕ್ರಪ್ಪ ಚೌಧರಿ ಎಂಬುವವರ ಮನೆಯಲ್ಲೇ ಕಳ್ಳತನವಾಗಿದೆ.

ಕಳೆದ ಶನಿವಾರ ತಡರಾತ್ರಿ ವೇಳೆಗೆ ಕಳ್ಳರು ನಮ್ಮ ಮನೆಯ ಬಾಗಿಲಿನ ಕೊಂಡಿ ಮುರಿದು ಒಳಗೆ ಪ್ರವೇಶಿಸಿ ಮನೆಯ ಅಲಮಾರಿನಲ್ಲಿಟ್ಟಿದ್ದ 1 ಲಕ್ಷ ರೂ.ಗಳ ನಗದು, 15 ಗ್ರಾಂನ ಬಂಗಾರದ ಲಾಕೆಟ್, 5 ಗ್ರಾಂನ 3 ಸುತ್ತುಂಗುರಗಳು, 5 ಗ್ರಾಂನ ಒಂದು ಜೊತೆ ಕಿವಿಯೊಲೆ, 3 ಗ್ರಾಂನ ಉಂಗುರ, 5 ಗ್ರಾಂನ ನಾಣ್ಯ ಸೇರಿದಂತೆ 150 ಗ್ರಾಂ. ಬೆಳ್ಳಿಯ ಆಭರಣಗಳನ್ನು ಕಳವುಗೈದಿದ್ದಾರೆ ಎಂದು ಸಂತ್ರಸ್ತರು ದೂರಿನಲ್ಲಿ ತಿಳಿಸಿದ್ದಾರೆ. ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಅನುಮಾನಾಸ್ಪದ ವ್ಯಕ್ತಿಗಳು ಕಳ್ಳತನಕ್ಕೆ ಕಸರತ್ತು ನಡೆಸುತ್ತಿರುವ ಸಿಸಿ ಕ್ಯಾಮೆರಾದ ದೃಶ್ಯಾವಳಿ ವೈರಲ್ ಆಗುತ್ತಿದೆ. ಈ ಕುರಿತು ಪ್ರಕರಣ ದಾಖಲಿಸಿಕೊಂಡ ಅಶೋಕ್ ನಗರ ಪೊಲೀಸರು, ಅನುಮಾನಾಸ್ಪದ ವ್ಯಕ್ತಿಗಳ ಪತ್ತೆಗೆ ಬಲೆ ಬೀಸಿದ್ದಾರೆ.

## ಜೇವರ್ಗಿ ತಾಲೂಕಿನ ಅನಧಿಕೃತ ಕ್ಲಿನಿಕ್ ಮೇಲೆ ಡಿ.ಎಚ್.ಓ ದಾಳಿ


ಕಲಬುರಗಿ,ಆ.26: ಜಿಲ್ಲೆಯ ಜೇವರ್ಗಿ ಪಟ್ಟಣ ಮತ್ತು ತಾಲೂಕಿನ ನೆಲೋಗಿ, ಸೊನ್ನಾ ಕ್ರಾಸ್ ಗ್ರಾಮದಲ್ಲಿನ ನಕಲಿ ವೈದ್ಯರ ಅನಧಿಕೃತ ಕ್ಲಿನಿಕ್ ಗಳ ಮೇಲೆ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ್ ನೇತೃತ್ವದ ಅಧಿಕಾರಿಗಳ ತಂಡ ಮಂಗಳವಾರ ದಾಳಿ ನಡೆಸಿತ್ತು.

ಯಾವುದೇ ಕಾರಣಕ್ಕೂ ಮುಂದೆ ಕ್ಲಿನಿಕ್ ಗಳನ್ನು ತೆರೆಯದಂತೆ ನಕಲಿ ವೈದ್ಯರಿಗೆ ಎಚ್ಚರಿಕೆ ನೀಡಿ ಕ್ಲಿನಿಕ್ ಗಳನ್ನು ಮುಚ್ಚಿಸಲಾಯಿತು. ಇಂದಿನ ಸೂಚನೆ ಹೊರತಾಗಿಯೂ ಕ್ಲಿನಿಕ್ ತೆರೆದಲ್ಲಿ 25 ಸಾವಿರ ರೂ. ದಂಡ ಮತ್ತು ಆಸ್ತಿ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ ಡಾ.ಶರಣಬಸಪ್ಪ ಕ್ಯಾತನಾಳ್ ಅವರು, ಈ ಕ್ಲಿನಿಕ್ ಗಳ ಮೇಲೆ ನಿಗಾ ಇರಿಸುವಂತೆ ಆರೋಗ್ಯ ನಿರೀಕ್ಷಕರು, ಸಮುದಾಯ ಆರೋಗ್ಯಾಧಿಕಾರಿ, ಆಶಾ ಕಾರ್ಯಕರ್ತೆ-ಯರಿಗೆ ಸೂಚನೆ ನೀಡಿದರು.

ದಾಳಿ ಸಮಯದಲ್ಲಿ ಜೇವರ್ಗಿ ತಾಲೂಕಾ ಆರೋಗ್ಯಾಧಿಕಾರಿ ಡಾ.ಉಮೇಶ ಶರ್ಮಾ,

ನೆಲೋಗಿ ಸಮುದಾಯದ ಅರೋಗ್ಯ ಕೇಂದ್ರದ ಆಡಳಿತ ವೈದ್ಯಧಿಕಾರಿ ಡಾ. ಬಸವರಾಜ ಕವಲಗಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶಾಮರಾವ್, ಸಿಬ್ಬಂದಿ ಆಕಾಶ್ ರೆಡ್ಡಿ ಸೇರಿದಂತೆ ಇನ್ನಿತರರು ಇದ್ದರು.

## ಭೂಕುಸಿತ; ಐವರು ಸಾವು : ಯಾತ್ರೆ ಸ್ಥಗಿತ



ಮಲ್ಲಮ್ಮನುಡಿ ವಾರ್ತೆ ಶ್ರೀನಗರ: ಅ.26: ತ್ರಿಕೂಟ ಬೆಟ್ಟಗಳ ಮೇಲಿರುವ ಮಾತಾ ವೈಷ್ಣೋದೇವಿ ದೇಗುಲಕ್ಕೆ ಹೋಗುವ ಮಾರ್ಗದಲ್ಲಿ ಭೂಕುಸಿತ ಸಂಭವಿಸಿ ಐವರು ಸಾವನ್ನಪ್ಪಿದ್ದು, 14 ಜನರು ಗಾಯಗೊಂಡಿದ್ದಾರೆ.

ಈ ಘಟನೆಯ ನಂತರ ಜಮ್ಮು ಮತ್ತು ಕಾಶ್ಮೀರದ ರಿಯಾಸಿ ಜಿಲ್ಲೆಯಲ್ಲಿರುವ ಈ ಪವಿತ್ರ ದೇವಾಲಯಕ್ಕೆ ತೀರ್ಥಯಾತ್ರೆಯನ್ನು ಸ್ಥಗಿತಗೊಳಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬೆಟ್ಟದತುದಿಯಲ್ಲಿರುವ ದೇವಾಲಯಕ್ಕೆ ಸುಮಾರು 12 ಕಿ.ಮೀ. ಪಾದಯಾತ್ರೆಯ ಅರ್ಧ ದಾರಿಯಲ್ಲೇ, ಮಧ್ಯಾಹ್ನ 3 ಗಂಟೆ ಸುಮಾರಿಗೆ ಭೂಕುಸಿತ ಸಂಭವಿಸಿದ ಅಧ್ಕ್ವರಿಯಲ್ಲಿರುವ ಇಂದರ್ಪ್ರಸ್ಥ ಭೋಜನಾಲಯದ ಬಳಿ ಬೃಹತ್ ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ.

ಹಿಮಕೋಟಿ ಚಾರಣ ಮಾರ್ಗದ ಯಾತ್ರೆಯನ್ನು ಈಗಾಗಲೇ ದಿನಪೂರ್ತಿ ಸ್ಥಗಿತಗೊಳಿಸಲಾಗಿತ್ತು. ಮಧ್ಯಾಹ್ನ 1:30 ರ ವರೆಗೆ ಯಾತ್ರಿಕರು ಹಳೆಯ ಮಾರ್ಗದಲ್ಲಿಯೇ ಮುಂದುವರಿದರು. ಆದರೆ, ಧಾರಾಕಾರ ಮಳೆಯಿಂದಾಗಿ ಅಧಿಕಾರಿಗಳು ಅದನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಿದರು.

ಜಮ್ಮು ಮತ್ತು ಕಾಶ್ಮೀರದ ಹಲವು ಭಾಗಗಳಲ್ಲಿ ಸತತ ಮೂರು ದಿನಗಳ ಭಾರೀ ಮಳೆಯಿಂದಾಗಿ ಅಪಾರ ಹಾನಿಯಾಗಿದೆ. ಇಂದು ಮುಂಜಾನೆ ದೋಡಾ ಜಿಲ್ಲೆಯಲ್ಲಿ ಮೇಘಸ್ಫೋಟಕ್ಕೆ ನಾಲ್ವರು ಸಾವನ್ನಪ್ಪಿದ್ದು, 24 ಗಂಟೆಗಳಲ್ಲಿ ಒಟ್ಟು ಸಾವುಗಳ ಸಂಖ್ಯೆ 9 ಕ್ಕೆ ತಲುಪಿದೆ. ಹಠಾತ್ ತೀವ್ರವಾದ ಮಳೆಯಿಂದಾಗಿ ದಿಢೀರ್ ಪ್ರವಾಹ ಉಂಟಾಗಿ, ಈ ಪ್ರದೇಶದಲ್ಲಿ 10 ಕ್ಕೂ ಹೆಚ್ಚು ಮನೆಗಳಿಗೆ ಹಾನಿಯಾಗಿದೆ.

## ವಿಧಾನಪರಿಷತ್'ಗೆ ನಾಮನಿರ್ದೇಶನ: ನಾಲ್ವರು ಎಂಎಲ್‌ಸಿ ಅಭ್ಯರ್ಥಿಗಳು ಹೆಸರು ಬದಲು

ಮಲ್ಲಮ್ಮನುಡಿವಾರ್ತೆ ಬೆಂಗಳೂರು: ರಾಜ್ಯದಲ್ಲಿ ಖಾಲಿ ಇರುವ ನಾಲ್ಕು ವಿಧಾನಪರಿಷತ್ ನಾಮನಿರ್ದೇಶಿತ ಸ್ಥಾನಗಳ ನೇಮಕಾತಿಗೆ ಕೊನೆಗೂ ಕಾಂಗ್ರೆಸ್ ಹೈಕಮಾಂಡ್ ಒಪ್ಪಿಗೆ ನೀಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಜಿ ಮಾಧ್ಯಮ ಸಲಹೆಗಾರ ದಿನೇಶ್ ಅಮೀನ್ ಮಟ್ಟು ಮತ್ತು ದಲಿತಸಂಘರ್ಷ ಸಮಿತಿ ನಾಯಕ ಡಿಜಿ ಸಾಗರ್ ಅವರನ್ನು ಪಟ್ಟಿಯಿಂದ ಕೈಬಿಡಲಾಗಿದ್ದು, ಬದಲಾಗಿ ಹೊಸ ಹೆಸರುಗಳನ್ನು ಸೇರ್ಪಡೆಗೊಳಿಸಲಾಗಿದೆ. ಕೆಪಿಸಿಸಿ ಮಾಧ್ಯಮ ಘಟಕದ ಅಧ್ಯಕ್ಷ ರಮೇಶ್ ಬಾಬು, ಅನಿವಾಸಿ

(2ನೇ ಪುಟ ನೋಡಿ)

## ಸಿಎಂ ಸಿದ್ದರಾಮಯ್ಯನವರಿಂದ ಮುಸ್ಲಿಂ ಓಲೈಕೆ ರಾಜಕಾರಣ : ಆರ್ ಅಶೋಕ್




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.26: ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಂದ ಮುಸ್ಲಿಂ ಧರ್ಮಿಯರನ್ನು ಓಲೈಸುವ ಕಾರ್ಯ ನಿರಂತರವಾಗಿ ಸಾಗಿದೆ .ಈ ಬಾರಿಯ ಮೈಸೂರಿನ ಚಾಮುಂಡೇಶ್ವರಿಯ ದಸರಾ ಉತ್ಸವಕ್ಕೆ ಇಸ್ಲಾಮಿಯರಿಂದ ಚಾಲನೆ ನೀಡಿಸುತ್ತಿರುವುದೇ ಇದಕ್ಕೆ ತಾಜಾ ಉದಾಹರಣೆಯಾಗಿದೆ ಎಂದು ಕರ್ನಾಟಕ ವಿರೋಧ ಪಕ್ಷದ ನಾಯಕ ಹಾಗೂ ಭಾರತೀಯ ಜನತಾ ಪಾರ್ಟಿಯ ಶಾಸಕ ಆರ್ ಅಶೋಕ್ ಹೇಳಿದರು.

ಖಾಸಗಿ ಕಾರ್ಯಕ್ರಮದ ನಿಮಿತ್ತ ಕೊಪ್ಪಳ ಜಿಲ್ಲಾ ಪ್ರವಾಸ ಕೈಗೊಂಡಿದ್ದ ಆರ್ ಅಶೋಕ್ ವರದಿಗಾರರನ್ನು ಉದ್ದೇಶಿಸಿ ಮಾತನಾಡುತ್ತಾ 2025 ರ ಮೈಸೂರು ದಸರಾ ಉತ್ಸವವನ್ನು ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಉದ್ಘಾಟಿಸಲಿದ್ದಾರೆ ಎಂದು ಕರ್ನಾಟಕ ಕರ್ನಾಟಕ ಸರ್ಕಾರ ಈಗಾಗಲೇ ಘೋಷಿಸಿಕೊಂಡಿದ್ದು, ದಸರಾ ಹಿಂದೂಗಳ ಹಬ್ಬ. ಇಸ್ಲಾಂನಲ್ಲಿ ವಿಗ್ರಹ ಪೂಜೆಯನ್ನು ನಿಷೇಧಿಸಲಾಗಿದೆ. ಬಾನು ಮುಷ್ತಾಕ್ ಹೀಗೆ ಮಾಡಿದರೆ ಆಕೆಯ ಧರ್ಮವನ್ನು ವಿರೋಧಿಸಲಾಗುತ್ತದೆ. ಹಿಂದೂಗಳನ್ನು ವಿರೋಧಿಸುವವರು ಚಾಮುಂಡೇಶ್ವರಿಯನ್ನು ಏಕೆ ಪೂಜಿಸಬೇಕು?

ಸಿದ್ದರಾಮಯ್ಯ ಸರ್ಕಾರ ನಮ್ಮ ಧರ್ಮವನ್ನು ಕಳಂಕಿತಗೊಳಿಸುತ್ತಿದೆ. ಅವರು

ಒಂದು ರೀತಿಯಲ್ಲಿ ಅದನ್ನು ಕಳಂಕಿತಗೊಳಿಸಲು ಪ್ರಯತ್ನಿಸುತ್ತಿದ್ದಾರೆ. ಸಿದ್ದರಾಮಯ್ಯ ಟಿಪ್ಪು ಮನಸ್ಥಿತಿಯನ್ನು ಹೊಂದಿದ್ದಾರೆ ಎಂಬುದನ್ನು ಈ ಸಂದರ್ಭ ಸಾಬೀತುಪಡಿಸುತ್ತಿದೆ ಎಂದು ಹೇಳಿದರು.

## ಆರ್‌ಎಸ್‌ಎಸ್ ಗೀತೆ:ಡಿಕೆಶಿ ಕ್ಷಮೆಯಾಚನೆ



ಮಲ್ಲಮ್ಮ ನುಡಿವಾರ್ತೆ

ಬೆಂಗಳೂರು:ಅ.26: ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಗೀತೆ ನಮಸ್ತೇ ಸದಾ ವತ್ಸಲೇ ಸಾಲುಗಳನ್ನು ವಿಧಾನಸಭೆ ಕಲಾಪದ ವೇಳೆ ಉಪ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಅಧ್ಯಕ್ಷ ಡಿ ಕೆ ಶಿವಕುಮಾರ್ ಪ್ರಸ್ತಾಪಿಸಿದ್ದರು.

ಅದು ಸಾಕಷ್ಟು ಸದ್ದು ಮಾಡಿ ಡಿ ಕೆ ಶಿವಕುಮಾರ್ ಅವರ ಮಾತುಗಳಿಗೆ ಸ್ವತಃ ಕಾಂಗ್ರೆಸ್ ನಾಯಕರೇ ಆಕ್ಷೇಪ ವ್ಯಕ್ತಪಡಿಸಿದ್ದರು. ಬಿಕೆ ಹರಿಪ್ರಸಾದ್ ಅವರು, ಕೆಪಿಸಿಸಿ ಅಧ್ಯಕ್ಷರಾಗಿ ಡಿಕೆ ಶಿವಕುಮಾರ್ ಆರ್‌ಎಸ್‌ಎಸ್ ಗೀತೆ ಹಾಡಿದ್ದರೆ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದ್ದರು. ಅದಕ್ಕೆ ಇಂದು ಸುದ್ದಿಗೋಷ್ಠಿ ನಡೆಸಿದ ಡಿ ಕೆ ಶಿವಕುಮಾರ್ ಸ್ಪಷ್ಟನೆ ನೀಡಿ ಕ್ಷಮೆ ಕೇಳಿದ್ದಾರೆ.

ನಾನು ಹುಟ್ಟಿದ್ದೇ ಕಾಂಗ್ರೆಸ್ಸಿಗನಾಗಿ. ನಾನು ಸಾಯುವುದೂ ಕಾಂಗ್ರೆಸ್ಸಿಗನಾಗಿಯೇ. ನನ್ನ ಪಕ್ಷ ನಿಷ್ಠೆಯನ್ನು ಪ್ರಶ್ನಿಸುವವರು ಮೂರ್ಖರು' ಎಂದು ಖಡಕ್ ತಿರುಗೇಟು ನೀಡಿದರು. ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಅವರಿಗೆ ಉತ್ತರ ನೀಡುವಾಗ, ಆರ್ ಎಸ್ ಎಸ್ ಸಿದ್ಧಾಂತದ ಅರಿವಿದೆ ಎಂದು ಕಾಲೆಳೆದೆ ಅಷ್ಟೆ. ಅದು ಬಿಟ್ಟರೆ ಇನ್ನೇನಿಲ್ಲ ಎಂದರು.

ವಿಧಾನಸಭೆಯಲ್ಲಿ ಆಚಾರ ವಿಚಾರಗಳನ್ನು ಪಾಲನೆ ಮಾಡಿಕೊಂಡು ಬಂದಿದ್ದೇನೆ. ವಿದ್ಯಾರ್ಥಿ ಸಂಘಟನೆಯಲ್ಲಿಂದಲೇ ಗುರುತಿಸಿಕೊಂಡು ಬಂದಿದ್ದೇನೆ. ಹೊಸದಾಗಿ ಕಾಂಗ್ರೆಸ್ ಸೇರಿಲ್ಲ, ಯಾರ ಪಾಠವೂ ಅಗತ್ಯವಿಲ್ಲ.

(2ನೇ ಪುಟ ನೋಡಿ)

## ಭಾರತದ ಮೇಲೆ ಶೇ.50ರಷ್ಟು ಸುಂಕ ಅಮೆರಿಕದಿಂದ ಅಧಿಸೂಚನೆ




ಮಲ್ಲಮ್ಮ ನುಡಿವಾರ್ತೆ

ನವದೆಹಲಿ:ಅ.26: ಭಾರತದ ಸರಕುಗಳ ಮೇಲಿನ ಆಮದು ಸುಂಕವನ್ನು ಶೇ. 50 ಹೆಚ್ಚಿಸುವುದಾಗಿ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕಳೆದ ತಿಂಗಳು ಘೋಷಿಸಿದ್ದರು. ಅದರಂತೆ, ಭಾರತದಿಂದ ಆಮದು ಮಾಡಿಕೊಳ್ಳುವ ಉತ್ಪನ್ನಗಳ ಮೇಲೆ ಹೆಚ್ಚುವರಿ ಸುಂಕಗಳನ್ನು ಜಾರಿಗೆ ತರುವ ಕುರಿತು ಅಮೆರಿಕದ ಕಸ್ಟಮ್ಸ್ ಮತ್ತು ಗಡಿ ರಕ್ಷಣೆ ಕರಡು ಅಧಿಸೂಚನೆ ಹೊರಡಿಸಿದೆ. 'ರಷ್ಯನ್ ಒಕ್ಕೂಟದ ಸರ್ಕಾರದಿಂದ ಯುನೈಟೆಡ್ ಸ್ಟೇಟ್ಸ್‌ಗೆ

(2ನೇ ಪುಟ ನೋಡಿ)

## ಶಿವಪುರ ಗಣೇಶ ದೇವಸ್ಥಾನದ ಅಭಿವೃದ್ಧಿಗೆ ರಾಜಶೇಖರ ಪಾಟೀಲ ರವರ ಕೊಡುಗೆ ಅಪಾರ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್. ಇಂದು ಗಣೇಶನ ಹಬ್ಬದ ಸಂಭ್ರಮದಿಂದ ಆಚರಣೆ ಮಾಡಲಾಗುತ್ತಿದೆ. ಮಾಜಿ ಸಚಿವ ರಾಜಶೇಖರ ಪಾಟೀಲ ರವರು ಕೊಳಚೆ ಪ್ರದೇಶವಾದ ಶಿವಪುರ ಬಡಾವಣೆಯಲ್ಲಿ ಗಣೇಶ ದೇವಸ್ಥಾನ ವನ್ನೇ ನಿರ್ಮಾಣ ಮಾಡಿಸುವುದರ ಮೂಲಕ ಭಕ್ತರ ಮನವನ್ನು ಗೆದ್ದಿದ್ದಾರೆ. ಪ್ರತಿ ವರ್ಷ ಶಿವಪುರ ಗಣೇಶ ದೇವಸ್ಥಾನ ಕ್ಕೆ ಅಗಮಿಸಿ ದರುಶನ ಪಡೆದು ಭಕ್ತರಿಗೆ ಪ್ರಸಾದ ವಿತರಣೆ ಮಾಡುವುದರರ ಮೂಲಕ



ಅತಿ ಸರಳ ರಾಜಕಾರಣಿ ಎಂದು ಬಿಂಬಿಸಲಾಗುತ್ತಿದೆ. ರಾಜಶೇಖರ ಪಾಟೀಲ ರವರು ಕ್ಷೇತ್ರದ ಅಭಿವೃದ್ಧಿ ಮಾಡುವುದು ಅಲ್ಲದೆ ಎಲ್ಲಾ ಸಮಾಜದವರನ್ನು ಒಟ್ಟಿಗೆ ತೆಗೆದುಕೊಂಡು ಹೋಗುವುದರ ಮೂಲಕ ಪ್ರಮಾಣಿಕ ರಾಜ-ಕಾರಣಿ ಅವರಾಗಿದ್ದಾರೆ. ಎಂದು ಭಕ್ತರ ಅನಿಸಿಕೆಯಾಗಿದೆ. ಹಾಗಾಗಿ ಮುಂಬರುವ ದಿನಗಳಲ್ಲಿ ರಾಜಶೇಖರ ಪಾಟೀಲ ರವರು ಉತ್ತಮ ಅಧಿಕಾರ ಹೊಂದಲಿದ್ದಾರೆ ಭಗವಂತ ಅವರಿಗೆ ಆದಷ್ಟು ಬೇಗ ಉನ್ನತವಾದ ಅಧಿಕಾರ ನೀಡಲಿ ಎಂಬ ಆಶಯ ದೇವಸ್ಥಾನ ಅಡಳಿತ ಮಂಡಳುಯದಾಗಿದೆ.

## ಆ.29ರಿಂದ ಸೆ.1ರವರೆಗೆ ಮೋದಿ ಜಪಾನ್, ಚೀನಾ ಪ್ರವಾಸ

ನವದೆಹಲಿ:ಅ.26: ಪ್ರಧಾನಿ ನರೇಂದ್ರ ಮೋದಿ ಅವರು ಆ.29ರಿಂದ ಸೆ.1ರವರೆಗೆ ಜಪಾನ್ ಮತ್ತು ಚೀನಾಕ್ಕೆ ಭೇಟಿ ನೀಡಲಿದ್ದಾರೆ. ಶುಕ್ರವಾರದಿಂದ (ಆ.28) ಪ್ರಾರಂಭವಾಗುವ ಪ್ರಧಾನಿ ಮೋದಿಯವರ ಈ ವಿದೇಶ ಪ್ರವಾಸದಲ್ಲಿ ಇಂಡೋ-ಪೆಸಿಫಿಕ್ ಪ್ರದೇಶ, ಅದರಾಚೆಗೆ ಶಾಂತಿ, ಸಮೃದ್ಧಿ ಮತ್ತು ಸ್ಥಿರತೆಯ ಬಗ್ಗೆ ಚರ್ಚೆ ನಡೆಯಲಿದೆ.

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ಎಂಎಲ್‌ಸಿ ಅಭ್ಯರ್ಥಿಗಳು ಹೆಸರು ಬದಲು

ಭಾರತೀಯ ಕೋಶದ (ಎನ್‌ಆರ್‌ಐ) ಉಪಾಧ್ಯಕ್ಷೆ ಆರತಿ ಕೃಷ್ಣ; ಹಿರಿಯ ಪತ್ರಕರ್ತ ಮತ್ತು 'ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್' ನ ಮೈಸೂರು ಬ್ಯೂರೋ ಮುಖ್ಯಸ್ಥ ಕೆ ಶಿವಕುಮಾರ್ ಮತ್ತು ಹುಬ್ಬಳ್ಳಿ–ಧಾರವಾಡ ಕಾಂಗ್ರೆಸ್ ಮುಖಂಡ, ಅಂಬೇಡ್ಕರ್ ಫೌಂಡೇಶನ್‌ನ ಉಪಾಧ್ಯಕ್ಷ ಎಫ್‌ಎಚ್ ಜಕಪ್ಪನವರ್ ಅವರನ್ನು ನಾಮನಿರ್ದೇಶನ ಮಾಡಲು ತೀರ್ಮಾನಿಸಲಾಗಿದೆ.

ನಾಮನಿರ್ದೇಶನ ಕುರಿತು ಪ್ರತಿಕ್ರಿಯೆ ನೀಡಿರುವ ಕೆಪಿಸಿಸಿ ಅಧ್ಯಕ್ಷ ಮತ್ತು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು, 'ಅಧಿಕೃತ ಪಟ್ಟಿಗಾಗಿ ಕಾಯುತ್ತಿದ್ದೇನೆ" ಎಂದು ಹೇಳಿದ್ದಾರೆ.

ಈಗಾಗಲೇ ಪಟ್ಟಿಯನ್ನು ರಾಜ್ಯಪಾಲರ ಕಚೇರಿಗೆ ರವಾನಿಸಲಾಗಿದೆ ಎಂದು ಮುಖ್ಯಮಂತ್ರಿ ಕಚೇರಿಯ ಮೂಲಗಳು ದೃಢಪಡಿಸಿವೆ.

ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಪಟ್ಟಿಗೆ ಅನುಮೋದನೆ ನೀಡಿದ ಬಳಿಕ ನಾಲ್ವರೂ ಎಂಎಲ್‌ಸಿಗಳಾಗಿ ಪ್ರಮಾಣ ವಚನ ಸ್ವೀಕರಿಸುತ್ತಾರೆ.

ಇದರೊಂದಿಗೆ, 75 ಸದಸ್ಯರ ಮೇಲ್ಮನೆಯಲ್ಲಿ ಕಾಂಗ್ರೆಸ್ ಬಹುಮತವನ್ನು ಪಡೆಯುತ್ತದೆ. ಡಿಸೆಂಬರ್ ವೇಳೆಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳೆರಡನ್ನೂ ಪಡೆಯಲು ಅವರು ಅರ್ಜಿ ಸಲ್ಲಿಸಬಹುದು.

ಸರ್ಕಾರದಿಂದ ನಾಮನಿರ್ದೇಶನಗೊಂಡಿದ್ದ ಸದಸ್ಯರ ಪೈಕಿ ಯುಬಿ.ವೆಂಕಟೇಶ್, ಪ್ರಕಾಶ್ ರಾಥೋಡ್, ಸಿಪಿ.ಯೋಗೇಶ್ವರ್ (ರಾಜೀನಾಮೆ) ಹಾಗೂ ತಿಪ್ಪೇಸ್ವಾಮಿ ಅವರು ಅವಧಿ ಜನವರಿ ವೇಳೆಗೆ ಮುಕ್ತಾಯಗೊಂಡಿತ್ತು. ಖಾಲಿಯಾದ ನಾಲ್ಕು ಸ್ಥಾನಗಳಿಗೆ ಇದೀಗ ನಾಮನಿರ್ದೇಶನ ಮಾಡಲಾಗುತ್ತಿದೆ.

ನಾಮನಿರ್ದೇಶನಗೊಳ್ಳುವ ನಾಲ್ವರ ಪೈಕಿ ಮೂವರು ಪೂರ್ಣ ಅವಧಿಯನ್ನು ಹೊಂದಿದ್ದರೆ, ಒಬ್ಬರು ಉಳಿದಿರುವ 11 ತಿಂಗಳುಗಳವರೆಗೆ ಮಾತ್ರ ಸೇವೆ ಸಲ್ಲಿಸುತ್ತಾರೆಂದು ತಿಳಿದುಬಂದಿದೆ.

ಜೂನ್ 2026 ರಲ್ಲಿ ಏಳು ಎಂಎಲ್‌ಸಿ ಸ್ಥಾನಗಳು ಖಾಲಿಯಾದಾಗ.ಅಲ್ಪಾವಧಿಯ ಹೊಂದಿರುವ ರಮೇಶ್ ಬಾಬು ಅವರನ್ನು ಮುಂದಿನ ಪೂರ್ಣ ಆರು ವರ್ಷಗಳ ಅವಧಿಗೆ ಮರು ನಾಮನಿರ್ದೇಶನ ಮಾಡಬಹುದು ಎಂದು ಮೂಲಗಳು ತಿಳಿಸಿವೆ,

## ಗೀತೆ:ಡಿಕೆಶಿ ಕ್ಷಮೆಯಾಚನೆ

ನನಗೂ ಗಾಂಧಿ ಕುಟುಂಬಕ್ಕೂ ಭಕ್ತ ಭಗವಂತನ ನಡುವಿರುವ ಸಂಬಂಧ. ನಾನು ಎಂಎ ಪೊಲಿಟಿಕಲ್ ವಿದ್ಯಾರ್ಥಿ.ರಾಜಕಾರಣಕ್ಕೆ ಬರೋದಕ್ಕಿಂತಲೂ ಮುನ್ನ ಎಲ್ಲಾ ಪಕ್ಷಗಳ ಅಧ್ಯಯನ ಮಾಡಿದ್ದೇನೆ. ಕಮ್ಯೂನಿಸಂ, ಬಿಜೆಪಿ, ಆರ್‌ಎಸ್‌ಎಸ್, ದಳ ಎಲ್ಲ ಪಕ್ಷಗಳ ಬಗ್ಗೆ ತಿಳಿದಿದ್ದೇನೆ. ಮುಸ್ಲಿಂ ಲೀಗ್ ಸಮಾವೇಶದಲ್ಲೂ ಭಾಗಿಯಾಗಿದ್ದೆ. ಅವರ ಶಿಸ್ತಿಗೆ ಬೆರಗಾಗಿದ್ದೆ. ನನ್ನ ಮಾತು ಯಾರಿಗಾದರೂ ನೋವಾಗಿದ್ದರೆ ಬೇಕಾದರೆ ಕ್ಷಮೆ ಕೇಳೋಣ. ಬಿಕೆ ಹರಿಪ್ರಸಾದ್‌ಗೂ ಕ್ಷಮೆ ಕೇಳೋಣ ಎಂದರು.

ನಾನು ಕಾಂಗ್ರೆಸ್ ಪಕ್ಷದಲ್ಲಿದ್ದೇನೆ ನಿಜ. ಹಾಗೆಂದು ನನ್ನ ಧರ್ಮ ನಾನು ಬಿಡಲ್ಲ. ನನ್ನ ಧರ್ಮದ ಜತೆಗೆ ಇತರ ಧರ್ಮಗಳ ಬಗ್ಗೆಯೂ ನನಗೆ ನಂಬಿಕೆ ಇದೆ. ಮುಸ್ಲಿಂ, ಕ್ರಿಶ್ಚಿಯನ್ ಇತರ ಧರ್ಮಗಳ ಬಗ್ಗೆಯೂ ಗೌರವ ಇದೆ. ಆದರೆ, ಇವೆಲ್ಲದಕ್ಕಿಂತಲೂ ಮಾನವ ಧರ್ಮದ ಮೇಲೆ ನಾನು ಹೆಚ್ಚು ನಂಬಿಕೆ ಇಟ್ಟಿದ್ದೇನೆ ಎಂದು ಹೇಳಿದರು.

ಯಾರಿಗೇ ಆಗಲಿ ನನ್ನಿಂದ ನೋವಾಗಿದ್ದರೆ ಕ್ಷಮೆ ಕೇಳಲು ಸಿದ್ಧ. ಎಲ್ಲರ ಬಳಿಯೂ ಕ್ಷಮೆ ಕೇಳುತ್ತೇನೆ. ಆದರೆ, ಒಂದು ವಿಚಾರ ಸ್ಪಷ್ಟ ಇರಲಿ. ಯಾರೂ ನನ್ನನ್ನು ಪ್ರಶ್ನೆ ಮಾಡಿಲ್ಲ. ಹೈಕಮಾಂಡ್ ಕೂಡ ಕೇಳಿಲ್ಲ. ಈ ವಿಚಾರ ಇಲ್ಲಿಗೆ ಮುಗಿಸೋಣ. ನನ್ನ ಮತ್ತು ಕಾಂಗ್ರೆಸ್ ಸಂಬಂಧ ಭಕ್ತ ಮತ್ತು ಭಗವಂತನ ಸಂಬಂಧದಂತೆ ಎಂದು ಡಿಕೆ ಶಿವಕುಮಾರ್ ಸ್ಪಷ್ಟಪಡಿಸಿದರು.

## ಮೋದಿ ಜಪಾನ್, ಚೀನಾ ಪ್ರವಾಸ

ಪ್ರಧಾನಿ ಭೇಟಿಯ ಕುರಿತು ಮಾಹಿತಿ ನೀಡಿರುವ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ, ಪ್ರಧಾನಿ ಮೋದಿಯವರು ಆ.28ರ ಸಂಜೆ ಜಪಾನ್‌ಗೆ ಅಧಿಕೃತ ಭೇಟಿ ನೀಡಲಿದ್ದಾರೆ. ಆ.29 ಮತ್ತು 30ರಂದು ಜಪಾನ್ ಪ್ರಧಾನಿ ಶಿಗೇರು ಇಶಿಬಾ ಅವರೊಂದಿಗೆ 15ನೇ ಭಾರತ–ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಇದು ಹಲವು ಕಾರಣಗಳಿಗಾಗಿ ಪ್ರಮುಖ ಭೇಟಿಯಾಗಿದೆ. ಪ್ರಧಾನಿ ಮೋದಿಯವರು ಹಾಗೂ ಪ್ರಧಾನಿ ಇಶಿಬಾ ಅವರೊಂದಿಗೆ ನಡೆಸುತ್ತಿರುವ ಮೊದಲ ವಾರ್ಷಿಕ ಶೃಂಗಸಭೆ ಇದಾಗಿದೆ. ಸುಮಾರು 7 ವರ್ಷಗಳಲ್ಲಿ ಜಪಾನ್ ಜೊತೆಗಿನ ಮೊದಲ ಏಕವ್ಯಕ್ತಿ ಭೇಟಿಯಾಗಿದೆ. ಅವರು ಕೊನೆಯ ಬಾರಿಗೆ 2018ರಲ್ಲಿ ವಾರ್ಷಿಕ ಶೃಂಗಸಭೆಗಾಗಿ ಜಪಾನ್‌ಗೆ ಭೇಟಿ ನೀಡಿದ್ದರು. 2014ರಲ್ಲಿ ಅಧಿಕಾರ ವಹಿಸಿಕೊಂಡ ನಂತರ ಜಪಾನ್‌ಗೆ ಪ್ರಧಾನಿ ಮೋದಿಯವರ ಎಂಟನೇ ಭೇಟಿಯಾಗಿದೆ. ಇದೇ ವೇಳೆ ಜಪಾನ್‌ನ ಇತರ ಹಲವಾರು ರಾಜಕೀಯ ನಾಯಕರೊಂದಿಗೆ ಪ್ರಧಾನಿ ಮೋದಿ ಸಂವಾದವನ್ನೂ ನಡೆಸಲಿದ್ದಾರೆ. ಈ ಸಂವಾದಗಳು ಎರಡೂ ದೇಶಗಳ ನಡುವಿನ ಪ್ರಮುಖ ವ್ಯಾಪಾರ, ಹೂಡಿಕೆ ಮತ್ತು ತಂತ್ರಜ್ಞಾನ ಸಂಬಂಧಗಳನ್ನು ಗಾಢವಾಗಿಸುವ ಗುರಿಯನ್ನು ಹೊಂದಿವೆ.

ಪ್ರಧಾನಿ ಮೋದಿ ಆ.31 ಮತ್ತು ಸೆ.1ರಂದು ಶಾಂಘೈ ಸಹಕಾರ ಮಂಡಳಿ ರಾಷ್ಟ್ರಗಳ ಮುಖ್ಯಸ್ಥರ ಮಂಡಳಿಯ 25ನೇ ಸಭೆಗಾಗಿ ಚೀನಾದ ಟಿಯಾಂಜಿನ್‌ಗೆ ಭೇಟಿ ನೀಡಲಿದ್ದಾರೆ. ಚೀನಾದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರ ಆಹ್ವಾನದ ಮೇರೆಗೆ ಮೋದಿ ಸಭೆಯಲ್ಲಿ ಭಾಗಿಯಾಗುತ್ತಿದ್ದಾರೆ. ಖಅಔ ದಲ್ಲಿ ಭಾರತವನ್ನು ಹೊರತುಪಡಿಸಿ 10 ಸದಸ್ಯರನ್ನು ಹೊಂದಿದೆ. ಬೆಲಾರಸ್, ಚೀನಾ, ಇರಾನ್, ಕಝಾಕಿಸ್ತಾನ್, ಕಿರ್ಗಿಸ್ತಾನ್, ಪಾಕಿಸ್ತಾನ, ರಷ್ಯಾ, ತಜಿಕಿಸ್ತಾನ್ ಮತ್ತು ಉಜ್ಬೇಕಿಸ್ತಾನ್ ಇದರಲ್ಲಿ ಸೇರಿವೆ.

ಟಿಯಾಂಜಿನ್‌ನಲ್ಲಿ ನಡೆಯಲಿರುವ ಮುಂಬರುವ 25ನೇ ಖಅಔ ಶೃಂಗಸಭೆಯ ಕಾರ್ಯಕ್ರಮವು ಆ.31ರ ಸಂಜೆ ಸ್ವಾಗತ ಔತಣಕೂಟವನ್ನು ಒಳಗೊಂಡಿದೆ ಮತ್ತು ಮುಖ್ಯ ಶೃಂಗಸಭೆಯು ಸೆ.1ರಂದು ನಡೆಯಲಿದೆ. ಖಅಔ ಶೃಂಗಸಭೆಯ ಸಮಯದಲ್ಲಿ ಪ್ರಧಾನಿ ಕೆಲವು ದ್ವಿಪಕ್ಷೀಯ ಸಭೆಗಳನ್ನು ನಡೆಸುವ ನಿರೀಕ್ಷೆಯಿದೆ.

## ಅಮೆರಿಕದಿಂದ ಅಧಿಸೂಚನೆ

ಇರುವ ಬೆದರಿಕೆ ಪರಿಹರಿಸುವುದು' ಎಂಬ ಶೀರ್ಷಿಕೆಯ ಪತ್ರಕ್ಕೆ ಆ.6 ರಂದು ಟ್ರಂಪ್ ಸಹಿ ಹಾಕಿದ್ದರು. ಈ ಆದೇಶ ಜಾರಿಗೆ ತರಲು ಹೆಚ್ಚುವರಿ ಸುಂಕಗಳನ್ನು ವಿಧಿಸಲಾಗುತ್ತಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಅಧಿಸೂಚನೆಯು ಭಾರತದ ಆಮದಿನ ಮೇಲೆ ಹೊಸ ಸುಂಕ ದರವನ್ನು ನಿಗದಿಪಡಿಸಲಾಗುತ್ತದೆ.

ಆ.27ರ ಮಧ್ಯರಾತ್ರಿಯಿಂದ ಈ ನಿಯಮ ಜಾರಿಗೆ ಬರಲಿದೆ. ಟ್ರಂಪ್ ಅವರ ಕಾರ್ಯಕಾರಿ ಆದೇಶಕ್ಕೆ ಅನುಗುಣವಾಗಿ ಅಮೆರಿಕದ ಹಾರ್ಮೋನೈಸ್ಡ್ ಟ್ಯಾರಿಫ್ ವೇಳಾಪಟ್ಟಿಯನ್ನು ಮಾರ್ಪಡಿಸುವುದು ಅಗತ್ಯವೆಂದು ಅಲ್ಲಿನ ಅಧಿಕಾರಿಗಳು ಹೇಳಿದ್ದಾರೆ.

ಜುಲೈ 30 ರಂದು, ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತದ ಮೇಲೆ ಹೆಚ್ಚುವರಿಯಾಗಿ ಶೇ.25 ರಷ್ಟು ಸುಂಕ ಘೋಷಿಸಿದ್ದರು. ಹೆಚ್ಚುವರಿ ಸುಂಕದಿಂದ ಭಾರತದ ಮೇಲೆ ಹಲವು ಪರಿಣಾಮ ಬೀರಲಿವೆ. 2024ರಲ್ಲಿ ಅಮೆರಿಕವು ಭಾರತಕ್ಕೆ ಪ್ರಮುಖ ರಫ್ತು ತಾಣವಾಗಿದ್ದು, 87.3 ಶತಕೋಟಿ ಡಾಲರ್ ಮೌಲ್ಯದ ಸರಕುಗಳನ್ನು ಕಳಿಸಿಕೊಟ್ಟಿತ್ತು. ಅಮೆರಿಕಕ್ಕೆ ಆಮದಾಗುವ ಭಾರತದ ಸರಕುಗಳ ಮೇಲೆ ವಿಧಿಸಿರುವ ಶೇ.50 ಸುಂಕವು ಆ. 27ರಿಂದ ಜಾರಿಯಾಗಲಿದ್ದು, ಇದು ಭಾರತದ ಆರ್ಥಿಕತೆ ಮೇಲೆ ಹೊಡೆತ ಬೀಳಲಿದೆ ಅನ್ನೋದು ತಜ್ಞರ ಅಭಿಪ್ರಾಯವಾಗಿದೆ.

## ಜಿಲ್ಲಾಧಿಕಾರಿಗಳಿಂದ ಜೇವರ್ಗಿ ತಾಲೂಕು ಕಂದಾಯ ಇಲಾಖೆ ಪ್ರಗತಿ ಪರಿಶೀಲನೆ



ಕಲಬುರಗಿ,ಆ.26: ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಮಂಗಳವಾರ ಜೇವರ್ಗಿ ತಾಲೂಕಿಗೆ ಭೇಟಿ ನೀಡಿ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿದರು.

ಪ್ರಸ್ತುತ ಮಳೆಗಾಲ ಇರುವುದರಿಂದ ತಾಲೂಕಿನ ಭೀಮಾ ನದಿಗೆ ಹೆಚ್ಚಿನ ನೀರು ಬಂದಲ್ಲಿ ನದಿ ದಂಡೆಯ ಗ್ರಾಮದಲ್ಲಿ ಹೆಚ್ಚಿನ ಹಾನಿಯಾಗುವ ಸಾಧ್ಯತೆ ಇರುವುದರಿಂದ ಪ್ರವಾಹ ಪರಿಸ್ಥಿತಿ ಅನುಗುಣವಾಗಿ ಕೆಲಸ ನಿರ್ವಹಿಸಲು ಈಗಿನಿಂದಲೆ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಬೇಕು ಎಂದರು.

ಆಗಸ್ಟ್ ಎರಡನೇ ವಾರದಲ್ಲಿನ ಸತತ ಮಳೆಯಿಂದ ಹಾಳಾಗಿರುವ ಬೆಳೆ ಹಾನಿ ಸಮೀಕ್ಷೆ ಕೈಗೊಂಡು ನಿಖರ ವರದಿ ಸಲ್ಲಿಸಬೇಕೆಂದ ಜಿಲ್ಲಾಧಿಕಾರಿಗಳು, ಅಧಿಕಾರಿ–ಸಿಬ್ಬಂದಿಗಳು ಕೇಂದ್ರಸ್ಥಾನದಲ್ಲಿದ್ದು, ನೆರೆ ಹಾವಳಿ ಕೆಲಸ ಕಾರ್ಯಗಳನ್ನು ಪ್ರಥಮಾದ್ಯತೆ ಮೇಲೆ ಮಾಡುವಂತೆ ಸೂಚಿಸಿದರು.

ಇದಕ್ಕು ಮುನ್ನ ಮಾರ್ಗ ಮಧ್ಯೆ ಕೋಟನೂರ(ಡಿ)ಗ್ರಾಮದಲ್ಲಿಕೃಷಿಯೇತರ ಭೂಮಿ ಪರಿವರ್ತನೆಯ ಪ್ರಸ್ತಾವನೆಯ ಜಮೀನು ಪರಿಶೀಲಿಸಿದರು. ಇದಲ್ಲದೆ ಫರತಾಬಾದ ಗ್ರಾಮದಲ್ಲಿ ಸಿ.ಎಲ್.7 ಮದ್ಯದಲೈಸೆನ್ಸ್‌ಮಂಜೂರಾತಿ ನೀಡುವ ಸಂಬಂಧ ಸ್ಥಳ ಪರಿಶೀಲಿಸಿದರು.

ಕಲಬುರಗಿ ಉಪ ವಿಭಾಗದ ಸಹಾಯಕ ಆಯುಕ್ತೆ ಸಾಹಿತ್ಯ, ಕಲಬುರಗಿ ತಹಶೀಲ್ದಾರ ಕೆ.ಆನಂದಶೀಲ, ಜೇವರ್ಗಿ ತಹಶೀಲ್ದಾರ ಮಲ್ಲಣ್ಣ ಯಲಗೂಂಡ ಸೇರಿದಂತೆ ಇತರೆ ಅಧಿಕಾರಿ–ಸಿಬ್ಬಂದಿಗಳಿದ್ದರು.

## ವಿದ್ಯಾರ್ಥಿಗಳಲ್ಲಿ ಶಿಸ್ತು ಸಮಯಪ್ರಜ್ಞೆ ಅಗತ್ಯ: ಶಿವಶರಣಪ್ಪ ಮೂಳೆಗಾಂವ್



ಕಲಬುರಗಿ:ಅ.26: ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು ,ಸಮಯಪ್ರಜ್ಞೆ ,ವಿನಯತೆ ಜೊತೆಗೆ ಸೇವಾ ಮನೋಭಾವ ಬೆಳೆಸಿಕೊಳ್ಳಬೇಕೆಂದು ನಿವೃತ್ತ ಜಂಟಿ ನಿರ್ದೇಶಕರಾದ ಶಿವಶರಣಪ್ಪ ಮೂಳೆಗಾಂವ್ ಹೇಳಿದರು.ನಗರದ ಸತ್ಯಂ ಪದವಿ ಪೂರ್ವ ಕಾಲೇಜಿನ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ದ್ವಿತೀಯ ವರ್ಷದ ವಿದ್ಯಾರ್ಥಿಗಳ ವತಿಯಿಂದ ಸ್ವಾಗತ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳು ಪಠ್ಯ ಚಟುವಟಿಕೆಯೊಂದಿಗೆ ಸಹ ಪಠ್ಯ ಚಟುವಟಿಕೆಗಳಲ್ಲಿ ಭಾಗವಹಿಸಬೇಕು ವಿದ್ಯಾರ್ಥಿಗಳು ಮೊಬೈಲ್ ಗೀಳಿನಿಂದ ಹೊರಬರಬೇಕು. ಓದು ಬರಹ ಪ್ರಾಮಾಣಿಕತೆಯಿಂದ ಮಾಡಿದರೆ ಜೀವನದಲ್ಲಿ ಸಾರ್ಥಕತೆ ಪಡೆಯಬಹುದು ಎಂದು ಶಿವಶರಣಪ್ಪ ಮೂಳೆಗಾಂವ್ ಕರೆಕೊಟ್ಟರು.ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ ಮಾಜಿ ರಂಗಾಯಣದ ನಿರ್ದೇಶಕರಾದ ಪ್ರಭಾಕರ್ ಜೋಶಿ ಮಾತನಾಡಿ ವಿದ್ಯಾರ್ಥಿಗಳು ಹೆಚ್ಚಿನ ಸಮಯವನ್ನು ಓದಿನಲ್ಲಿ ಕೊಡಬೇಕು ಶಿಕ್ಷಕರ ಹೇಳಿದ ವಿಷಯವನ್ನು ಸರಿಯಾದ ರೀತಿಯಿಂದ ಆಲಿಸಬೇಕು ಪ್ರತಿಯೊಂದು ವಿಷಯವನ್ನು ಓದಿ ಮನನ ಮಾಡಿಕೊಳ್ಳಬೇಕು ಹೆಚ್ಚಿನ ಅಂಕಗಳನ್ನು ಪಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಸತ್ಯಂ ಪಿಯು ಕಾಲೇಜಿನ ಪ್ರಾಂಶುಪಾಲ ಬಿ.ಎಚ್.ನಿರಗುಡಿಯವರು ಮಾತನಾಡಿ ವಿದ್ಯಾರ್ಥಿಗಳು ಪ್ರತಿನಿತ್ಯ ತರಗತಿಗಳಿಗೆ ಹಾಜರಾಗಿ ಉಪನ್ಯಾಸಕರು ಹೇಳಿದ ವಿಷಯವನ್ನು ಮನನ ಮಾಡಿಕೊಂಡು ಓದಿನಲ್ಲಿ ಯಶಸ್ವಿ ಪಡೆದುಕೊಳ್ಳಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಉಪನ್ಯಾಸಕರಾದ ಸಂತೋಷ ಪಿಳ್ಳೆ, ಮಹೇಶ್ ಗಡಗಿ, ಡಾ. ಸುಲೋಚನಾ ಅಂಕಲಗಿ, ರೂಪಾ ಕುಲಕರ್ಣಿ, ನಿರ್ಮಲಾ ಜಾವಳಿ, ರಾಜೆಶ್ರೀ ಸಾಲಿಮಠ. ವಿಶ್ವಜ್ಯೋತಿ ಮಠ, ಕಾಶಿನಾಥ ಪಂಚಾಳ ಅನೇಕರು ಉಪಸ್ಥಿತರಿದ್ದರು.

CHANGE OF NAME

I Mohammed Moizuddin S/o Mohammed Moinuddin R/o Nirna. Dist:Bidar. Have Changed My Name Moizuddin S/o Mohammed Moinuddin R/o Nirna Dist:Bidar. Vide Affidavit Dated:26-08-2025 Sworm befor Notary by Pandurang K. Nimbekar

## ರಾಯಚೂರು ಜಿಲ್ಲೆಯಲ್ಲಿ ಉಪ ಲೋಕಾಯುಕ್ತರ ಪ್ರವಾಸ: ಸುವ್ಯವಸ್ಥಿತ ಪ್ರಚಾರಕ್ಕೆ ವ್ಯವಸ್ಥೆ

ರಾಯಚೂರು ಆ 26: ಗೌರವಾನ್ವಿತ ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ಆಗಸ್ಟ್ 28 ರಿಂದ ಆಗಸ್ಟ್ 30ರವರೆಗೆ ರಾಯಚೂರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡ ಹಿನ್ನೆಲೆಯಲ್ಲಿ ಜಿಲ್ಲಾಡಳಿತವು ಮಹಾನಗರ ಪಾಲಿಕೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಪ್ರಚಾರ ಕಾರ್ಯವನ್ನು ಅಚ್ಚುಕಟ್ಟಾಗಿ ನಡೆಸುತ್ತಿದೆ.ಉಪಲೋಕಾಯುಕ್ತರಾದ ಬಿ.ವೀರಪ್ಪ ಅವರು ಆಗಸ್ಟ್ 28 ರಿಂದ 30ರವರೆಗೆ ಸಾರ್ವಜನಿಕ ಅಹವಾಲು, ಕುಂದುಕೊರತೆ, ದೂರು ವಿಚಾರಣೆ ಹಾಗೂ ಬಾಕಿ ಇರುವ ಪ್ರಕರಣಗಳ ವಿಲೇವಾರಿ ಕಾರ್ಯಕ್ರಮಕ್ಕೆ ಸರ್ವರಿಗೂ ಸ್ವಾಗತ ಎನ್ನುವ ಬ್ಯಾನರ್‌ನ್ನು ರಾಯಚೂರ ಸಿಟಿ ಸೇರಿದಂತೆ ಜಿಲ್ಲೆಯಾದ್ಯಂತ ವಿವಿಧ ಜನನಿಬಿಡ ಸ್ಥಳಗಳಲ್ಲಿ ಅವಳಡಿಸಿ ವ್ಯಾಪಕ ಪ್ರಚಾರ ನಡೆಸಲಾಗುತ್ತಿದೆ.

## ಕಂದಳ್ಳಿ ಗ್ರಾಮದ ರಸ್ತೆ ಹಾಗೂ ಸಾರಿಗೆ ಸಮಸ್ಯೆ ಗಂಭೀರ : ಗ್ರಾಮಸ್ಥರ ಮನವಿ



ಯಾದಗಿರಿ:ಅ.26: ವಡೆಗೇರಾ ತಾಲೂಕಿನ ಕಂದಳ್ಳಿ ಗ್ರಾಮದಿಂದ ಕೋನಳ್ಳಿ ಕಡೆ ಹೋಗುವ ರಸ್ತೆ ಕಳೆದ 8–9 ವರ್ಷಗಳಿಂದ ಯಾವುದೇ ಸುಧಾರಣೆ ಕಾಣದೆ ದುಸ್ಥಿತಿಯಲ್ಲಿದೆ. ಇದರಿಂದ ಗ್ರಾಮಸ್ಥರಿಗೆ ಸಂಚಾರ ತೊಂದರೆ ಉಂಟಾಗಿದ್ದು, ಆಟೋ ಹಾಗೂ ಬೈಕ್ ವಾಹನಗಳಿಗೂ ಸಂಚರಿಸಲು ಕಷ್ಟವಾಗುತ್ತಿದೆ. ವಡೆಗೇರಾ ತಾಲೂಕು ಕೇಂದ್ರಕ್ಕೆ ಹೋಗಲು ಸರಿಯಾದ ಸಾರಿಗೆ ವ್ಯವಸ್ಥೆ ಇಲ್ಲದ ಕಾರಣ ಗ್ರಾಮಸ್ಥರು ತಕ್ಷಣ ರಸ್ತೆ ದುರಸ್ತಿ ಮಾಡಬೇಕೆಂದು ಒತ್ತಾಯಿಸಿದ್ದಾರೆ.

ಇದೇ ವೇಳೆ, ಕಂದಳ್ಳಿಯಿಂದ ಬಿಳಾರ ಕಡೆಗೆ ಶಾಲಾ ಮಕ್ಕಳಿಗಾಗಿ ಬಸ್ ಸೌಲಭ್ಯ ಇಲ್ಲದೆ 8 ವರ್ಷಗಳಿಂದ ವಿದ್ಯಾರ್ಥಿಗಳು ಸಂಕಷ್ಟ ಅನುಭವಿಸುತ್ತಿದ್ದಾರೆ. 6ನೇ ತರಗತಿಯಿಂದ 10ನೇ ತರಗತಿ ಓದುತ್ತಿರುವ ಸುಮಾರು 30–40 ವಿದ್ಯಾರ್ಥಿಗಳು ಪ್ರತಿದಿನ 4 ಕಿ.ಮೀ ನಡೆದುಕೊಂಡು ಹೋಗುತ್ತಿದ್ದಾರೆ. ಇದರಿಂದ ಮಕ್ಕಳಲ್ಲಿ ಓದಿನ ಆಸಕ್ತಿ ಕಡಿಮೆಯಾಗಿದ್ದು,

ಪರೀಕ್ಷೆಯಲ್ಲಿ ಅಂಕಗಳು ಕುಸಿಯುತ್ತಿವೆ. ಸಮಯಕ್ಕೆ

ಶಾಲೆಗೆ ತಲುಪಲು ಸಾಧ್ಯವಾಗುತ್ತಿಲ್ಲ ಎಂದು ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗ್ರಾಮಸ್ಥರಿಂದ ಕಂದಳ್ಳಿ–ಕೋನಳ್ಳಿ ರಸ್ತೆ ದುರಸ್ತಿ ಮತ್ತು ಶಾಲಾ ಮಕ್ಕಳಿಗಾಗಿ ಬಸ್ ಸೇವೆ ಪುನಃ ಪ್ರಾರಂಭಿಸುವಂತೆ ಸಂಬಂಧಪಟ್ಟ ಇಲಾಖೆಗೆ ಮನವಿ ಮಾಡಿದ್ದಾರೆ.

## ಬೋಧಕೇತರ ನೌಕರರ ಸಂಘದ ಜಿಲ್ಲಾಧ್ಯಕ್ಷ ಆದೆಪ್ಪ ಬಾಗ್ಲಿಗೆ ಸನ್ಮಾನಿಸಿದ ಡಿಡಿಪಿಐ ಮುದೋಳ್



ಯಾದಗಿರಿ :ಅ.26: 2024–29ನೇ ಸಾಲಿಗಾಗಿ ಕರ್ನಾಟಕ ರಾಜ್ಯ ಶಾಲಾಶಿಕ್ಷಣ ಇಲಾಖೆಯ ಭೋಧಕೇತರ ನೌಕರರ ಜಿಲ್ಲಾ ಘಕದಚುನಾವಣೆಯಲ್ಲಿ ಜಿಲ್ಲಾಧ್ಯಕ್ಷರಾಗಿಯ್ಕೆಯಾದ ಆದೆಪ್ಪ ಬಾಗ್ಲಿ ಹಾಗೂ ವಿವಿಧ ಪದಾಧಿಕಾರಿಗಳಿಗೆ ಶಾಲಾಶಿಕ್ಷಣ ಇಲಾಖೆ ಉಪನಿರ್ದೇಶಕ ಚನ್ನಬಸಪ್ಪ ಮುಧೋಳ ಅವರು ತಮ್ಮ ಕಛೇರಿಯಲ್ಲಿ ಸನ್ಮಾನಿಸಿದರು.ಸಂಘದ ಖಜಾಂಚಿಯಾಗಿ ಆನಂದ ಯಲಹೇರಿ, ಪ್ರಧಾನಕಾರ್ಯದರ್ಶಿಯಾಗಿ ಖಾಜಾಮೈನೋದ್ದೀನ್,ಉಪಾಧ್ಯಕ್ಷರಾಗಿ ರವಿಪ್ರಕಾಶ ಕೋಟಿಮನಿ,ಸಂಘಟನಾಕಾರ್ಯದರ್ಶಿಯಾಗಿ ರುದ್ರೇಶ ಪತ್ತಾರ ಶಹಾಪೂರ, ಸಹಕಾರ್ಯಾದರ್ಶಿಯಾಗಿ ರವೇಶಧರಿ ಸುರಪುರ ರವರು ಆಯ್ಕೆಆಗಿರುವುದಾಗಿ ರಾಜ್ಯ ಚುನಾವಣಾಧಿಕಾರಿ ಎ ಹನುಮನರಸಯ್ಯಾ ಅವರು ಈ ವೇಳೆ ಘೋಷಣೆ ಮಾಡಿದ್ದರು. ಈ ಸಂದರ್ಭದಲ್ಲಿ ಮೂರು ತಲ್ಲೂಕಿನ ಅಧ್ಯಕ್ಷರು ಪದಾಧಿಕಾರಿಗು, ಪತ್ರಾಂಕಿತ ಸಹಾಯಕರಾದ ಮಲ್ಲಿಕಾರ್ಜುನ ಪೋಸ್ತಿ, ಅಧೀಕ್ಷಕರವೀಂದ್ರ ಕಾಕಿ. ನಾಗರಾಜ ದೇಶಪಾಂಡೆ,ಸಂಪತಕುಮಾರ ಇನ್ನಿತರ ಜಿಲ್ಲೆಯ ಭೋಧಕೇತರ ನೌಕರರು ಹಾಜರಿದ್ದರು.

## ಪರಿಸರ ಸ್ನೇಹಿ ಗಣೇಶ ಪ್ರತಿಷ್ಠಾಪನೆ ಮಾಡಿ: ವಿಶ್ವಕರ್ಮ



ಕಲ್ಬುರ್ಗಿ:ಅ.26:ಪಿಒಪಿಯಿಂದ ತಯಾರಾಗುವ ಗಣೇಶ ಮೂರ್ತಿಗಳ ಮಾರಾಟ ಮತ್ತು ಬಳಕೆಗೆ ಈ ಬಾರಿ ಕಟ್ಟುನಿಟ್ಟಾಗಿ ನಿರ್ಬಂಧ ಹೇರಿದೆ, ಆದರೂ ಪರಿಸರಕ್ಕೆ ಹಾನಿಕಾರವಾಗಿರುವ ಪಿಒಪಿ ಗಣೇಶ ಮೂರ್ತಿಗಳ ಮಾರಾಟ ಕಲಬುರಗಿ ಸೇರಿದಂತೆ ಹಾಗೂ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ನಡೆಯುತ್ತಿದೆ. ಸರ್ಕಾರದ ಆದೇಶ ಉಲ್ಲಂಘಿಸಿ ಪ್ಲಾಸ್ಟರ್ ಆಫ್ ಪ್ಯಾರಿಸ್ ಗಣೇಶ ವಿಗ್ರಹಗಳ ತಯಾರಿಕೆ ಮತ್ತು ಮಾರಾಟಕ್ಕೆಯತ್ನಿಸಿರುವವರ ವಿರುದ್ಧ ಕ್ರಮಕೈಗೊಳ್ಳಬೇಕು.

ಮಣ್ಣಿನಿಂದ ತಯಾರಿಸಿದ ಗಣೇಶ ಮೂರ್ತಿಗಳನ್ನು ಪೂಜಿಸುವುದೇ ಶ್ರೇಷ್ಠ ಎಂಬ ನಂಬಿಕೆ ಇದೆ. ಆದರೆ, ಕೆಲವರು ಕಡಿಮೆ ಸಮಯದಲ್ಲಿ ಹೆಚ್ಚಿನ ವಿಗ್ರಹಗಳನ್ನು ತಯಾರಿಸಬಹುದು ಎಂಬ ದುರಾಸೆಯಿಂದ ಪರಿಸರಕ್ಕೆ ಹಾನಿ ಉಂಟು ಮಾಡುವ ಪಿಒಪಿ ಗಣೇಶ ಮೂರ್ತಿಗಳನ್ನು ತಯಾರು ಮಾಡಿ, ಮಾರುತ್ತಿದ್ದಾರೆ. ಇದ–ಕ್ಕೆ ಕಡಿವಾಣ ಹಾಕಬೇಕಿದೆ' ಎಂದ ಪರಿಸರ ಪ್ರೇಮಿ ಹಾಗೂ ಉಪನ್ಯಾಸಕ ದೇವಿಂದ್ರಪ್ಪ ವಿಶ್ವಕರ್ಮ ಆಗ್ರಹಿಸಿದ್ದಾರೆ. ಅವರು ಕಲಬುರ್ಗಿ ನಗರದ ರಾಮಮಂದಿರ ಹತ್ತಿರ ಮಣ್ಣಿನ ಗಣಪನ ಕುರಿತು ಜಾಗೃತಿ ಮೂಡಿಸಿದ ಅವರು ಪಿಒಪಿ ಗಣೇಶ ಮೂರ್ತಿಗಳು ಪರಿಸರಕ್ಕೆ ಜಲಮಾಲಿನ್ಯ ತಡೆ,ನಿಯಂತ್ರಣ ಕಾಯ್ದೆ 1974 ಕಲಂ 33 (ಎ) ಪ್ರಕಾರ ಕಾನೂನು ಬಾಹಿರ. ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ನಿಷೇಧಿಸಿ ಆದೇಶ ಹೊರಡಿಸಿದೆ. ಪಿಒಪಿ ಗಣೇಶ ಹೆಚ್ಚು ಮಾರಾಟವಾದರೆ ಪರಿಸರ ಸ್ನೇಹಿ ಗಣೇಶ ವಿಗ್ರಹ ತಯಾರಕರಿಗೆ ಆರ್ಥಿಕವಾಗಿ ತುಂಬಾ ತೊಂದರೆಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ಗಣೇಶ ಮೂರ್ತಿಗಳನ್ನು ವಿಸರ್ಜಿಸುವ ಮುನ್ನ ಹೂವು, ವಸ್ತ್ರ, ಪೂಜಾ ಸಾಮಗ್ರಿಗಳು,ಅಲಂಕಾರಿಕ ವಸ್ತುಗಳು, ಕಾಗದ ,ಪ್ಲಾಸ್ಟಿಕ್‌ನಿಂದ ಮಾಡಲಾದ ವಸ್ತುಗಳನ್ನು, ಮುಂತಾದವುಗಳನ್ನು ತೆಗೆಯಬೇಕು. ನಂತರ ವಿಸರ್ಜನೆ ಮಾಡುವ ಗಣೇಶನ ಮೂರ್ತಿಯನ್ನು ನೀರಿನಲ್ಲಿ ವಿಸರ್ಜನೆ ಮಾಡುವುದರಿಂದ ನೀರು ಪವಿತ್ರವಾಗುತ್ತದೆ. ಕೆರೆ, ಸಮುದ್ರದ ನೀರಿನಲ್ಲಿ ಮಣ್ಣಿನ ಗಣೇಶ ವಿಗ್ರಹಗಳನ್ನು ಮಾತ್ರ ನೀರಿನಲ್ಲಿ ವಿಸರ್ಜನೆ ಮಾಡಬೇಕು. ಪ್ಲಾಸ್ಟಿಕ್ ವಸ್ತುಗಳು, ಮತ್ತು ಬಿದಿರು ಕಡ್ಡಿಗಳು, ಕಸ ವಿಲೇವಾರಿ ಸ್ಥಳಗಳಿಗೆ ನೀಡಬೇಕು ಎಂದು ಹೇಳಿದರು.

## ದೈಹಿಕ ಹಾಗೂ ಬೌದ್ಧಿಕ ಬೆಳವಣಿಗೆಗೆ ಅಂಗನವಾಡಿ ಕೇಂದ್ರ ಪೂರಕ ಸಹಕಾರಿ: ಬೆಳೆದಪ್ಪ ಮಳೆ ಕೊಪ್ಪ

ಮಲ್ಲಮ್ಮ ನುಡಿವಾರ್ತೆ



ಕೊಪ್ಪಳ :ಅ.26: ಅಂಗನವಾಡಿ ಕೇಂದ್ರದ ಶಾಲಾ ಪೂರ್ವ ಶಿಕ್ಷಣದಿಂದ ಮಕ್ಕಳ ದೈಹಿಕ ಹಾಗೂ ಬೌದ್ಧಿಕ ಬೆಳವಣಿಗೆಗೆ ಅಂಗನವಾಡಿ ಕೇಂದ್ರ ಪೂರಕವಾಗಿದ್ದು ಮಕ್ಕಳನ್ನು ಮುತುವರ್ಜಿಯಿಂದ ಸಲಹುವ ಜವಾಬ್ದಾರಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಮೇಲಿದೆ. 3 ರಿಂದ 6 ವರ್ಷದ ಮಕ್ಕಳ ಪಾಲಕರು ತಮ್ಮ ಮಕ್ಕಳನ್ನು ಅಂಗನವಾಡಿ ಕೇಂದ್ರಕ್ಕೆ ಕಳಿಸಬೇಕು ಎಂದು ಯಲಬುರ್ಗಾ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಬೆಟ್ಟದಪ್ಪ ಮಾಳೆಕೊಪ್ಪ ಹೇಳಿದರು. ಕುಕನೂರ ತಾಲೂಕಿನ ರಾಜೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಆಡೂರು ಗ್ರಾಮದ ಎರಡನೇ ಅಂಗನವಾಡಿ ಕೇಂದ್ರ ಉದ್ಘಾಟಿಸಿ ಮಾತನಾಡಿ ಮಕ್ಕಳ ಭವಿಷ್ಯ ಭಾರತದ ಭವಿಷ್ಯ ಎಂಬ ದೂರ ದೃಷ್ಟಿ ಹಿನ್ನೆಲೆಯಲ್ಲಿ ಸರ್ಕಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ವಿವಿಧ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದು, ಅದರಲ್ಲಿ ಶಿಶು ಅಭಿವೃದ್ಧಿ ಯೋಜನೆಯು ಒಂದಾಗಿದ್ದು, ಪ್ರತಿ ಮಗುವಿನ ಕಲಿಕೆಯ ಭದ್ರಬುನಾದಿ ಮೊದಲ ಹೆಜ್ಜೆಯೇ ಈ ಅಂಗನವಾಡಿ ಕೇಂದ್ರಗಳು ಅದನ್ನು ಸರಿಯಾದ ರೀತಿಯಲ್ಲಿ ಮೇಲ್ವಿಚಾರಕಿಯರು ಹಾಗೂ ಅಂಗನವಾಡಿ ಕಾರ್ಯಕತೆ–ಯರು ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು ಎಂದರು. ರಾಜೂರು ಗ್ರಾಮ ಪಂಚಾಯಿತಿ ಅಧ್ಯಕ್ಷರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಪಂಚಾಯತಿ ಅಭಿವೃದ್ಧಿ ಅಧಿಕಾರಿ. ಅಂಗನವಾಡಿ ಮೇಲ್ವಿಚಾರಕಿಯರು ಅಂಗನವಾಡಿ ಕಾರ್ಯಕರ್ತೆಯರು ಗ್ರಾಮಸ್ಥರು ಇದ್ದರು .

# ಶ್ರಾವಣ ಮಾಸದ ಸಮಾಪ್ತಿ: ಪುರಾಣ ಮಹಾಮಂಗಲ



ಅಫಜಲಪುರ:ಅ.26: ತಾಲೂಕಿನ ಉಡಚಾಣ ಗ್ರಾಮದ ಶಂಕರಲಿಂಗೇಶ್ವರ ಬ್ರಹನ್ಮಠದಲ್ಲಿ ಶ್ರಾವಣ ಮಾಸದ ಮುಕ್ತಾದ ಸಮಾರೂಪ ಸಮಾರಂಭ ಅದ್ದೂರಿಯಾಗಿ ಜರುಗಿತು

ಈದೆ ವರ್ಷ ಉಡಚಾಣ ಗ್ರಾಮ ದೇವರಾದ ಶಂಕರಲಿಂಗೇಶ್ವರ ಮಠದಲ್ಲಿ ಶ್ರಾವಣ ಮಾಸದ ಒಂದು ತಿಂಗಳು ಪೂರ್ತಿಯಾಗಿ ಮಹಾದಾಸೋಹಿ ಕಲಬುರಗಿ ಶರಣಬಸವೇಶ್ವರರ ಮಹಾ ಪರಾಣವು ಪುರಾಣಿಕರಾದ ಶಿವಾನಂದಿಶ್ವರ ಶಾಸ್ತ್ರಿಗಳಿಂದ. ಮತ್ತು ಗವಾಯಿಗಳಾದ ಭೀಮರಾಯ ಗೌಡ ಪಾಟೀಲ್ ಯರಗಲ್ಲ ಇವರಿಂದ ಜರುಗಿದ್ದು,ಇಂದು ಮುಕ್ತಾಯ ಸಮಾರೂಪ ಸಮಾರಂಭದ ನಿಮಿತ್ಯ ಶಂಕರಲಿಂಗೇಶ್ವರರ ಭಾವಚಿತ್ರ ಭವ್ಯ ಮೆರವಣಿಗೆ ದೊಂದಿಗೆ ಗ್ರಾಮದ ಸುಮಂಗಲಿಯರಿಂದ ಕುಂಭಮೇಳ ವಿಜೃಂಭಣೆಯಿಂದ ಜರುಗಿತು ಸಂಸ್ಕೃತಿಕ ಭಜನಾ ಮಾಡುವ ಮುಖಾಂತರ ಗಮನ ಸೆಳೆದ ಗ್ರಾಮಸ್ಥರು ಮಹೋತ್ಸವದಲ್ಲಿ ಹತ್ತು ಹಲವು ವಾದ್ಯಗಳೊಂದಿಗೆ ಸಕಲ ಭಕ್ತರ ಸಮ್ಮುಖದಲ್ಲಿ ಜರುಗಿತು.

ನಂತರ ನೂರಾರು ಭಕ್ತರು ಹಾಗೂ ಗ್ರಾಮಸ್ಥರು ಪ್ರಸಾದ್ ಸವಿದರು.

ಈ ಸಂದರ್ಭದಲ್ಲಿ ಉಡಚಣ ಗ್ರಾಮದ ಸರ್ವ ಗ್ರಾಮಸ್ಥರು ಭಾಗಿಯಾಗಿದ್ದರು.

# ಅಪೌಷ್ಟಿಕತೆ ತಡೆಯಲು ಮಕ್ಕಳಲ್ಲಿ ನೈರ್ಮಲ್ಯ ಮತ್ತು ಪರಿಸರ ಜಾಗೃತಿ ಅತ್ಯಾವಶ್ಯಕ

ಔರಾದ್ :ಅ.26: ಆರೋಗ್ಯಕರ ಬೆಳವಣಿಗೆರೂಢಿಸಿಕೊಂಡು ಅಪೌಷ್ಟಿಕತೆ ತಡೆಯಲು ಮಕ್ಕಳಲ್ಲಿ ನೈರ್ಮಲ್ಯ ಮತ್ತು ಪರಿಸರ ಜಾಗೃತಿ ಅತ್ಯಾವಶ್ಯಕ ಎಂದು ತಹಸೀಲ್ದಾರ್ ಮಹೇಶ ಪಾಟೀಲ್ ಅಭಿಪ್ರಾಯಪಟ್ಟರು.

ತಾಲೂಕಿನ ಎಕಲಾರ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಎಕಲಾರ ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ವಾಟರ್‌ಶೆಡ್ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ನಡೆದ ಸ್ವಚ್ಛತೆಬಕಿರು ನಾಟಕ ಪ್ರದರ್ಶನ ಹಾಗೂ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಕರು ಮಕ್ಕಳಲ್ಲಿ ಶುಚಿತ್ವದ ಕುರಿತು ತಿಳಿವಳಿಕೆ ಮೂಡಿಸಿ, ಸ್ವಸ್ಥ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು. ಬಯಲು ಶೌಚಮುಕ್ತ ಗ್ರಾಮಗಳೆಂದು ಘೋಷಣೆಗಳಾಗಿದ್ದರೂ ಕೂಡ ಇಂದಿಗೂ ಗ್ರಾಮೀಣ ಪ್ರದೇಶದಲ್ಲಿ ಅನುಷ್ಠಾನವಾಗುತ್ತಿಲ್ಲ.

ಸ್ವಚ್ಛತೆ ಬದುಕಿನ ಭಾಗವಾಗಬೇಕು.




ಯಾವುದೇ ಒಂದು ದಿನಕ್ಕೆ ಸೀಮಿತಗಿರದೆ ನಿತ್ಯ ನಿರಂತರ ಸ್ವಚ್ಛತೆ, ನೀರಿನ ಮಿತ ಬಳಕೆ-ಯ ಕುರಿತು ಕಾಳಜಿವಹಿಸಬೇಕು. ಅಂತರ್ಜಲ ಸಂರಕ್ಷಿಸುವ ನಿಟ್ಟಿನಲ್ಲಿ ಸಂಸ್ಥೆ ಮಾಡುತ್ತಿರುವ ಕಾರ್ಯ ಶ್ಲಾಘನೀಯ ಎಂದರು.

ಸಂಪನ್ಮೂಲ ವ್ಯಕ್ತಿ ರಾಜೇಂದ ಮಾಳಿ ಮಾತನಾಡಿ, ನೀರು ನಮಗೆ ದೊರೆತ ಅತ್ಯಮೂಲ್ಯ ಆಸ್ತಿ, ಅದನ್ನು ಸಂರಕ್ಷಿಸಲು ವಾಟರ್ ಶೆಡ್ ಸಂಸ್ಥೆಯ ಯೋಜನೆಗಳು ತುಂಬ ಉಪಯುಕ್ತವಾಗಿವೆ. ವೈಯಕ್ತಿಕ ಸ್ವಚ್ಛತೆಯ ಜೊತೆಗೆ ಪರಿಸರ ಸ್ವಚ್ಛವಾಗಿಡುವುದು ಅತಿ ಮುಖ್ಯ ಎಂದರು.

ಬಸವಕಲ್ಯಾಣ ಜೈ ಭವಾನಿ ಕಲೆ ಮತ್ತು ಸಾಂಸ್ಕೃತಿಕ ಮಹಿಳಾ ಸಂಘದ ವಿಜಯಲಕ್ಷ್ಮಿ, ಡಿಲೆಮಾ ಅಣದೂರ, ಮಧುಕರ ಘೋಡಕೆ, ಯೇಸುದಾಸ್ ಅವರ ನೇತೃತ್ವದಲ್ಲಿ ನಡೆದ ಸ್ವಚ್ಛತೆ ಜಾಗೃತಿ, ಬಯಲು ಬಹಿರ್ದೆಸೆ ಸಂಬಂಧಿತ ಕಿರು ನಾಟಕಗಳು ಮಕ್ಕಳ ಮನಸೂರೆಗೊಂಡವು.

ತಾಲೂಕು ಯೋಜನಾ ವ್ಯವಸ್ಥಾಪಕ ಸಿದ್ದಪ್ಪ ಭಾಲ್ಕೆ ಮಾತನಾಡಿದರು. ಕರ್ನಾಟಕ ಪ್ರಾದೇಶಿಕ ವ್ಯವಸ್ಥಾಪಕ ರಣಧೀರ ಪಾಟೀಲ್, ಎಸ್‌ಡಿಎಂಸಿ ಅಧ್ಯಕ್ಷ ಧನರಾಜ ಪಿಟ್ರೆ, ಜಗದೀಶ ಪಾಟೀಲ್, ರಿಷಿಕೇಶ ಶಿಂದೆ, ರವಿಕುಮಾರ ಮಠಪತಿ, ಕಂದಾಯ ನೀರಿಕ್ಷಕ ನರಸಿಮ್ಲು, ಸಿಆರ್‌ಪಿ ಮಹಾದೇವ ಘುಳೆ, ಕಲ್ಪನಾ ಪಾಟೀಲ್ ಮುಖ್ಯ ಶಿಕ್ಷಕ ಪ್ರಭು ಬಾಳೂರೆ, ಶಿಕ್ಷಕರಾದ ಬಾಲಾಜಿ ಅಮರವಾಡಿ, ವೀರಶೆಟ್ಟಿ ಗಾದಗೆ, ಅಂಕುಶ ಪಾಟೀಲ್, ರೂಪಾ, ಸಬೀತಾ, ಕಾವೇರಿ, ಸುರೇಖಾ ಸೇರಿದಂತೆ ಶಾಲಾ ಮಕ್ಕಳು ಗ್ರಾಮಸ್ಥರು ಉಪಸ್ಥಿತರಿದ್ದರು.

# ಹೊಲಿಗೆ ಯಂತ್ರಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.26–ಜಿಲ್ಲಾ ಪಂಚಾಯತ ಗ್ರಾಮೀಣ ಕೈಗಾರಿಕಾ ವಿಭಾಗದಿಂದ ಪ್ರಸಕ್ತ ಸಾಲಿಗೆ ಜಿಲ್ಲಾ ಉದ್ಯಮ ಕೇಂದ್ರ, ವಿಶೇಷ ಘಟಕ, ಗಿರಿಜನ ಉಪಯೋಜನೆಯಡಿ ಮತ್ತು ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತವಾಗಿ ಸುಧಾರಿತ ಸಲಕರಣೆಗಳ ಸರಬರಾಜು ಯೋಜನೆಯಡಿ ವಿದ್ಯುತ್ ಚಾಲಿತ ಹೊಲಿಗೆ ಯಂತ್ರಗಳನ್ನು ನೀಡುವ ಸಲುವಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಆನ್‌ಲೈನ್ (http://bagalkot.nic.in) ಮೂಲಕ ಸೆಪ್ಟೆಂಬರ 26 ರೊಳಗಾಗಿ ಸಲ್ಲಿಸಬೇಕು. ಒಂದು ಕುಟುಂಬಕ್ಕೆ ಒಂದು ಅರ್ಜಿ ಸಲ್ಲಿಸಲು ಅವಕಾಶವಿದ್ದು, ಗ್ರಾಮೀಣ ಪ್ರದೇಶದ ಮಹಿಳೆಯರು ಅರ್ಜಿ ಸಲ್ಲಿಸಬೇಕು.

10 ತರಗತಿ ಪಾಸಾಗಿದ್ದು, ಪರಿಶಿಷ್ಟ ಜಾತಿ ಮತ್ತು ಪಂಗಡ ಅಭ್ಯರ್ಥಿಗಳಿಗೆ ಕನಿಷ್ಟ 18 ರಿಂದ 45 ವರ್ಷ ಮತ್ತು ಇತರೆ ವರ್ಗದವರಿಗೆ ಗರಿಷ್ಟ 38 ವರ್ಷ ಮೀರಿರಬಾರದು ಎಂದು ಜಿಲ್ಲಾ ಪಂಚಾಯತ ಕೈಗಾರಿಕಾ ವಿಭಾಗದ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08354–223744, 7760007080, 9620721729ಗೆ ಕಚೇರಿ ಅವಧಿಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

# ಗಣೇಶ ವಿಸರ್ಜನೆಗೆ ಸಂಚಾರಿ ತೊಟ್ಟಿಗಳ ವ್ಯವಸ್ಥೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.26–ಜಿಲ್ಲಾಡಳಿತ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ನಗರಸಭೆ ಸಹಯೋಗದಲ್ಲಿ ಬಾಗಲಕೋಟೆ ನಗರ ಪ್ರದೇಶದಲ್ಲಿ ಗಣೇಶ ಪ್ರತಿಷ್ಠಾಪನೆ ಮೊದಲ ದಿನ (ಆಗಸ್ಟ 27) ಹಾಗೂ 5ನೇ ದಿನ (ಆಗಸ್ಟ 31) ರಂದು ಗಣೇಶ ವಿಸರ್ಜನೆಗೆ 4 ಕಡೆಗಳಲ್ಲಿ ಸಂಚಾರಿ ತೊಟ್ಟಿಗಳ ವ್ಯವಸ್ಥೆ ಮಾಡಲಾಗಿದೆ ಎಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ಅನೀಲಕುಮಾರ ಚಳಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮನೆಯಲ್ಲಿ ಸ್ಥಾಪಿಸಲಾದ ಗಣೇಶ ಮೂರ್ತಿಗಳ ವಿಸರ್ಜನೆಗೆ ಹಳೆ ಬಾಗಲಕೋಟೆಯ ಕಿಲ್ಲಾ ಓಣಿ, ನವನಗರದ ಸೆಕ್ಟರ ನಂ.57ರ ಹೆಚ್.ಪಿ.ಪೆಟ್ರೋಲ್ ಪಂಪ್ ಹತ್ತಿರ, ನವನಗರದ ಎಲ್.ಐ.ಸಿ ಸರ್ಕಲ್, ವಿದ್ಯಾಗಿರಿಯ

ಕಾಲೇಜ ಸರ್ಕಲ್‌ನಲ್ಲಿ ಸಂಜೆ 6 ರಿಂದ ರಾತ್ರಿ 10 ಗಂಟೆವರೆಗೆ ಸಂಚಾರಿ ತೊಟ್ಟಿಗಳ ವ್ಯವಸ್ಥೆ ಮಾಡಲಾಗಿದೆ.

ಸಾರ್ವಜನಿಕರು ಗಣೇಶ ಮೂರ್ತಿಗಳನ್ನು ಜಲಮೂಲಗಳಲ್ಲಿ ವಿಸರ್ಜಿಸದೇ ಸಂಚಾರಿ ತೊಟ್ಟಿಗಳಲ್ಲಿಯೇ ವಿಸರ್ಜಿಸುವಂತೆ ಪರಿಸರ ಅಧಿಕಾರಿ ಮನವಿ ಮಾಡಿಕೊಂಡಿದ್ದಾರೆ.

# ಪಠ್ಯದೊಂದಿಗೆ ಆಟಕ್ಕೂ ಮಹತ್ವ ಕೊಡಿ: ಪ್ರಭು ಚವ್ಹಾಣ



ಔರಾದ:ಅ.26:ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ವಿದ್ಯಾರ್ಥಿಗಳು ಓದಿನೊಂದಿಗೆ ಕ್ರೀಡೆಗಳಲ್ಲಿ ನಿರಂತರವಾಗಿ ಭಾಗಹಿಸಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಅಮರೇಶ್ವರ ಪದವಿ ಪೂರ್ವ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಆ.25ರಂದು ಅಮರೇಶ್ವರ ಕಾಲೇಜು ಆವರಣಲ್ಲಿ ಏರ್ಪಡಿಸಿದ್ದ 2025–26ನೇ ಸಾಲಿನ ತಾಲ್ಲೂಕು ಮಟ್ಟದ ಪದವಿ ಪೂರ್ವ ವಿದ್ಯಾರ್ಥಿಗಳ ಕೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಯುವಜನತೆ ಕ್ರಿಕೆಟ್‌ಗೆ ಮಾತ್ರ ಹೆಚ್ಚಿನ ಮಹತ್ವ ನೀಡುತ್ತಿರುವುದು ಕಂಡುಬರುತ್ತಿದೆ. ಇದರ ಬದಲಾಗಿದೆ ನಮ್ಮ ದೇಶೀಯ ಆಟಗಳಾದ ಕಬ್ಬಡ್ಡಿ, ಕುಸ್ತಿ, ಖೋಖೋದಂತಹ ವಿವಿಧ ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳಬೇಕು. ಪ್ರಧಾನಿ ನರೇಂದ್ರ ಮೋದಿಯವರು ಕ್ರೀಡೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದ್ದಾರೆ. ಖೇಲೋ ಇಂಡಿಯಾದಂತಹ ಹತ್ತು ಹಲವು ಯೋಜನೆಗಳು ವಿದ್ಯಾರ್ಥಿಗಳಿಗೆ ಸಾಕಷ್ಟು ಅನುಕೂಲಕರವಾಗಿವೆ. ಇವುಗಳ ಸದುಪಯೋಗ ಮಾಡಿಕೊಂಡು ತಾಲ್ಲೂಕು, ಜಿಲ್ಲಾ, ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಗೆದ್ದು ಹೆಸರು ಗಳಿಸಬೇಕು. ಕ್ರೀಡೆಯಲ್ಲಿ ಸಾಧಿಸಿದ ವಿದ್ಯಾರ್ಥಿಗಳಿಗೆ ವಯಕ್ತಿಕವಾಗಿ ಬಹುಮಾನ ನೀಡುವುದಾಗಿ ಶಾಸಕರು ಭರವಸೆ ನೀಡಿದರು.

ಕ್ಷೇತ್ರದಲ್ಲಿ ಶಿಕ್ಷಣದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದ್ದು, ಕ್ರೀಡಾ ಕ್ಷೇತ್ರದ ಬೆಳವಣಿಗೆಗೆ ಪೂರಕವಾದ ವಾತಾವರಣ ನಿರ್ಮಿಸಿದ್ದೇನೆ. ವಿದ್ಯಾರ್ಥಿಗಳು ಸರಿಯಾಗಿ ಆಟವಾಗಿ ತಮ್ಮ ಭವಿಷ್ಯವನ್ನು ಸುಧಾರಿಸುವ ಜೊತೆಗೆ ತಾಲ್ಲೂಕಿನ ಕೀರ್ತಿಯನ್ನು ಹೆಚ್ಚಿಸಲು ಶ್ರಮಿಸಬೇಕು ಎಂದು ಹೇಳಿದರು.

ಆರ್.ಆರ್.ಕೆ ಸಮಿತಿಯ ಅಧ್ಯಕ್ಷ ಪ್ರಫುಲಕುಮಾರ ಪಾಂಡೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)ಉಪ ನಿರ್ದೇಶಕರಾದ ಚಂದ್ರಕಾಂತ ಶಹಾಬಾದಕರ್, ಜಿಲ್ಲಾ ಪ್ರಾಂಶುಪಾಲ ಸಂಘದ ಅಧ್ಯಕ್ಷ ಪ್ರಭು. ಎಸ್, ಕಾರ್ಯಾಧ್ಯಕ್ಷ ಡಾ.ಮನ್ಮಥ ಡೋಳೆ, ಜಿಲ್ಲಾ ಉಪನ್ಯಾಸಕರ ಸಂಘದ ಅಧ್ಯಕ್ಷ ಓಂಕಾರ ಸೂರ್ಯವಂಶಿ, ಜಿಲ್ಲಾ ಅನುದಾನಿತ ಉಪನ್ಯಾಸಕರ ಸಂಘದ ಅಧ್ಯಕ್ಷ ವಿಜಯಕುಮಾರ ಪಾಟೀಲ, ಪ್ರಮುಖರಾದ ಶರಣಬಸಪ್ಪ ದೇಶಮುಖ, ಧನರಾಜ ತಾಂಡೂರ, ಶ್ರೀಕಾಂತ ಪಾಟೀಲ ದಾಬಕಾ, ರವೀಂದ್ರ ಮೀಸೆ, ಬಸವಕುಮಾರ, ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಓಂಪ್ರಕಾಶ ದಡ್ಡೆ, ಯಶವಂತ ಡೊಂಬಾಳೆ, ಅನೀಲಕುಮಾರ ಕರಂಜೆ, ಅಮರೇಶ್ವರ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಮಠ ರೇವಣಯ್ಯಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಕ್ತ ಜೀವ ಉಳಿಸುವ ಅಮೂಲ್ಯ ದ್ರವ್ಯ: ಅಶೋಕ ಸಜ್ಜನ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೊಟೆ,ಆ.26–ರಕ್ತ ಜೀವ ಉಳಿಸುವ ಅಮೂಲ್ಯ ದ್ರವ್ಯವಾಗಿರುವುದರಿಂದ ರಕ್ತದಾನವನ್ನು ಶ್ರೇಷ್ಠದಾನ ಎಂದು ಪರಿಗಣಿಸಲಾಗಿದೆ ಎಂದು ಬಿ.ವಿ.ವಿ ಸಂಘದ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ ಹೇಳಿದರು.

ಗಣೇಶೋತ್ಸವದ ನಿಮಿತ್ತ ಸೋಮವಾರ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಎಮ್.ಬಿ.ಬಿ.ಎಸ್ ತೃತೀಯ ವರ್ಷದ ವಿದ್ಯಾರ್ಥಿಗಳು ಆಯೋಜಿಸಿದ್ದ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ವೈದ್ಯಕೀಯ ವಿದ್ಯಾರ್ಥಿಗಳು ಸ್ವಯಂ ಪ್ರೇರಣೆಯಿಂದ ರಕ್ತದಾನಕ್ಕೆ ಮುಂದಾಗಿರುವುದು ಶ್ಲಾಘನೀಯ ಸಂಗತಿ. ವಿದ್ಯಾರ್ಥಿಗಳ ಈ ನಡೆ ಸಮಾಜಕ್ಕೆ ಮಾದರಿಯಾಗಿದೆ ಎಂದರು.

ನಾಗರಿಕರಲ್ಲಿ ರಕ್ತದಾನದ ಬಗ್ಗೆ ಅರಿವು ಮೂಡಿಸುವ ಪ್ರಯತ್ನಗಳು ನಡೆಯಬೇಕಿದೆ. ಕುಮಾರೇಶ್ವರ ಆಸ್ಪತ್ರೆಯಲ್ಲಿ ಅತ್ಯಾಧುನಿಕ ರಕ್ತನಿಧಿ ಕೇಂದ್ರವನ್ನು ಸ್ಥಾಪಿಸಲಾಗಿದೆ. ಕುಮಾರೇಶ್ವರ ಆಸ್ಪತ್ರೆ ಮಾತ್ರವಲ್ಲದೆ ಜಿಲ್ಲೆಯ ವಿವಿಧ ಆಸ್ಪತ್ರೆಗಳಲ್ಲಿನ ರೋಗಿಗಳಿಗೆ ಈ ರಕ್ತನಿಧಿ ಕೇಂದ್ರದ ಮೂಲಕ ರಕ್ತವನ್ನು ಪೂರೈಸಲಾಗುತ್ತಿದೆ ಎಂದು ಸಜ್ಜನ ಹೇಳಿದರು.

ಮೆಡಿಕಲ್ ಕಾಲೇಜಿನ ಪ್ರಾಚಾರ್ಯ ಡಾ.ಭುವನೇಶ್ವರಿ ಯಳಮಲಿ, ಪ್ರತಿವರ್ಷ ವಿಶೇಷ ಸಂದರ್ಭಗಳಲ್ಲಿ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ರಕ್ತದಾನ ಶಿಬಿರಗಳನ್ನು ಆಯೋಜಿಸಲಾಗುತ್ತಿದೆ. ವಿಶೇಷವಾಗಿ ಥಲಸ್ಸೇಮಿಯಾ ಪೀಡಿತ ಮಕ್ಕಳ ಆರೋಗ್ಯವನ್ನು ಗಮನದಲ್ಲಿಟ್ಟುಕೊಂಡು ಈ ಶಿಬಿರವನ್ನು ಆಯೋಜಿಸಲಾಗಿದೆ. ಕಾಲೇಜಿನ ವೈದ್ಯರು ಮತ್ತು ವಿದ್ಯಾರ್ಥಿಗಳು ಸ್ವಯಂ ಪ್ರೇರಣೆಯಿಂದ ರಕ್ತದಾನ ಮಾಡಿರುವುದು ಅಭಿನಂದನಾರ್ಹವಾಗಿದೆ. ರಕ್ತದಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರ ಸಹಕಾರ ಕೂಡ ಅವಶ್ಯಕವಾಗಿದೆ. ಈ ದಿಸೆಯಲ್ಲಿ ರಕ್ತದಾನದ ಕುರಿತು ಹೆಚ್ಚಿನ ಅರಿವು ಮೂಡಿಸುವ ಅಗತ್ಯವಿದೆ ಎಂದು ಹೇಳಿದರು.

ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ವೈದ್ಯರು ಹಾಗೂ ವೈದ್ಯಕೀಯ ವಿದ್ಯಾರ್ಥಿಗಳು ಶಿಬಿರದಲ್ಲಿ ರಕ್ತದಾನ ಮಾಡಿದರು. ಕುಮಾರೇಶ್ವರ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಪೆಥಾಲಜಿ ವಿಭಾಗದ ಮುಖ್ಯಸ್ಥ ಡಾ.ಯರನಾಳ, ರಕ್ತನಿಧಿ ಕೇಂದ್ರದ ತಜ್ಞವೈದ್ಯರಾದ ಡಾ.ಕೇಶವ ಕುಲಕರ್ಣಿ ಮತ್ತು ಡಾ.ಪವನ ಕುಲಕರ್ಣಿ, ವೈದ್ಯರಾದ ಡಾ.ಸಂಗಮೇಶ ಕಾಶಿನಕುಂಟಿ, ಡಾ.ಮಂಜುಳಾ ಪಾಟೀಲ, ಡಾ.ಮಹಾಂತೇಶ ಭೂತಾಳ, ವಿವಿಧ ವಿಭಾಗಗಳ ಮುಖ್ಯಸ್ಥರು, ಸಿಬ್ಬಂದಿ, ವಿದ್ಯಾರ್ಥಿ ಪ್ರತಿನಿಧಿಗಳಾದ ವಿಠ್ಠಲ ಬಿ, ಜಾಹ್ನವಿ, ಲಿಖಿತಾ ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಗಣೇಶೋತ್ಸವದ ನಿಮಿತ್ಯವಾಗಿ ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ವೈದ್ಯರು ಮತ್ತು ವೈದ್ಯಕೀಯ ವಿದ್ಯಾರ್ಥಿಗಳಿಂದ 'ನೇತ್ರಸ್ಪರ್ಷ' ಎನ್ನುವ ವಿನೂತನ ಕಾರ್ಯಕ್ರಮವನ್ನು ನವನಗರದ ಅಂಧ ಮಕ್ಕಳ ಶಾಲೆಯಲ್ಲಿ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಶಾಲೆಯ ಮಕ್ಕಳ ಆರೋಗ್ಯವನ್ನು ತಪಾಸಣೆ ಮಾಡಲಾಯಿತು. ಅಗತ್ಯವಿರುವ ಮಕ್ಕಳಿಗೆ ಔಷಧಿಗಳನ್ನು ಉಚಿತವಾಗಿ ವಿತರಿಸಲಾಯಿತು.

# ಗ್ರಾಮಗಳ ಅಭಿವೃದ್ಧಿಗೆ ಬದ್ಧ : ಶಾಸಕ ಮೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.26–ಬಾಗಲಕೋಟೆ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪ್ರತಿಯೊಂದು ಗ್ರಾಮಗಳ ಅಭಿವೃದ್ಧಿಗೆ ಬದ್ಧತೆಯಿಂದ ಕೆಲಸ ಮಾಡುವುದಾಗಿ ಶಾಸಕ ಎಚ್.ವೈ.ಮೇಟಿ ಹೇಳಿದರು.

ಶೀಗಿಕೇರಿ ಕ್ರಾಸ್‌ನಲ್ಲಿರುವ ಕದಾಂಪೂರ ಪುನರ್ವಸತಿ ಕೇಂದ್ರದಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ 25ಲಕ್ಷ ರೂ.ಗಳ ವೆಚ್ಚದ ದುರ್ಗಾದೇವಿ ಸಮುದಾಯ ಭವನ ಮತ್ತು 15 ಲಕ್ಷ ರೂ.ಗಳ ವೆಚ್ಚದ ಮಾರುತೇಶ್ವರ ಸಮುದಾಯ ಭವನ ನಿರ್ಮಾಣದ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

2013 ರಿಂದ 2018 ಮತ್ತು ಈಗ ಎರಡೂವರೆ ವರ್ಷಗಳಲ್ಲಿ ಗ್ರಾಮೀಣ ಭಾಗಗಳಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಂಡಿದ್ದು, ಮುಂದೆಯೂ ಅನೇಕ ಯೋಜನೆಗಳ ಮೂಲಕ ಸಮಗ್ರ ಅಭಿವೃದ್ಧಿಗೆ ಬದ್ಧತೆಯಿಂದ ಕೆಲಸ ಮಾಡುವುದಾಗಿ ಭರವಸೆ ನೀಡಿದರು.

ಈ ವೇಳೆ ಗ್ರಾಮಸ್ಥರು ಮೂಲಭೂತ ಸೌಕರ್ಯಗಳ ಕೊರತೆಯ ಬಗ್ಗೆ ಶಾಸಕರ ಗಮನಸೆಳೆದರಲ್ಲದೇ, ಶಿಗಿಕೇರಿ ಕ್ರಾಸ್‌ನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಪೋಲೀಸ್ ಚೌಕಿ ಸ್ಥಾಪಿಸಬೇಕೆಂದು ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ರಾಠೋಡ, ಕಾಂಗ್ರೆಸ್ ಮುಖಂಡರಾದ ದ್ಯಾಮಣ್ಣ ಗಾಳಿ, ದುಂಡಪ್ಪ ಏಳೆಮ್ಮಿ, ಮಂಜುನಾಥ ಕಾಜೂರ, ಪರಸುರಾಮ ಹೊನ್ಯಾಳ, ಅರ್ಜುನ ಚವ್ಹಾಣ, ಸಿದ್ದಪ್ಪ ಕಡಿವಾಲ, ಕಾಳಪ್ಪ ಬಡಿಗೇರ, ಮಹದೇವಪ್ಪ ಏಳೆಮ್ಮಿ, ಪರಸಪ್ಪ ಶಿಕ್ಕೇರಿ, ಫಕೀರಪ್ಪ ಹೊಟ್ಟಿ, ಮಹಾದೇವಪ್ಪ ಕಡಿವಾಲ, ಮಂಜುನಾಥ ಹೊಟ್ಟಿ, ಬಸಪ್ಪ ಕಡಿವಾಲ, ಬಸಪ್ಪ ಜುಕ್ಕನ್ನವರ, ಬಸವರಾಜ ಬರಮಗೌಡರ, ಪುಂಡಪ್ಪ ದಾಳಿ, ಭೀಮಶಿ ಬಾಲದನ್ನವರ, ಶಂಕರ ಇಂಗಳಗಿ, ಈರಪ್ಪ ಕೆಂಚನ್ನವರ ಮತ್ತಿತರರು ಇದ್ದರು.

# ಅನಾಥ ಮಕ್ಕಳ ಪೋಷಕರು ಡಾ. ಬಸವಲಿಂಗ ಪಟ್ಟದೇವರು



ಔರಾದ:ಅ.26:ಮಾತೃಹೃದಯಿಗಳು, ಅಕ್ಷರ ಸಂತ,ಕೆಲವು ದಂಪತಿಗಳಿಗೆ ಮಕ್ಕಳು ಬೇಡವಾಗಿದ್ದಾಗ ಅಂತಹ ಮಕ್ಕಳನ್ನು ಪಾಲನೆ ಪೋಷಣೆ ಮಾಡಿದವರು ಡಾ. ಬಸವಲಿಂಗ ಪಟ್ಟದೇವರು ಎಂದು ಪ್ರಾಂಶುಪಾಲ ನವೀಲಕುಮಾರ ಉತ್ಕಾರ್ ಹೇಳಿದರು.

ಸಂತಪುರ ಸಿದ್ದರಾಮೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ಸೋಮವಾರ ಭಾಲ್ಕಿ ಹಿರೇಮಠದ ಪೂಜ್ಯಶ್ರೀ ನಾಡೋಜ ಡಾ. ಬಸವಲಿಂಗ ಪಟ್ಟದೇವರ ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ ಅನಾಥ ಮಕ್ಕಳಿಗೆ ಬಟ್ಟೆ ವಿತರಿಸಿ ಅವರು ಮಾತನಾಡಿದರು.

ಪೂಜ್ಯಶ್ರೀಗಳು ರಾಜ್ಯದಲ್ಲಿ ವಿದ್ಯಾರ್ಥಿಗಳಿಗೆ ಮೌಲ್ಯಯುತ ಶಿಕ್ಷಣ ಮತ್ತು ಬಹಳಷ್ಟು ಕುಟುಂಬಗಳಿಗೆ ಹಾಗೂ ಸಮಾಜೋದ್ಧಾರಕ ಕಾರ್ಯಗಳನ್ನು ಮಾಡುತ್ತಿದ್ದಾರೆ. ಪೂಜ್ಯಶ್ರೀಗಳು ಶತಾಯುಷಿಗಳಾಗಿ ನಮ್ಮನ್ನು ಆಶೀರ್ವದಿಸಲಿ ಎಂದು ಶುಭ ಹಾರೈಸಿದರು.


ಉಪನ್ಯಾಸಕರಾದ ಶಿವಪುತ್ರ ಧರಣಿ, ಸುಧಾ ಕೌಟಿಗೆ, ಮೀರಾತಾಯಿ ಕಾಂಬಳೆ, ಪ್ರಿಯಾಂಕಾ ಗೊನ್ನಳ್ಳಿಕರ, ಅಶ್ವಿನಿ ಹಿಂದೊಡ್ಡಿ, ಮಹಾಂತೇಶ ಪಂಚಾಳ, ಜಿತೇಂದ್ರ ಡಿಗ್ಗಿ, ಸಂತೋಷ ಧೂಳ್ಗಂಡೆ, ಸುಧೀರ್ ಆಲೂರೇ, ಸುರೇಶ್ ಬಂಡೆ ಇದ್ದರು.

ಇದೇ ಸಂದರ್ಭದಲ್ಲಿ ಅನಾಥ ಮಕ್ಕಳಿಗೆ ಬಟ್ಟೆ ವಿತರಿಸಿ ಗೌರವಿಸಿ ಸನ್ಮಾನಿಸಲಾಯಿತು.

# ನಾಳೆ ಬಾಗಲಕೋಟ ಬುಲ್ಸ್ ಆಯ್ಕೆ ಟ್ರಯಲ್ಸ್

ಮಲ್ಲಮ್ಮನುಡಿವಾರ್ತೆಬಾಗಲಕೋಟೆ,26–ಕರ್ನಾಟಕ ಸಾಫ್ಟ್ ಬಾಲ್ ಪ್ರೀಮಿಯರ್ ಲೀಗ್(ಕೆಎಸ್‌ಪಿಎಲ್) ಸಂಸ್ಥೆ ವತಿಯಿಂದ ಕೆಎಸ್‌ಪಿಎಲ್ ಸೀಸನ್–2 ಟೂರ್ನಿಗೆ ಬಾಗಲಕೋಟೆ ಜಿಲ್ಲೆಯ(ಬಾಗಲಕೋಟೆ ಬುಲ್ಸ್) ತಂಡಕ್ಕೆ ಆ.28ರಂದು ಆಟಗಾರರ ಆಯ್ಕೆ ಟ್ರಯಲ್ಸ್ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿದೆ. ಶುಕ್ರವಾರ ಬೆಳಿಗ್ಗೆ 10 ಗಂಟೆಯಿಂದ ಆಟಗಾರರ ಆಯ್ಕೆ ಪ್ರಕ್ರಿಯೆ ಪ್ರಾರಂಭವಾಗಲಿದ್ದು, ಜಿಲ್ಲೆಯ ಆಸಕ್ತ ಕ್ರಿಕೆಟ್ ಆಟಗಾರರು ತಮ್ಮ ಹೆಸರು ನೋಂದಾವಣಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಮೊ.9951801566(ಮಲ್ಲಣ್ಣ), 9108763296(ಶ್ರೀಮತಿ ವಾಣಿ), 9741460777(ಶ್ರೀಶೈಲ್ ಜಿಗಜಿನ್ನಿ) ಹಾಗೂ 9845103513(ಅನಂತ ಧೋಂಗಡಿ)ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ. ಜಿಲ್ಲೆಯ ಕ್ರಿ–ಕೆಟ್ ಆಟಗಾರರು ರಾಷ್ಟ್ರಮಟ್ಟದಲ್ಲಿ ಬೆಳೆಯಲು ಈ ಟೂರ್ನಿ ಉತ್ತಮ ವೇದಿಕೆಯಾಗಲಿದೆ. ಟೂರ್ನಿಗೆ ಕನ್ನಡದ ಹೆಸರಾಂತ ನಟ, ಹ್ಯಾಟ್ರಿಕ್ ಹಿರೋ ಶಿವರಾಜಕುಮಾರ ರಾಯಭಾರಿಯಾಗಿದ್ದು, ಕನ್ನಡದ ನಟ–ನಟಿಯರು ಟೂರ್ನಿಯಲ್ಲಿ ಭಾಗವಹಿಸಲಿದ್ದಾರೆ ಎಂದು ಬಾಗಲಕೋಟೆ ಜಿಲ್ಲಾ ತಂಡದ ಮಾಲಿಕರಾದ ಶ್ರೀಶೈಲ ಜಿಗಜಿನ್ನಿ ಹಾಗೂ ಸಹ ಮಾಲಿಕರಾದ ಅನಂತ ಧೋಂಗಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುರಿಗಾಹಿಗಳ ಹಿತರಕ್ಷಣಾ ಕಾಯ್ದೆ ಅಂಗೀಕಾರಕ್ಕೆ ಸ್ವಾಗತ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.26–ಸಾಂಪ್ರದಾಯಿಕ ಅಲೆಮಾರಿ ಕುರಿಗಾಹಿಗಳ ಹಿತರಕ್ಷಣಾ ಕಾಯ್ದೆ ಅಂಗೀಕಾರಗೊಳ್ಳುವಲ್ಲಿ ಮುತುವರ್ಜಿ ವಹಿಸಿದ ಸರ್ಕಾರದ ಕ್ರಮವನ್ನು ಕರ್ನಾಟಕ ಪ್ರದೇಶ ಕುರುಬರ ಪದವೀಧರರ ಸಂಘ ಸ್ವಾಗತಿಸಿದೆ.

ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಯಂಕಣ್ಣ ಬಬಲಾದಿ, ಹಣಮಂತ ಯಮಗಾರ ಮಾತನಾಡಿ, ರಾಜ್ಯದ ನಾನಾ ಕಡೆಗಳಲ್ಲಿ ಸಾಂಪ್ರದಾಯಿಕ ಅಲೆಮಾರಿ ಕುರಿಗಾಹಿಗಳ ಮೇಲೆ ಆಗಾಗ್ಗೆ ದೌರ್ಜನ್ಯಗಳು ನಡೆಯುತ್ತಲೇ ಇವೆ. ಇಂತಹ ಕೃತ್ಯಗಳ ತಡೆಗೆ ಪರಿಣಾಮಕಾರಿ ಕಾನೂನು ಅಗತ್ಯವಾಗಿತ್ತು ಎಂದರು.

ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಕೆ. ವೆಂಕಟೇಶ, ಶಾಸಕ ಭೀಮಸೇನ ಚಿಮ್ಮನಕಟ್ಟಿ ಅವರಿಗೆ ಅಭಿನಂದನೆ ಸಲ್ಲಿಸುವುದಾಗಿ ಹೇಳಿ, ಕುರಿಗಾಹಿಗಳ ಹಿತರಕ್ಷಣಾ ಮಸೂದೆ ಅಂಗೀಕಾರ ಆಗಿರುವುದು ಸಂತಸದ ಸಂಗತಿ ಎಂದು ತಿಳಿಸಿದರು. ಶಿವಲಿಂಗ ನಿಂಗನೂರ, ಎಂ.ಡಿ.ಬಿಲ್ಲಾರ, ರಾಘವೇಂದ್ರ ಯಾದಗಿರಿ, ತಿಪ್ಪಣ್ಣ ದೇವರೆಡ್ಡಿ ಇತರರು ಇದ್ದರು.

# ಜಿಲ್ಲಾ ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿಯಾಗಿ ವಿನೋದ ಅಪ್ಪೆ ನೇಮಕ





ಬೀದರ. ಆ. 26 : ಜಿಲ್ಲಾ ಕಾಂಗ್ರೆಸ್ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ವಿನೋದ ಅಪ್ಪೆ ಅವರನ್ನು ಮರು ನೇಮಕ ಮಾಡಲಾಗಿದೆ. ರಾಜ್ಯದ ಅರಣ್ಯ, ಪರಿಸರ ಹಾಗೂ ಜೀವಶಾಸ್ತ್ರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆ ಅವರ ಆದೇಶದ ಮೆರೆಗೆ ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ಅವರು ಈ ಮರು ಆದೇಶ ಪತ್ರ ಹೊರಡಿಸಿದ್ದಾರೆ.

ವಿನೋದ ಅಪ್ಪೆ ಅವರು ಕಳೆದ ಎರಡು ದಶಕಗಳಿಂದ ಪಕ್ಷದಲ್ಲಿ ನಿಷ್ಠಾವಂತಕಾರ್ಯಕರ್ತನಾಗಿ,ವಿವಿಧ ಹುದ್ದೆಗಳಲ್ಲಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದ್ದಾನೆ. ಇತ್ತೀಚೀಗೆ ಪಕ್ಷದ ಜಿಲ್ಲಾ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಮಾಡಿರುತ್ತಾರೆ. ಮತ್ತೆ ಅದೆ ಹುದ್ದೆಯಲ್ಲಿ ಮರು ನೇಮಕ ಮಾಡಲಾಗಿದೆ.

ಇವರ ಪಕ್ಷ ನಿಷ್ಠೆಯನ್ನು ಮನಗಂಡು ಪಕ್ಷವು ಈ ಜಿಲ್ಲಾ ಪ್ರಧಾನ ಕಾರ್ಯದರ್ಶಿಯ ಮಹತ್ತರ ಜವಾಬ್ದಾರಿ ನೀಡಿದ್ದು,ಪಕ್ಷದ ನೀತಿ, ನಿಯಮಗಳನ್ನು ಅನುಸರಿಸಿ, ಪಕ್ಷದ ಸಿದ್ಧಾಂತಗಳಿಗೆ ಮನ್ನಿಸಿ ನಡೆದುಕೊಳ್ಳುತ್ತಿರೆಂಬ ವಿಶ್ವಾಸದಡಿ ಈ ನೇಮಕ ಆದೇಶ ಪತ್ರ ಪ್ರದಾನ ಮಾಡಲಾಗುತ್ತಿದೆ ಎಂದು ಜಾಬಶೆಟ್ಟಿ ತಿಳಿಸಿದ್ದಾರೆ.

ಸೋಮವಾರ ಭಾಲ್ಕಿ ಪಟ್ಟಣದ ಸಚಿವ ಈಶ್ವರ ಖಂಡ್ರೆ ಅವರ ನಿವಾಸದಲ್ಲಿ ಸಚಿವರ ಸಮಕ್ಷಮದಲ್ಲಿ ಈ ಮರು ಆದೇಶ ಪತ್ರ ವಿತರಿಸಲಾಯಿತು.

ಪಕ್ಷದ ಜಿಲ್ಲಾಧ್ಯಕ್ಷ ಬಸವರಾಜ ಜಾಬಶೆಟ್ಟಿ ಜೊತೆಗೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹಮ್ಮದ್ ಸಮಿ, ಪಕ್ಷದ ಇನ್ನಿತರ ಮುಖಂಡರು ಈ ಸಂದರ್ಭದಲ್ಲಿದ್ದರು.

# ಶಾಂತಿ, ನೆಮ್ಮದಿಗೆ ಇಷ್ಟಲಿಂಗ ಪೂಜೆ ಮಾಡಿ



ಬೀದರ. ಆ. 26 : ಜೀವನದಲ್ಲಿಶಾಂತಿ,ನೆಮ್ಮದಿಗೆನಿತ್ಯ ಇಷ್ಟಲಿಂಗಪೂಜೆಮಾಡಬೇಕುಎಂದು ಜಾಗತಿಕಲಿಂಗಾಯತಮಹಾಸಭಾದ ಕೇಂದ್ರಸಮಿತಿಯಹಿರಿಯಉಪಾಧ್ಯಕ್ಷ ಬಸವರಾಜ ಬುಳ್ಳಾ ಹೇಳಿದರು. ನಗರದ ಜ್ಞಾನಸುಧಾ ವಿದ್ಯಾಲಯ ಸಮೀಪದ ಬಸವ ಮಂಟಪದಲ್ಲಿ ಭಾನುವಾರ ನಡೆದ ಶರಣರ ದರ್ಶನ ಪ್ರವಚನಸಮಾರೋಪಸಮಾರಂಭದಲ್ಲಿ ಷಟ್‌ಸ್ಥಲಧ್ವಜಾರೋಹಣ ನೆರವೇರಿಸಿ ಅವರುಮಾತನಾಡಿದರು.ಲಿಂಗವಂತರು ಏಕದೇವೋಪಾಸಕರಾಗಬೇಕು.ಶರಣ ಸತಿ,ಲಿಂಗಪತಿತತ್ವವನ್ನುಪಾಲಿಸಬೇಕು ಎಂದು ತಿಳಿಸಿದರು. ಪ್ರವಚನ ನಡೆಸಿಕೊಟ್ಟರಾಷ್ಟ್ರೀಯಬಸವದಳದ ಕ್ರಿಯಾ ಮೂರ್ತಿ ಸುರೇಶಸ್ವಾಮಿ ಮಾತನಾಡಿ,ವಚನಗಳನ್ನುಎಲ್ಲರೂ ಅಧ್ಯಯನ ಮಾಡಬೇಕು. ಅವುಗಳಸಂದೇಶನಿತ್ಯಜೀವನದಲ್ಲಿ ಅಳವಡಿಸಿಕೊಳ್ಳಬೇಕುಎಂದುಹೇಳಿದರು. ಬಸವಾದಿಶರಣರವಚನಗಳುಜೀವನ ಸಾರವನ್ನು ಒಳಗೊಂಡಿವೆ. ಅನೇಕ ಶರಣರು ತ್ಯಾಗ, ಬಲಿದಾನದ ಮೂಲಕಅವುಗಳನ್ನುಸಂರಕ್ಷಿಸಿದ್ದಾರೆ. ವಚನಗಳನ್ನುಮುಂದಿನ ಪೀಳಿಗೆಗೆ ತಲುಪಿಸುವ ಮೂಲಕ ಅವರ ತ್ಯಾಗ, ಬಲಿದಾನವನ್ನುಗೌರವಿಸಬೇಕಾಗಿದೆ ಎಂದು ತಿಳಿಸಿದರು. ರಾಷ್ಟ್ರೀಯ ಬಸವದಳದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ ಅಧ್ಯಕ್ಷತೆ ವಹಿಸಿದ್ದರು. ರೇಣುಕಾ ಓಂಕಾರ ಕುಂಚಗೆ ದಂಪತಿ ಗುರು ಪೂಜೆ ನೆರವೇರಿಸಿದರು. ಜಿಲ್ಲಾ ಲಿಂಗಾಯತ ಸಮಾಜದ ಅಧ್ಯಕ್ಷ ಕುಶಾಲರಾವ್ ಪಾಟೀಲ ಖಾಜಾಪುರ, ಉದ್ಯಮಿ ಚಂದ್ರಶೇಖರ ಹೆಬ್ಬಾಳೆ, ಡಾ. ಚನ್ನಬಸವ ಪಟ್ಟದ್ದೇವರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಜೈರಾಜ ಖಂಡ್ರೆ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಮಾಜಿ ಅಧ್ಯಕ್ಷ ರಾಜೇಂದ್ರಕುಮಾರ ಗಂದಗೆ, ರಾಷ್ಟ್ರೀಯ ಬಸವ ದಳದ ಬೀದರ್ ನಗರ ಘಟಕದ ಅಧ್ಯಕ್ಷ ವಿವೇಕಾನಂದ ಧನ್ನೂರ,ಬೀದರ್ ತಾಲ್ಲೂಕು ಅಧ್ಯಕ್ಷ ಸಂಜುಕುಮಾರ ಪಾಟೀಲ,ವಿಲಾಸ್ ಪಾಟೀಲ,ನೆಹರೂ ಸ್ವಾಮಿ,ರಮೇಶ ಪಾಟೀಲ ಚಿಕ್ಕಪೇಟ್, ಮಹೇಶ ಬಿರಾದಾರ ಉಪಸ್ಥಿತರಿದ್ದರು. ಕೆ.ಕೆ. ಕಲ್ಯಾಣ ಮಂಟಪದ ಮಾಲೀಕ ಕಂಟೆಪ್ಪ ಗಂದಿಗುಡೆ,ಸಂಗೀತ ಶಿಕ್ಷಕ ಏಕನಾಥ ಸಿದ್ಧೇಶ್ವರೆ ವಚನ ಸಂಗೀತ ನಡೆಸಿಕೊಟ್ಟರು.ಸುನೀಲ್ ಗಂದಿಗುಡೆ ಸ್ವಾಗತಿಸಿದರು.ಗಂಗಶೆಟ್ಟಿ ಪಾಟೀಲ ನಿರೂಪಿಸಿದರು.ವಿಜಯಕುಮಾರ ಬಾಬಣೆ ವಂದಿಸಿದರು.

# ಹವಾ ಮಲ್ಲಿನಾಥ ಮಹಾರಾಜರ ಜನ್ಮದಿನ ವಿಶಿಷ್ಟ ಆಚರಣೆ ಪೊಲೀಸ್ ಇಲಾಖೆಗೆ 21 ಬ್ಯಾರಿಕೇಡ್ ಕೊಡುಗೆ



ಪ್ರತಿ ವರ್ಷ ಸಮಾಜಮುಖಿ ಕಾರ್ಯಗಳೊಂದಿಗೆ ಹವಾ ಮಲ್ಲಿನಾಥ ಮಹಾರಾಜರ ಜನ್ಮದಿನ ಆಚರಿಸಿಕೊಂಡು ಬರುತ್ತಿದ್ದೇವೆ. ಈ ಬಾರಿ ನಗರದಲ್ಲಿ ಸಂಚಾರ ದಟ್ಟಣೆ ಹಾಗೂ ಅಪಘಾತ ನಿಯಂತ್ರಣದ ಪೊಲೀಸರ ಕಾರ್ಯಕ್ಕೆ ಸಹಕರಿಸಲು ಸಮಿತಿ ವತಿಯಿಂದ ಇಲಾಖೆಗೆ ಬ್ಯಾರಿಕೇಗಳನ್ನು ಕೊಡುಗೆಯಾಗಿ ನೀಡಲಾಗಿದೆ.

ಪಪ್ಪು ಪಾಟೀಲ ಖಾನಾಪುರ
ಜೈ ಭಾರತ ಮಾತಾ ರಾಷ್ಟ್ರೀಯ ಸೇವಾ ಸಮಿತಿಯ ಭಾಲ್ಕಿ ತಾಲ್ಲೂಕು ಅಧ್ಯಕ್ಷ

ಬೀದರ ಆ. 26 : ಜೈ ಭಾರತ ಮಾತಾ ರಾಷ್ಟ್ರೀಯ ಸೇವಾ ಸಮಿತಿಯು ಪೊಲೀಸ್ ಇಲಾಖೆಗೆ 21 ಬ್ಯಾರಿಕೇಡ್‌ಗಳನ್ನು ಕೊಡುಗೆಯಾಗಿ ನೀಡುವ ಮೂಲಕ ಮಂಗಳವಾರ ಇಲ್ಲಿ ಸಮಿತಿಯ ರಾಷ್ಟ್ರೀಯ ಸಂಸ್ಥಾಪಕ ಅಧ್ಯಕ್ಷ ಹವಾ ಮಲ್ಲಿನಾಥ ಮಹಾರಾಜರ ಜನ್ಮದಿನವನ್ನು ವಿಶಿಷ್ಟವಾಗಿ ಆಚರಿಸಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯಲ್ಲಿನಡೆದ ಕಾರ್ಯಕ್ರಮದಲ್ಲಿ ಸಮಿತಿಯ ಭಾಲ್ಕಿ ತಾಲ್ಲೂಕು ಘಟಕದ ಅಧ್ಯಕ್ಷ ಪಪ್ಪು ಪಾಟೀಲ ಖಾನಾಪುರ ಅವರು ಪೊಲೀಸ್ ಇಲಾಖೆಗೆ ಬ್ಯಾರಿಕೇಡ್‌ಗಳನ್ನು ಹಸ್ತಾಂತರಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಂಸದ ಸಾಗರ್ ಖಂಡ್ರೆ ಅವರು, ಸಮಿತಿ ಪ್ರತಿ ವರ್ಷ ಸಾಮಾಜಿಕ ಚಟುವಟಿಕೆಗಳೊಂದಿಗೆ ಹವಾ ಮಲ್ಲಿನಾಥ ಮಹಾರಾಜರ ಜನ್ಮದಿನ ಆಚರಿಸುತ್ತಿರುವುದು ಪ್ರಶಂಸನೀಯ ಎಂದು ಹೇಳಿದರು.

ಪೊಲೀಸರು ಸಾರ್ವಜನಿಕರ ಸುರಕ್ಷತೆಗೆ ಶ್ರಮಿಸುತ್ತಾರೆ. ಹೀಗಾಗಿ ಸಾರ್ವಜನಿಕರು ಅವರಿಗೆ ಸಹಕಾರ ನೀಡಬೇಕು. ಇಲಾಖೆಗೆ ಬ್ಯಾರಿಕೇಡ್ ಕೊಡುಗೆಯಾಗಿ ನೀಡಿದ ಸಮಿತಿ ಕಾರ್ಯ ಮಾದರಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಂಘ ಸಂಸ್ಥೆಗಳು ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಮಾತನಾಡಿ, ಹವಾ ಮಲ್ಲಿನಾಥ ಮಹಾರಾಜರು ಸಮಾಜೋಧಾರ್ಮಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ತಿಳಿಸಿದರು. ಜೈ ಭಾರತ ಮಾತಾ ರಾಷ್ಟ್ರೀಯ ಸೇವಾ ಸಮಿತಿ ಇಲಾಖೆಗೆ ಬ್ಯಾರಿಕೇಡ್ ವಿತರಿಸಿ ಅವರ ಜನ್ಮದಿನ ಆಚರಿಸಿರುವುದು ಉತ್ತಮ ಬೆಳವಣಿಗೆ ಎಂದರು. ಹುಲಸೂರಿನ ಶಿವಾನಂದ ಸ್ವಾಮೀಜಿ,ಹಲಬರ್ಗಾದ ಹಾವಗಿಲಿಂಗೇಶ್ವರ ಶಿವಾಚಾರ್ಯ, ಮಳಚಾಪುರದ ಸದ್ರೂಪಾನಂದ ಸ್ವಾಮೀಜಿ,ಅಮೃತಪ್ಪ ಮತ್ತ್ಯಾ ಕೌಠಾ ಸಾನಿಧ್ಯ, ಜೈ ಭಾರತ ಮಾತಾ ರಾಷ್ಟ್ರೀಯ ಸೇವಾ ಸಮಿತಿಯ ಭಾಲ್ಕಿ ತಾಲ್ಲೂಕು ಅಧ್ಯಕ್ಷ ಪಪ್ಪು ಪಾಟೀಲ ಖಾನಾಪುರ ಅಧ್ಯಕ್ಷತೆ ವಹಿಸಿದ್ದರು. ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ, ಡಿವೈಎಸ್‌ಪಿ ಶಿವನಗೌಡ ಪಾಟೀಲ, ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಘಟನಾ ಸಂಚಾಲಕ ಮಾರುತಿ ಬೌದ್ಧೆ, ಪ್ರಮುಖರಾದ ಮಾಣಿಕ ಮೇತ್ರೆ, ಗಂಗಾಧರ ಶಾಸ್ತ್ರಿ, ಚಂದ್ರಶೇಖರ ಕಟ್ಟೆ, ಸತೀಶ್ ಪಾಟೀಲ, ನಂದೀಶ್ ಪಾಟೀಲ, ಅಜಯ್ ಕುದ್ರೆ, ಆದೇಶ ಚಿಮಕೋಡೆ, ಆನಂದ ರಾಂಪುರೆ, ವಿಶಾಲ್ ಬಂಟಿ, ಅಜಯ್ ದೀನೆ, ಕೃಷ್ಣ ವಾರಿಕ್, ಪ್ರಣವ್ ಶಿವಪೂಜೆ, ನಿತೀಶ್ ಪಾಟೀಲ, ನಾಗೇಶ ಪಾಟೀಲ, ಸಾಯಿನಾಥ ತೆಲಂಗ್, ಅಜಯ್ ಮಂಡಲ್, ಆಕಾಶ್ ಸ್ವಾಮಿ, ಮಲ್ಲಿಕಾರ್ಜುನ ಮೇತ್ರೆ, ಸುನೀಲ್ ಮಡಿವಾಳ, ಸಂತೋಷ್, ಆನಂದ ಪಾಟೀಲ, ಶ್ರೀಕಾಂತ ಭಾವನಿ, ಕೈಲಾಶ ಹಳ್ಳೆ, ಭಗವಾನ್, ವೀರಶೆಟ್ಟಿ ಕೊಳಾರ, ಆಕಾಶ್ ಜನವಾಡ, ಸಿದ್ದು ಮಮದಾಪುರೆ, ದೀಪಕ್ ಪಾಟೀಲ, ರೋಹಿತ್, ಸುನೀಲ್, ಬಸವರಾಜ, ಗೌಸೊದ್ದೀನ್, ಮಹಾದೇವ ಪಾಟೀಲ ಮತ್ತಿತರರು ಇದ್ದರು. ದೀಪಕ್ ಥಮಕೆ ನಿರೂಪಿಸಿದರು.

# ನವೀಕೃತ ಹೈಟೆಕ್ ಹೊಂಡಾ ಶೋ ರೂಂ ಉದ್ಘಾಟನೆ



ಬೀದರ. ಆ. 26 : ನಗರದ ಫತೇ ದರ್ವಾಜಾ ಬಳಿ ನವೀಕೃತ ಹೈಟೆಕ್ ಹೊಂಡಾ ಶೋ ರೂಂ ಅನ್ನು ಮಂಗಳವಾರ ಉದ್ಘಾಟಿಸಲಾಯಿತು. ಹೊಂಡಾ ಶೋ ರೂಂ ಜಿಲ್ಲೆಯ ಗ್ರಾಹಕರ ಸಹಕಾರದಿಂದ ತೀವ್ರಗತಿಯಲ್ಲಿ ಬೆಳವಣಿಗೆ ಕಂಡಿದೆ. ಗ್ರಾಹಕರ ಪ್ರೀತಿ, ವಿಶ್ವಾಸವನ್ನು ಉಳಿಸಿಕೊಂಡು ಬಂದಿದೆ. ಇದೀಗ ಅತ್ಯಾಧುನಿಕ

ಸೌಲಭ್ಯಗಳನ್ನು ಒಳಗೊಂಡ ನವೀಕೃತ ಹೈಟೆಕ್ ಹೊಂಡಾ ಶೋ ರೂಂ ಅನ್ನು ಉದ್ಘಾಟಿಸಲಾಗಿದೆ ಎಂದು ಶೋ ರೂಂ ಮಾಲೀಕ ಪ್ರಸಿದ್ಧ ಉದ್ಯಮಿ ರಮೇಶ್ ಗೋಯಲ್ ತಿಳಿಸಿದರು. ಹೊಂಡಾ ಕಂಪನಿ ಎಂ. ಶ್ರೀವಾತ್ಸವ್ ಸಾಪ್ರಾದೇಶಿಕ ವ್ಯವಸ್ಥಾಪಕರು, ಪ್ರವೀಣ್ ಶರ್ಮಾ,ದೇವಿಪ್ರಸಾದ್ ಮೊಂಡಲ್, ಶೇಷಾದ್ರಿ ಎನ್, ಮುಹಮ್ಮದ್ ಇಸ್ಮಾಯಿಲ್ ನದಾಫ್, ಮುರಳೀಧರನ್, ವಿಷ್ಣು, ಉದ್ಯಮಿಗಳಾದ ನಿತಿನ್ ಗೋಯಲ್, ಪ್ರವೀಣ್ ಗೋಯಲ್ ಮತ್ತಿತರರು ಇದ್ದರು.

# ಚಿತ್ರಕಲೆಯಲ್ಲಿ ಬಸವ ಸಂಸ್ಕೃತಿ ಅನಾವರಣ



ಬೀದರ. ಆ. 26 : ಬಸವ ಸಂಸ್ಕೃತಿ ಅಭಿಯಾನ ಅಂಗವಾಗಿ ಅಭಿಯಾನ ಸಮಿತಿಯು ಇಲ್ಲಿಯ ಐಎಂಎ ಹಾನಲ್ಲಿ ಸೋಮವಾರ ಆಯೋಜಿಸಿದ್ದ ಬಸವ ಸಂಸ್ಕೃತಿ ಆಧಾರಿತ ಜಿಲ್ಲಾಮಟ್ಟದ ಚಿತ್ರಕಲಾ ಸ್ಪರ್ಧೆಯಲ್ಲಿ ಬಸವ ಸಂಸ್ಕೃತಿ ಅನಾವರಣಗೊಂಡಿತು.

ಬಸವಾದಿ ಶರಣರ ಚಿತ್ರ, ಕಲ್ಯಾಣ ಕ್ರಾಂತಿ, ವಚನ ಸಾಹಿತ್ಯ ಇತ್ಯಾದಿಗಳು ಚಿತ್ರಕಲೆಯಲ್ಲಿ ಅರಳಿದವು.

ವಿದ್ಯಾರ್ಥಿಗಳು 12ನೇ ಶತಮಾನದಲ್ಲಿ ಸಮಾನತೆಗಾಗಿ ನಡೆದಿದ್ದ ಕಲ್ಯಾಣ ಕ್ರಾಂತಿ, ಶರಣರು ರಚಿಸಿದ ವಚನ ಸಾಹಿತ್ಯ, ಬಸವಣ್ಣ, ಅಲ್ಲಮಪ್ರಭು, ಅಕ್ಕ ಮಹಾದೇವಿ ಮೊದಲಾದವರ ಚಿತ್ತಾಕರ್ಷಕ ಚಿತ್ರಗಳನ್ನು ಬಿಡಿಸಿದರು.

5 ರಿಂದ 10ನೇ ತರಗತಿ ಹಾಗೂ ಪಿಯುಸಿಯಿಂದ ಪದವಿವರೆಗೆ ಎರಡು ಪ್ರತ್ಯೇಕ ವಿಭಾಗಗಳಲ್ಲಿ ಸ್ಪರ್ಧೆ ನಡೆದವು. ಜಿಲ್ಲೆಯ ವಿವಿಧೆಡೆಯ 150 ಸ್ಪರ್ಧಾಳುಗಳು ತಮ್ಮ ಕಲ್ಪನೆಯ ಬಸವ ಸಂಸ್ಕೃತಿಗೆ ಚಿತ್ರದ ಸ್ವರೂಪ ನೀಡಿದರು.

ಪ್ರತ್ಯೇಕ ವಿಭಾಗಗಳ ಚಿತ್ರಕಲಾ ಸ್ಪರ್ಧೆಯ ವಿಜೇತರಿಗೆ ನಗರದ ಬಿ.ವಿ. ಭೂಮರಡ್ಡಿ ಕಾಲೇಜಿನಲ್ಲಿ ಸೆ. 3 ರಂದು ನಡೆಯಲಿರುವ ಬಸವ ಸಂಸ್ಕೃತಿ ಅಭಿಯಾನದ ಪ್ರಧಾನ ಸಮಾರಂಭದಲ್ಲಿ ನಗದು ಬಹುಮಾನ ಹಾಗೂ ಪ್ರಮಾಣ ಪತ್ರ ನೀಡಲಾಗುವುದು ಎಂದು ಬೀದರ್ ಬಸವ ಸಂಸ್ಕೃತಿ ಅಭಿಯಾನ ಸಮಿತಿಯ ಅಧ್ಯಕ್ಷ ಬಸವರಾಜ ಧನ್ನೂರ ಪ್ರಕಟಿಸಿದರು.

ಖ್ಯಾತ ಚಿತ್ರಕಲಾವಿದರಾದ ಸಿ.ಬಿ. ಸೋಮಶೆಟ್ಟಿ, ಶ್ರೀಕಾಂತ ಬಿರಾದಾರ, ಬಡಿಗೇರ ತೀರ್ಪುಗಾರರಾಗಿದ್ದರು. ಯೋಗೀಶ್ ಚಿತ್ರಕಲಾ ಕಾಲೇಜಿನ ಯೋಗೀಶ್ ಮಠದ, ರೇವಣಕುಮಾರ ಸೋಮಶೆಟ್ಟಿ, ರಾಜಕುಮಾರ ಶಂಭು, ಸ್ಫೂರ್ತಿ ಧನ್ನೂರ, ಜಗದೀಶ್ ಪಾಟೀಲ, ರಾಜಕುಮಾರ ಕಮಠಾಣೆ, ಯೋಗೀಶ್ ಸಿರಿಗಿರೆ, ವೀರಶೆಟ್ಟಿ ಪಾಟೀಲ ಮರಕಲ್, ಅರವಿಂದ ಕಾರಬಾರಿ ಮತ್ತಿತರರು ಇದ್ದರು.

# ಜಿಲ್ಲಾ ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿಯಾಗಿ ಜಾರ್ಜ್ ಫರ್ನಾಂಡಿಸ್ ನೇಮಕ



ಬೀದರ. ಆ. 26 : ಜಿಲ್ಲಾ ಕಾಂಗ್ರೆಸ್ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಜಾರ್ಜ್ ಫರ್ನಾಂಡಿಸ್ ಅವರನ್ನು ನೇಮಿಸಲಾಗಿದೆ.

ರಾಜ್ಯದ ಅರಣ್ಯ, ಪರಿಸರ ಹಾಗೂ ಜೀವಶಾಸ್ತ್ರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆ ಅವರ ಆದೇಶದ ಮೆರೆಗೆ ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ಅವರು ಈ ಆದೇಶ ಹೊರಡಿಸಿದ್ದಾರೆ.

ಜಾರ್ಜ್ ಫರ್ನಾಂಡಿಸ್ ಅವರು ಕಳೆದ ಒಂದು ವರೆ ದಶಕಗಳಿಂದ ಪಕ್ಷದಲ್ಲಿ ನಿಷ್ಠಾವಂತ ಕಾರ್ಯಕರ್ತನಾಗಿ, ವಿವಿಧ ಹುದ್ದೆಗಳಲ್ಲಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದ್ದಾನೆ.

ಇತ್ತಿಚೀಗೆ ಪಕ್ಷದ ಜಿಲ್ಲಾ ವಕ್ತಾರರಾಗಿ, ಇದಕ್ಕೂ ಮುನ್ನ ಜಿಲ್ಲಾ ಕಾರ್ಯದರ್ಶಿಯಾಗಿ ಸೇವೆ ಮಾಡಿರುತ್ತಾರೆ.

ಇವರ ಪಕ್ಷ ನಿಷ್ಠೆಂ೧ು೧ನ್ನ್ನು ಮನಗಂಡು ಪಕ್ಷವು ಈ ಜಿಲ್ಲಾ ಪ್ರಧಾನ ಕಾರ್ಯದರ್ಶಿಯ ಮಹತ್ತರ ಜವಾಬ್ದಾರಿ ನೀಡಿದ್ದು, ಪಕ್ಷದ ನೀತಿ,ನಿಯಮಗಳನ್ನು ಅನುಸರಿಸಿ, ಪಕ್ಷದ ಸಿದ್ಧಾಂತಗಳಿಗೆ ಮನ್ನಿಸಿ ನಡೆದುಕೊಳ್ಳುತ್ತಿರೆಂಬ ವಿಶ್ವಾಸದಡಿ ಈ ನೇಮಕ ಆದೇಶ ಪತ್ರ ಪ್ರದಾನ ಮಾಡಲಾಗುತ್ತಿದೆ ಎಂದು ಜಾಬಶೆಟ್ಟಿ ತಿಳಿಸಿದ್ದಾರೆ.

ಸೋಮವಾರ ಭಾಲ್ಕಿ ಪಟ್ಟಣದ ಸಚಿವ ಈಶ್ವರ ಖಂಡ್ರೆ ಅವರ ನಿವಾಸದಲ್ಲಿ ಸಚಿವರ ಸಮಕ್ಷಮದಲ್ಲಿ ಈ ಆದೇಶ ಪತ್ರ ವಿತರಿಸಲಾಯಿತು.

ಪಕ್ಷದ ಜಿಲ್ಲಾಧ್ಯಕ್ಷ ಬಸವರಾಜ ಜಾಬಶೆಟ್ಟಿ ಜೊತೆಗೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹಮ್ಮದ್ ಸಮಿ, ಪಕ್ಷದ ಇನ್ನಿತರ ಮುಖಂಡರು ಈ ಸಂದರ್ಭದಲ್ಲಿದ್ದರು.

# ಆನ್ ಲೈನ್ ಆಟ ನಿಷೇಧ ಸ್ವಾಗತಾರ್ಹ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.26:ದೇಶದಲ್ಲಿ ಆನ್‌ಲೈನ್ ಆಟ ನಿಷೇಧಿಸಲು ಕೇಂದ್ರ ಸರಕಾರ ಮುಂದಾಗಿರುವ ಕ್ರಮವನ್ನು ನಮ್ಮ ಕರ್ನಾಟಕ ಸೇನೆಯ ಪದಾಧಿಕಾರಿಗಳು ಸ್ವಾಗತಿಸಿದ್ದಾರೆ.

ಈ ಕುರಿತು ಲೋಕಸಭೆಯಲ್ಲಿ ಆನ್‌ಲೈನ್ ಗೇಮ್ ನಿಯಂತ್ರಣ ವಿಧಯೇಕ-2025 ಪಾಸ್ ಮಾಡಿರುವ ಹಿನ್ನೆಲೆಯಲ್ಲಿ ನಮ್ಮ ಕರ್ನಾಟಕ ಸೇನೆಯ ಜಿಲ್ಲಾಧ್ಯಕ್ಷ ಗಣೇಶ ಪಾಟೀಲ್ ಜ್ಯಾಂತಿ ನೇತೃತ್ವದಲ್ಲಿ ಪಟ್ಟಣದ ಕನ್ನಡಾಂಬೆ ವೃತ್ತದಲ್ಲಿ ಪದಾಧಿಕಾರಿಗಳು ಜಮಾಯಿಸಿ ಒಬ್ಬರಿಗೊಬ್ಬರು ಸಿಹಿ ವಿನಿಮಯ ಮಾಡಿಕೊಂಡು ಸಂಭ್ರಮಿಸಿದರು.

ರಾಜ್ಯಾದ್ಯಂತ ಆನ್ ಲೈನ್ ಗೇಮ್ ನಿಷೇಧಿಸುವಂತೆ ಆಗ್ರಹಿಸಿ ಕಳೆದ ಎರಡು ವರ್ಷಗಳಿಂದ ನಮ್ಮ ಕರ್ನಾಟಕ ಸೇನೆಯ ರಾಜಾಧ್ಯಕ್ಷ ಬಸವರಾಜ ಪಡುಕೋಟೆ ನೇತೃತ್ವದಲ್ಲಿ ಹೋರಾಟ ಮಾಡಿಕೊಂಡು ಬರಲಾಗಿದೆ.

ಇದೀಗ ಕೇಂದ್ರ ಸರಕಾರ ಈ ವಿಧೇಯಕ ಜಾರಿಗೆ ತಂದಿರುವುದು ಸ್ವಾಗತಾರ್ಹ ಎಂದು ನಮ್ಮ ಕರ್ನಾಟಕ ಸೇನೆ ಜಿಲ್ಲಾಧ್ಯಕ್ಷ ಗಣೇಶ ಪಾಟೀಲ್ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ನಮ್ಮ ಕರ್ನಾಟಕ ಸೇನೆ ತಾಲೂಕು ಅಧ್ಯಕ್ಷ ಬಸವರಾಜ ಕಾರಬಾರಿ, ಯುವ ಘಟಕದ ಜಿಲ್ಲಾಧ್ಯಕ್ಷ ಸುದೀಪ ತೂಗಾಂವೆ, ಯುವ ಘಟಕದ ತಾಲೂಕು ಅಧ್ಯಕ್ಷ ಕಾಶಿನಾಥ ಚಳಕಾಪೂರೆ, ಜಗನ್ನಾಥ ಪಾಟೀಲ್, ಮಹೇಶ ರಾಚೋಟೆ, ಶೈಲೇಶ ಕರಂಜೆ, ಸಂಗಮೇಶ ಮಾರ್ಗೆ, ಬಾಲಾಜಿ ಮೇಗೆ, ಧನರಾಜ ಧನ್ನೂರ, ರಾಬೀನ್ ಹಲಗೆ, ಜೀವನ, ಸಾಗರ, ವಿಷ್ಣು ಡಾವರಗಾಂವೆ, ಪ್ರದೀಪ ಮದರಗಾಂವೆ, ಸಂದೇಶ ಬಿರಾದಾರ್ ಸೇರಿದಂತೆ ಮುಂತಾದವರು ಇದ್ದರು.

# ಅದ್ದೂರಿಯಾಗಿ ನಡೆದ ಡಿಗ್ಗಿ ಮಡಿವಾಳೇಶ್ವರ ದೇವರ ಪಲ್ಲಕ್ಕಿ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.26:ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ಶ್ರಾವಣ ಮಾಸ ಸಮಾಪ್ತಿ ಕಾರ್ಯಕ್ರಮದ ಅಂಗವಾಗಿ ಮಂಗಳವಾರ ಪಲ್ಲಕ್ಕಿ ಉತ್ಸವ ವಿಜೃಂಭಣೆಯಿಂದ ಜರುಗಿತು.

ಸೋಮವಾರ ರಾತ್ರಿಯಿಂದ ನಿರಂತರವಾಗಿ ನಡೆದಭಜನೆ ಕಾರ್ಯಕ್ರಮ ನಸುಕಿನ ಜಾವ 5 ಗಂಟೆ ವರೆಗೆ ನಡೆಯಿತು. ಬೆಳಿಗ್ಗೆ 6 ಗಂಟೆಗೆ ಮಡಿವಾಳೇಶ್ವರ ದೇವರ, ಪಲ್ಲಕ್ಕಿ ಉತ್ಸವಕ್ಕೆ ಟ್ರಸ್ಟ್'ನ ಅಧ್ಯಕ್ಷ ದೇವೇಂದ್ರ ಪಾಟೀಲ ಚಾಲನೆ ನೀಡಿದರು.

ಗ್ರಾಮದ ಪ್ರಮುಖ ಬಿದಿಗಳಿಂದ ಸಾಗಿದ ಪಲ್ಲಕ್ಕಿಮೆರವಣಿಗೆ, ಹನುಮಾನ ದೇವಾಲಯ, ಗ್ರಾಮಕಟ್ಟೆ, ಲಕ್ಷ್ಮಿ ಕಟ್ಟೆ, ಭಾಗ್ಯವಂತಿ ದೇವಾಲಯ, ಅಗ್ಗಿ ಬಸವಣ್ಣ ಕಟ್ಟೆ ಹತ್ತಿರ ತಲುಪಿತು, ಮೇರವಣಿಗೆ ಉದ್ದಕ್ಕೂ ಭಾಜ ಭಜಂತ್ರಿ, ಕೋಲಾಟ, ಲೇಜಿಮ್, ಭಜನೆ ಪದಗಳಿಗೆ ಅಕ್ಕನ ಬಳಗ ಹಾಗೂ ಅನ್ನ ಬಳಗ ಮೈಮರೆತು ಕುಣಿದು ಸಂಭ್ರಮದಿಂದ ಪಲ್ಲಕ್ಕಿ ಉತ್ಸವ ಆಚರಣೆ ಮಾಡಿದರು.

ಸೋಮವಾರ ರಾತ್ರಿಯಿಂದ ನಿರಂತರವಾಗಿ ನಡೆದಭಜನೆ ಕಾರ್ಯಕ್ರಮ ನಸುಕಿನ ಜಾವ 5 ಗಂಟೆ ವರೆಗೆ ನಡೆಯಿತು. ಬೆಳಿಗ್ಗೆ 6 ಗಂಟೆಗೆ ಮಡಿವಾಳೇಶ್ವರ ದೇವರ, ಪಲ್ಲಕ್ಕಿ ಉತ್ಸವಕ್ಕೆ ಟ್ರಸ್ಟ್'ನ ಅಧ್ಯಕ್ಷ ದೇವೇಂದ್ರ ಪಾಟೀಲ ಚಾಲನೆ ನೀಡಿದರು.

ಗ್ರಾಮದ ಪ್ರಮುಖ ಬಿದಿಗಳಿಂದ ಸಾಗಿದ ಪಲ್ಲಕ್ಕಿಮೆರವಣಿಗೆ, ಹನುಮಾನ ದೇವಾಲಯ, ಗ್ರಾಮಕಟ್ಟೆ, ಲಕ್ಷ್ಮಿ ಕಟ್ಟೆ, ಭಾಗ್ಯವಂತಿ ದೇವಾಲಯ, ಅಗ್ಗಿ ಬಸವಣ್ಣ ಕಟ್ಟೆ ಹತ್ತಿರ ತಲುಪಿತು, ಮೇರವಣಿಗೆ ಉದ್ದಕ್ಕೂ ಭಾಜ ಭಜಂತ್ರಿ, ಕೋಲಾಟ, ಲೇಜಿಮ್, ಭಜನೆ ಪದಗಳಿಗೆ ಅಕ್ಕನ ಬಳಗ ಹಾಗೂ ಅನ್ನ ಬಳಗ ಮೈಮರೆತು ಕುಣಿದು ಸಂಭ್ರಮದಿಂದ ಪಲ್ಲಕ್ಕಿ ಉತ್ಸವ ಆಚರಣೆ ಮಾಡಿದರು.

ತಮ್ಮ ಮನೆ ಬಾಗಿಲಿಗೆ ಬಂದ, ವರ್ಷಕ್ಕೆ ಒಮ್ಮೆ ಬರುವ ಗ್ರಾಮ ದೇವರನ್ನು ಭಕ್ತಿ ಭಾವದಿಂದ ತೆಂಗಿನಕಾಯಿ, ಕರಪೂರ ಬೆಳಗಿ ಪೂಜೆ ಮಾಡಿ, ಫ್ಯಾಮಿಲಿ ಫೋಟೋ ತೆಗೆದುಕೊಂಡು ಆನಂದ ಪಟ್ಟರು. ಮೆರವಣಿಗೆಯಲ್ಲಿ ಭಕ್ತರು ಪ್ರಸಾದ ವ್ಯವಸ್ಥೆ ಮಾಡಿದರು.

ಕಾರ್ಯಕ್ರಮದಲ್ಲಿ ಗ್ರಾಮದ ಹಿರಿಯರು ಕಿರಿಯರು, ಅಣ್ಣನ ಬಳಗ, ಅಕ್ಕನ ಬಳಗ ಎಲ್ಲರೂ ಒಗ್ಗೂಡಿ ಜಾತ್ರೆ ಯಶಸ್ವಿ ಮಾಡಿದರು. ಕಮಲನಗರ ಪೊಲೀಸ್ ಠಾಣೆ ಪಿ.ಎಸ್.ಐ ಆಶಾ ರಾಠೋಡ ಅವರ ನೇತೃತ್ವದಲ್ಲಿ ಭದ್ರತೆ ನೀಡಿದರು.

# ಗಣೇಶ ಹಬ್ಬ: ನಂ.15 ಗೋನಾಳ್, ಹೊನ್ನಳ್ಳಿ ಗ್ರಾಮಗಳಲ್ಲಿ ನಿಷೇಧ

## ಸಾರ್ವಜನಿಕವಾಗಿ ಗಣೇಶ ಮೂರ್ತಿ ಕೂಡಿಸದಂತೆ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಆದೇಶ

ಬಳ್ಳಾರಿ,ಆ.26:ಜಿಲ್ಲೆಯ ಕಂಪ್ಲಿ ಪೊಲೀಸ್ ಠಾಣೆ ವ್ಯಾಪ್ತಿಯ ನಂ.15 ಗೋನಾಳ್ ಮತ್ತು ಕುಡತಿನಿ ಪೊಲೀಸ್ ಠಾಣೆ ವ್ಯಾಪ್ತಿಯ ಹೊನ್ನಳ್ಳಿ ಗ್ರಾಮಗಳಲ್ಲಿ ಪ್ರಸ್ತಕ ಸಾಲಿನ ಗಣೇಶ ಹಬ್ಬದ ಪ್ರಯುಕ್ತ ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿಗಳನ್ನುಪ್ರತಿಷ್ಠಾಪಿಸುವುದು,ಈ ಸಂಬಂಧಯಾವುದೇ ಮನರಂಜನಾ ಕಾರ್ಯಕ್ರಮ ಆಯೋಜಿಸುವುದು ಹಾಗೂ ಜನಸಂದಣಿ ಸೇರುವುದನ್ನು ನಿಷೇಧಿಸಿ ಜಿಲ್ಲಾದಂಡಾಧಿಕಾರಿಯೂ ಆದಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.



ಕಂಪ್ಲಿ ಪೊಲೀಸ್ ಠಾಣೆ ವ್ಯಾಪ್ತಿಯ ನಂ.15 ಗೋನಾಳ್ ಮತ್ತು ಕುಡತಿನಿ ಪೊಲೀಸ್ ಠಾಣೆ ವ್ಯಾಪ್ತಿಯ ಹೊನ್ನಳ್ಳಿ ಗ್ರಾಮಗಳಲ್ಲಿ ಪ್ರಕ್ಷುಬ್ಧ ವಾತಾವರಣ ನಿರ್ಮಾಣವಾಗಿದ್ದು, ದ್ವೇಷದ ಹಗೆತನವನ್ನುಯಾವುದಾದರೊಂದು ರೀತಿಯಲ್ಲಿ ತೀರಿಸಿಕೊಳ್ಳಲು ಸಮಯ, ಸಂದರ್ಭಾನುಸಾರ ಕಾಯುತ್ತಿರುತ್ತಾರೆಂದು ಸಂಶಯ ಇದೆ.ಹಾಗಾಗಿ, ಈ ಗ್ರಾಮಗಳಲ್ಲಿ ಗಣೇಶ ಹಬ್ಬ ಆಚರಣೆ ಮಾಡಿದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕದಡುವ ಸಂಭವವಿರುವುದರಿಂದಹಾಗೂಮುಂದೆ ನಡೆಯಬಹುದಾದಘಟನೆಗಳನ್ನು ತಡೆಹಿಡಿಯುವ, ಕಾನೂನುಮತ್ತು ಸುವ್ಯವಸ್ಥೆಕಾಪಾಡುವಹಿತದೃಷ್ಟಿಯಿಂದ ಕರ್ನಾಟಕಪೊಲೀಸ್ ಕಾಯ್ದೆ 1963ರಕಲಂ35ರನ್ವಯ ಪ್ರದತ್ತವಾದ ಅಧಿಕಾರಚಲಾಯಿಸಿ ಈ ಗ್ರಾಮಗಳಲ್ಲಿ ಪ್ರಸ್ತಕ ಸಾಲಿನ ಗಣೇಶ ಹಬ್ಬದ ಪ್ರಯುಕ್ತ ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿಗಳನ್ನುಪ್ರತಿಷ್ಠಾಪಿಸುವುದು,ಈ ಸಂಬಂಧಯಾವುದೇ ಮನರಂಜನಾ ಕಾರ್ಯಕ್ರಮ ಆಯೋಜಿಸುವುದು ಹಾಗೂ ಜನಸಂದಣಿ ಸೇರುವುದನ್ನು ನಿಷೇಧಿಸಿ ಅವರು ಆದೇಶಿಸಿದ್ದಾರೆ.

# ಆ.28 ರಂದು ಮಹನೀಯರ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆ

ಬಳ್ಳಾರಿ,ಆ.26:ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಸೆ.07 ರಂದು ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಮತ್ತು ಸೆ.17 ರಂದು ವಿಶ್ವಕರ್ಮ ಜಯಂತಿ ಆಚರಣೆ ಕುರಿತಂತೆ ಚರ್ಚಿಸಲು ಆಗಸ್ಟ್ 28 ರಂದು ಸಂಜೆ 04 ಗಂಟೆಗೆ ಸಹಾಯಕ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಆಯೋಜಿಸಲಾಗಿದೆ.

ಸಭೆಗೆಸಂಬಂಧಿಸಿದಇಲಾಖಾಧಿಕಾರಿಗಳು, ಸಮಾಜದ ಮುಖಂಡರು ತಪ್ಪದೇ ಭಾಗವಹಿಸಿ,ಮಹನೀಯರ ಜಯಂತಿ ಆಚರಣೆಗೆ ಸಂಬಂಧಿಸಿದಂತೆ ಸಲಹೆ ನೀಡಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

# ಎಚ್.ಐ.ವಿ-ಏಡ್ಸ್ ಅರಿವಿನ ಮಾಸಾಚರಣೆ

## ಜನಜಾಗೃತಿ ಬೈಕ್ ರ್‍ಯಾಲಿಗೆ ನ್ಯಾ.ಚಂದ್ರಶೇಖರ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.26-ಎಚ್.ಐ.ವಿ, ಏಡ್ಸ್ ತೀವ್ರಗೊಳಿಸಿದ ಅರಿವಿನ ಮಾಸಾಚರಣೆ-2025ರ ಅಂಗವಾಗಿ ಹಮ್ಮಿಕೊಂಡ ಜನಜಾಗೃತಿ ಬೈಕ್ ರ್‍ಯಾಲಿಗೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಮಂಗಳವಾರ ಚಾಲನೆ ನೀಡಿದರು. ಕರ್ನಾಟಕ ರಾಜ್ಯ ಏಡ್ಸ್ ಪ್ರವೇನಷನ್ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಜಿಲ್ಲಾ ಆಸ್ಪತ್ರೆ ಹಾಗೂ ಜಿಲ್ಲಾ ಏಡ್ಸ್ ಪ್ರತಿಬಂಧಕ, ನಿಯಂತ್ರಣ ಘಟಕ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡ ಬೈಕ್ ರ್‍ಯಾಲಿ ಜಿಲ್ಲಾ ಆಸ್ಪತ್ರೆಯಿಂದ ಪ್ರಾರಂಭವಾಗಿ ನಗರಸಭೆ, ಎಲ್.ಐ.ಸಿ ವೃತ್ತ, ಪೊಲೀಸ್ ಪ್ಯಾಲೇಸ್, ನವನಗರ ಬಸ್ ನಿಲ್ದಾಣದ ಮಾರ್ಗವಾಗಿ ಜಿಲ್ಲಾಡಳಿತ ಭವನಕ್ಕೆ ಮುಕ್ತಾಯಗೊಂಡಿತು. ಬೈಕ್ ರ್‍ಯಾಲಿಯಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಪಾಲ್ಗೊಂಡಿದ್ದರು. ಎಲ್ಲಾದರೂ ಇರು, ಹೇಗಾದರೂ ಇರು, ಏಡ್ಸ್ ರೋಗದಿಂದ ಮುಕ್ತವಾಗಿರು, ಯುವಜನರೇ ಒಂದಾಗಿ, ಎಚ್.ಐ.ವಿ-ಏಡ್ಸ್ ತಡೆಗಟ್ಟಲು ಮುಂದಾಗಿ ಸೇರಿದಂತೆ ಅನೇಕ ಘೋಷವಾಕ್ಯಗಳ ಫಲಕಗಳನ್ನು ರ್‍ಯಾಲಿಯುದ್ದಕ್ಕೂ ಪ್ರದರ್ಶಿಸಲಾಯಿತು.

ರ್‍ಯಾಲಿಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ.ಎನ್, ಜಿಲ್ಲಾ ಶಸ್ತ್ರ ಚಿಕಿತ್ಸಕ ಮಹೇಶ ಕೋಣಿ, ಜಿಲ್ಲಾ ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣಾಧಿಕಾರಿ ಡಾ.ಸುವರ್ಣಾ ಕುಲಕರ್ಣಿ, ಉಪ ಆರೋಗ್ಯ ಶಿಕ್ಷಣಾಧಿಕಾರಿ ಶ್ರೀಕಾಂತ ಹಡ್ಲಗೇರಿ, ಜಿಲ್ಲಾ ಏಡ್ಸ್ ಪ್ರತಿಬಂಧಕ, ನಿಯಂತ್ರಣ ಘಟಕದ ಜಿಲ್ಲಾ ಮೇಲ್ವಿಚಾರಕ ಎಂ.ಎಚ್.ಸುಬೇದಾರ ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# ಗ್ರಾಮೀಣ ಪುನರ್ವಸತಿ

## ಕಾರ್ಯಕರ್ತ ಹುದ್ದೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.26: ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವ್ಯಾಪ್ತಿಯ ಜಿಲ್ಲೆಯ ಕುಕನೂರು ತಾಲೂಕಿನ ಮಂಡಲಗೇರಿ ಗ್ರಾಮ ಪಂಚಾಯತಿಯಲ್ಲಿ ಖಾಲಿ ಇರುವ ಗ್ರಾಮೀಣಪುನರ್ವಸತಿಕಾರ್ಯಕರ್ತರ ಹುದ್ದೆಗೆ ತಾತ್ಕಾಲಿಕವಾಗಿ ಮಾಸಿಕ ಗೌರವಧನದ ಆಧಾರದಲ್ಲಿ ನೇಮಕ ಮಾಡಿಕೊಳ್ಳಲು ಗ್ರಾಮ ಪಂಚಾಯತಿ ವ್ಯಾಪ್ತಿಯ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಯ್ಕೆಯಾದ ಅಭ್ಯರ್ಥಿಗೆ ಮಾಸಿಕ ರೂ.10,000/-ಗಳ ಗೌರವಧನವನ್ನು ನೀಡಲಾಗುವುದು. ನಿಗದಿತ ಅರ್ಜಿ ನಮೂನೆಯನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿಯಿಂದ ಪಡೆದು ಆಗಸ್ಟ್ 28 ರಿಂದ ಸೆಪ್ಟೆಂಬರ್ 6 ರೊಳಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರ ಕಾರ್ಯಾಲಯ ಆವರಣ, ಕೊಠಡಿ ಸಂಖ್ಯೆ 31,32 ಜಿಯೋ ಪೆಟ್ರೋಲ್ ಬಂಕ್ ಎದುರುಗಡೆ, ಹೊಸಪೇಟೆ ರಸ್ತೆ, ಕೊಪ್ಪಳ ರವರಿಗೆ ಕಛೇರಿ ಅವಧಿಯಲ್ಲಿ ಸಲ್ಲಿಸಬೇಕು. ಹುದ್ದೆಯು ಸಂಪೂರ್ಣವಾಗಿ ಗೌರವಧನದ ಆಧಾರದ ಮೇಲೆ ಹಾಗೂ ತಾತ್ಕಾಲಿಕ ಹುದ್ದೆಯಾಗಿರುತ್ತದೆ. ನಿಗದಿಪಡಿಸಿದ ದಿನಾಂಕದ ನಂತರ ಬಂದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 18-45 ವರ್ಷ ಒಳಗಿನ ನಿರುದ್ಯೋಗಿ ಅಂಗವಿಕಲರಾಗಿರಬೇಕು. ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣ ಹೊಂದಿರಬೇಕು. ಜೊತೆಗೆ ಕಡ್ಡಾಯವಾಗಿ ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ವಿಶೇಷ ಶಿಕ್ಷಣ, ಆರ್ ಸಿ ಐ ತರಬೇತಿ, ದಿವ್ಯಾಂಗ ಮಿತ್ರ ತರಬೇತಿ, ಸಜ್ಞೆಭಾಷೆ ತರಬೇತಿ, ದೈಹಿಕ ವ್ಯಾಯಾಮ ತರಬೇತಿ ವಿಶೇಷ ಜ್ಞಾನಗಳನ್ನು ಪಡೆದಿರುವ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಅಂಗವಿಕಲರ ವಿಶಿಷ್ಟ ಗುರುತಿನ ಚೀಟಿಯನ್ನು (ಯು.ಡಿ.ಐ.ಡಿ) ಕಡ್ಡಾಯವಾಗಿ ಹೊಂದಿದವರಾಗಿರಬೇಕು. ಅಂಗವಿಕಲತೆಯು ಕನಿಷ್ಠ ಶೇ.40 ರಷ್ಟಿರಬೇಕು. (ಭಾಗಶ: ಅಂಧರಿಗೆ, ಭಾಗಶ: ಶ್ರವಣ ದೋಷವುಳ್ಳವರಿಗೆ ಮತ್ತು ದೈಹಿಕ ಅಂಗವಿಕಲರಿಗೆ). ಮಂಡಲಗೇರಿ ಗ್ರಾಮ ಪಂಚಾಯತಿ ವ್ಯಾಪ್ತಿಯ ನಿವಾಸಿಯಾಗಿರಬೇಕು. (ಗ್ರಾಮ ಪಂಚಾಯತಿ ದೃಢೀಕರಣ), ತಹಶೀಲ್ದಾರರಿಂದ ಪಡೆದ ಜಾತಿ, ಆದಾಯ ಮತ್ತು ವಾಸಸ್ಥಳ ಪ್ರಮಾಣ ಪತ್ರವನ್ನು ಲಗತ್ತಿಸಬೇಕು. ವಿಕಲಚೇತನರ ಕಲ್ಯಾಣಕ್ಕಾಗಿ ಕೆಲಸ ಮಾಡಿದ ಅನುಭವವಿದ್ದಲ್ಲಿ ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕುಕನೂರು ತಾಲೂಕಿನ ಎಂ.ಆರ್.ಡಬ್ಲ್ಯೂ (ಪ್ರ) ಶರಣಯ್ಯ ದೂ:9886240203 ಹಾಗೂ ಜಿಲ್ಲಾ ಕಛೇರಿಯ ದೂರವಾಣಿ ಸಂಖ್ಯೆ:08539-295496 ಅಥವಾ ಕಛೇರಿ ಅವಧಿಯಲ್ಲಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಳಮೀಸಲಾತಿ ಜಾರಿ: ಸಿಎಂಗೆ ಅಭಿನಂದನಾ ಸಮಾರಂಭ : ಗಾಳೆಪ್ಪ ಪೂಜಾರ್




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.26: ಪರಿಶಿಷ್ಟ ಸಮುದಾಯದಲ್ಲಿನ ನೊಂದ ಜನರಿಗೆ ಒಳಮೀಸಲಾತಿ ಜಾರಿ ಮೂಲಕ ಸಾಮಾಜಿಕ ನ್ಯಾಯ ಕಲ್ಪಿಸುವ ಮೂಲಕ ಸಿಎಂ ಸಿದ್ದರಾಮಯ್ಯ ಶಕ್ತಿ ತುಂಬುವ ಕೆಲಸ ಮಾಡಿದ್ದಾರೆ ಎಂದು ಮಾದಿಗ ಸಮಾಜದ ಮುಖಂಡ ಗಾಳೆಪ್ಪ ಪೂಜಾರ್ ಹೇಳಿದರು.ನಗರದ ತಹಸೀಲ್ ಕಚೇರಿಯಲ್ಲಿನ ಕೆಯುಡಬ್ಲ್ಯೂಜೆ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.ಒಳಮೀಸಲಾತಿ ಜಾರಿಗಾಗಿ ಕಳೆದ 35 ವರ್ಷಗಳಿಂದ ನಿರಂತರ ಹೋರಾಟ ಮಾಡಿಕೊಂಡು ಬಂದಿದ್ದೇವೆ. ಹಲವಾರು ಅಡತಡೆಗಳ ಮಧ್ಯೆಯು ಕೂಡ ಪರಿಶಿಷ್ಟ ಜಾತಿಯಲ್ಲಿನ ಒಳಮೀಸಲಾತಿಯಲ್ಲಿ ಮಾದಿಗ ಮತ್ತು ಮಾದಿಗ ಉಪಜಾತಿಗಳನ್ನು ಪ್ರವರ್ಗ-1ಕ್ಕೆ ಸೇರಿಸಿ ಮಾದಿಗರಿಗೆ ಸಿಗಬೇಕಾದ ಶೇ.6 ಮೀಸಲಾತಿ ನೀಡಿ, ಪರಿಶಿಷ್ಟ ಜಾತಿಗಳಿಗೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಶಕ್ತಿ ತುಂಬುವ ಕೆಲಸವನ್ನು ಸಿಎಂ ಸಿದ್ದರಾಮಯ್ಯ ಹಾಗೂ ಸಚಿವ ಸಂಪುಟದ ಸಚಿವರು, ಎಲ್ಲಾ ಶಾಸಕರು ಮಾಡಿದ್ದಾರೆ. ಒಳಮೀಸಲಾತಿ ಜಾರಿಗಾಗಿ ರಾಜ್ಯ ಸರ್ಕಾರದ ಮೇಲೆ ಹಗಲಿರುಳು ಪ್ರತಿಭಟನೆ, ಕಾಲ್ನಡಿಗೆ, ಅರೆಬೆತ್ತಲೆ ಮೆರವಣಿಗೆ, ಉಪವಾಸ ಸತ್ಯಾಗ್ರಹ, ಅನಿರ್ದಿಷ್ಟ ಧರಣಿ ಸತ್ಯಾಗ್ರಹ, ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆ ಸೇರಿದಂತೆ ಅನೇಕ ಹೋರಾಟ ಮಾಡಿದರ ಫಲವಾಗಿ ನಮಗೆ ಮೀಸಲಾತಿ ಜಾರಿಗೊಳಿಸಲಾಗಿದೆ ಎಂದರು.

ಒಳಮೀಸಲಾತಿ ಜಾರಿಗೊಳಿಸಿದ ಸಿಎಂ ಸಿದ್ದರಾಮಯ್ಯನವರು ಸೇರಿದಂತೆ ಸಚಿವರಿಗೆ ಹಾಗೂ ಶಾಸಕರಿಗೆ ಜಿಲ್ಲಾ ಮಾದಿಗ ಸಮಾಜದಿಂದ ಅಭಿನಂದನಾ ಕಾರ್ಯಕ್ರಮ ಆಯೋಜಿಸಿ, ಅವರಿಗೆ ಗೌರವ ಸಲ್ಲಿಸುವ ಕೆಲಸ ಮಾಡುತ್ತೇವೆ. ಸಿಎಂ ಸಿದ್ದರಾಮಯ್ಯನವರ ಕೊಪ್ಪಳ ಭೇಟಿ ದಿನಾಂಕ ನಿಗದಿಪಡಿಸಿಕೊಂಡು ಕಾರ್ಯಕ್ರಮದ ರೂಪರೇಷ ತಯಾರಿಸಿ, ಬೃಹತ್ ಮಟ್ಟದಲ್ಲಿ ಕಾರ್ಯಕ್ರಮ ಆಯೋಜಿಸುತ್ತೇವೆ. ಅಲ್ಲದೇ ಒಳಮೀಸಲಾತಿ ಜಾರಿಗಾಗಿ ಹೋರಾಡಿದ ಅನೇಕ ಹಿರಿಯ ಜೀವಗಳು ನಮ್ಮನ್ನು ಅಗಲಿದ್ದು, ಅವರಿಗೆ ಸಂತಾಪ ಸೂಚಿಸುವ ಕೆಲಸ ಮಾಡುತ್ತೇವೆ ಎಂದರು. ಈ ಸಂದರ್ಭದಲ್ಲಿ ಮಾದಿಗ ಸಮಾಜದ ಮುಖಂಡರಾದ ಹನುಮೇಶ ಕಡೇಮನಿ, ರಾಮಣ್ಣ ಚೌಡ್ಕಿ, ಯಲ್ಲಪ್ಪ ಹಳೇಮನಿ, ನಿಂಗಜ್ಜ ಬಂಡಿಹರ್ಲಾಪುರ, ಪರಶುರಾಮ ಕೆರೆಹಳ್ಳಿ, ಮಲ್ಲು ಪೂಜಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬಿಡುವಿಲ್ಲದೆ ಕೆಲಸ ಮಾಡಿಸುತ್ತಿರುವ ಪೊಲೀಸ್ ಇಲಾಖೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.26: ಜಿಲ್ಲೆಯಾದ್ಯಂತ ಗಣೇಶನ ಹಬ್ಬದ ಪ್ರಯುಕ್ತ ಪೊಲೀಸ್ ಬಂದೋಬಸ್ತ್ ಮತ್ತು ಪರವಾನಿಗೆ ನಿಮಿತ್ತ ಕೊಪ್ಪಳ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಸಿಂಗಲ್ ವಿಂಡೋ ಮಾದರಿಯಲ್ಲಿ ಅಂದರೆ ಸಾರ್ವಜನಿಕ ಗಣೇಶ ಪರವಾನಿಗೆ ಸಲುವಾಗಿ ಒಂದೇ ಕಡೆ ಎಲ್ಲಾ ಪರವಾನಿಗೆಗಳು ಕೊಡುವ ವ್ಯವಸ್ಥೆಯನ್ನು ಮಾಡಲಾಗಿತ್ತು ತಾಲೂಕಿನ ಸುಮಾರು ಹಳ್ಳಿಗಳಲ್ಲಿ ಪ್ರತಿ ಹಳ್ಳಿಯಲ್ಲೂ ಪ್ರತಿ ವರ್ಷದಂತೆ ಗಣೇಶ ಪ್ರತಿಷ್ಠಾಪನೆ ಗೆ ಆಗಮಿಸಿದ್ದ ಸುಮಾರು ಹಳ್ಳಿಗಳ ಯುವಕರು ನಿನ್ನೆಯಿಂದಲೇ ಆಗಮಿಸಿದ್ದ ಯುವಕರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಒಂದೇ ಕಡೆ ಎಲ್ಲಾ ಪರವಾನಿಗೆಗಳು ದೊರಕುವುದರಿಂದ ಅಲೆದಾಡುವುದು ತಪ್ಪಿದಂತಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು ಸ್ಥಳೀಯ ಗ್ರಾಮೀಣ ಪೊಲೀಸ್ ಠಾಣೆ ಪಿಎಸ್ಐ ವೀರೇಶ್ ಮಾಳ ಶೆಟ್ಟಿ ಮಾತನಾಡಿ ಹಳ್ಳಿಗಳಿಂದ ಬಂದ ಯುವಕರಿಗೆ ಮತ್ತು ಯುವಕ ಮಿತ್ರ ಮಂಡಳಿಯವರಿಗೆ ತಿಳಿಹೇಳಿ ಎಲ್ಲಾ ಪರವಾನಿಗೆಗಳನ್ನು ಕೊಡಿಸುವ ವ್ಯವಸ್ಥೆ ಮಾಡಲಾಗಿದೆ ಮತ್ತು ಶಾಂತಯುತವಾಗಿ ಹಬ್ಬ ಆಚರಣೆ ಮಾಡಿ ಎಂದು ಹೇಳಲಾಗಿದೆ ಹಾಗೂ ಗಣೇಶ ವಿಸರ್ಜನೆ ವೇಳೆ ಮತ್ತು ಪ್ರತಿಷ್ಠಾಪನೆ ಸಮಯದಲ್ಲಿ ಏನಾದರೂ ಅಡಚಣೆಗಳು ಮತ್ತು ತೊಂದರೆಯಾದರೆ ನಮ್ಮ ಸ್ಥಳೀಯ ಪೊಲೀಸ್ ಸಿಬ್ಬಂದಿಗಳು ಅಲ್ಲೇ ಇದ್ದು ವಿಸರ್ಜನೆ ಮುಗಿಯವರೆಗೂ ಇದ್ದು ವಿಸರ್ಜನೆ ಮುಗಿದ ಮೇಲೆ ಬರುತ್ತಾರೆ ಎಂದು ಹೇಳಿದರು ಮತ್ತು ಪಿಒಪಿ ಗಣೇಶ ಬಳಸದಂತೆ ಎಚ್ಚರಿಕೆವಹಿಸಿ ಎಂದು ಹೇಳಿದರು ಮತ್ತು ಯಾವುದೇ ಸಿಡಿಮದ್ದು ಪಟಾಕ್ಷಿಗಳಂತಹ ಸಿಡಿಮದ್ದುಗಳನ್ನು ಬಳಸಬೇಡಿ ಎಂದು ಮನವಿ ಮಾಡಿದರು ಈ ಸಂದರ್ಭದಲ್ಲಿ ಸುಮಾರು ಹಳ್ಳಿಗಳಿಂದ ಬಂದಂತ ಯುವಕರು ಶ್ಲಾಘನೀಯ ವ್ಯಕ್ತಪಡಿಸಿದರು.

# ಹಿಂದುಳಿದ ವರ್ಗಗಳ ಸಮೀಕ್ಷೆ ಆರಂಭ:ವಿದ್ಯುತ್ ಮೀಟರ್ ರೀಡರ್ ಗಳ ಮೂಲಕ ಪ್ರತಿ ಮನೆಗಳ ಜಿಯೋ ಟ್ಯಾಗಿಂಗ್

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.26: ಕರ್ನಾಟಕ ರಾಜ್ಯ ಹಾಗೂ ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಪ್ರಾರಂಭಿಸಲಾಗಿದೆ ಇಂದು ಇರ್ಕಲ್ಗಡ ಭಾಗದ ಮತ್ತು ಹಳ್ಳಿಗಳಲ್ಲಿ ವಿದ್ಯುತ್ ಮೀಟರ್ ರೀಡರ್ ಗಳು ಎಲ್ಲಾ ಮನೆಗಳನ್ನು ಬಯೋ ಟ್ಯಾಗಿಂಗ್ ಕಾರ್ಯ ಪ್ರಾರಂಭಿಸಿದ್ದಾರೆ ಯಾವುದೇ ಮನೆಗಳು ತಪ್ಪಿ ಹೋಗದಂತೆ ಯಶಸ್ವಿಯಾಗಿ ಸಮೀಕ್ಷೆ ಕೈಗೊಳ್ಳಲು ರಾಜ್ಯದ ಮತ್ತು ಪ್ರತಿ ಹಳ್ಳಿಗಳ ಜನತೆ ಸಹಕರಿಸಬೇಕಾಗಿ ಎಂದು ಆಯೋಗದ ಅಧ್ಯಕ್ಷ ಮಧುಸೂದನ್ ಆರ್ ನಾಯಕ್ ತಿಳಿಸಿದ್ದಾರೆ.



ಈ ಕುರಿತು ಹೇಳಿಕೆ ನೀಡಿರುವ ಅವರು ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು 90 ದಿನಗಳಲ್ಲಿ ಪೂರ್ಣಗೊಳಿಸುವ ಬದ್ಧತೆಯೊಂದಿಗೆ ಹಮ್ಮಿಕೊಳ್ಳಲಾಗಿದೆ ಮೊದಲ ಹಂತದಲ್ಲಿ ಸಮೀಕ್ಷೆಗೆ ಸಂಬಂಧಿಸಿದ ಪೂರ್ವಭಾವಿ ಕೆಲಸಗಳಾಗಿರುವ ಮನೆ ಪಟ್ಟಿ ಮತ್ತು ಅವುಗಳ ನಕ್ಷೆ ಸಿದ್ಧಪಡಿಸುವ ಕಾರ್ಯವನ್ನು ಒಳಗೊಂಡಿರುತ್ತದೆ ರಾಜ್ಯಾದ್ಯಂತ ಎಲ್ಲಾ ಮನೆಗಳ ಸಂಪೂರ್ಣ ಎಣಿಕೆ ಅನುಕ್ರಮ ಸಂಖ್ಯೆಯನ್ನು ನೀಡುವ ಮತ್ತು ಮ್ಯಾಪಿಂಗ್ ಮಾಡುವ ಕೆಲಸವನ್ನು ಸಾಧ್ಯವಾಗುತ್ತದೆ ರಾಜ್ಯದಲ್ಲಿರುವ ಎಲ್ಲಾ ಮನೆಗಳಿಗೆ ವಿದ್ಯುತ್ ಸಂಪರ್ಕ ಇರುವುದರಿಂದ ವಾಸದ ಮನೆಗಳಿಗೆ ಆರ್ ಆರ್ ಮೀಟರ್ ಆಧಾರಗಳ ಮೇಲೆ ಮನೆಗಳನ್ನು ಗುರುತಿಸಿ ಅಲ್ಲಿರುವ ಜನರ ಸಮೀಕ್ಷೆ ಮಾಡುವುದರಿಂದ ಯಾವುದೇ ಮನೆಗಳು ಸಮೀಕ್ಷೆ ವ್ಯಾಪ್ತಿಯಿಂದ ತಪ್ಪಿ ಹೋಗುವುದಿಲ್ಲ ಎಂದು ಹೇಳಿದರು ಹಿಂದು ಇರ್ಕಲ್ಗಡ ಭಾಗದ ಮನೆಗಳಲ್ಲಿ ಶಂಕರ್ ನಾಯಕ್ ಈ ಕಾರ್ಯಕ್ರಮದ ಚಾಲನೆಯನ್ನು ಕೊಟ್ಟರು ಈ ಸಂದರ್ಭದಲ್ಲಿ ವಿದ್ಯುತ್ ಸರಬರಾಜು ಕಂಪನಿಯ ಕಾರ್ಯನಿರ್ವಾಹಕ ಅಭಿಯಂತರು ಸೈಯದ್ ಯುನಿಸ್ ಮತ್ತು ಶಾಖಾಧಿಕಾರಿ ರಾಘವೇಂದ್ರ ಗ್ರಾಮ ವಿದ್ಯುತ್ ಪ್ರತಿನಿಧಿ ಸಯ್ಯದ್ ವಾಜಿದ್ ಸಿದ್ದನಗೌಡ ಉಪಸ್ಥಿತರಿದ್ದರು.

# ತಂಗಡಗಿಯಲ್ಲಿ ಮಲ್ಲಿಕಾರ್ಜುನ ದೇವರ ಪಲ್ಲಕ್ಕಿ ಉತ್ಸವ



ಯಾದಗಿರಿ :ಅ.26: ತಾಲೂಕಿನ ತಂಗಡಗಿ ಗ್ರಾಮದ ಆರಾಧ್ಯದೇವರಾದ ಮಲ್ಲಿಕಾರ್ಜುನ ಮೂರ್ತಿಯ ಪಲ್ಲಕ್ಕಿ ಉತ್ಸವ ಸೋಮವಾರ ಅದ್ದೂ-ರಿಯಾಗಿ ಜರುಗುವ ಮೂಲಕ ಮೂಲ ಗದ್ದುಗೆಯಲ್ಲಿ ಕೂಡಿಸಿ ವಿಶೇಷ ಪೂಜೆ ಸಲ್ಲಿಸಲಾಯಿತು. ಈ ವೇಳೆ ಊರಿನವರೇ ಆದ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಭಾಗವಹಿಸಿ ಮಾತನಾಡಿ,

ಅತಿ ಪುರಾತನವಾದ ಈ ದೇಗುಲದಲ್ಲಿ ಶ್ರೀಶೈಲ್ ಮಲ್ಲಿಕಾರ್ಜುನ ದೇವಾಲಯದಂತೆಯೇ ಉದ್ಭವ ಲಿಂಗವು ಇಲ್ಲಿ ಉದ್ಭವಿಸಿದ್ದರಿಂದ ಎರಡನೇ ಶ್ರೀಶೈಲ್ ಎಂದೇ ಭಕ್ತರ ನಂಬಿಕೆ ಇದೆ ಎಂದರು.

ಇಂತಹ ದೇವಸ್ಥಾನದ ಮಲ್ಲಿಕಾರ್ಜುನ ಮೂರ್ತಿಯನ್ನು ಶ್ರಾವಣ ಮಾಸದ ಅಂಗವಾಗಿ ಪಕ್ಕದ ಗುರುಸುಣಗಿ ಗ್ರಾಮದ ಸಿದ್ಧಲಿಂಗೇಶ್ವರ ದೇವಸ್ಥಾನದಲ್ಲಿ ಕೂಡಿಸಿ ತಿಂಗಳ ಕಾಲ ಪಾದಪೂಜೆ ವಿಶೇಷ ಪೂಜೆ, ಅಭಿಷೇಕ ಕಾರ್ಯಕ್ರಮದ ಸಂಪ್ರದಾಯ ಮೊದಲಿನಿಂದಲ್ಲೂ ಬಂದಿದೆ. ಅದರಂತೆಯೇ ಈ ವರ್ಷವೂ ಜರುಗಿದ್ದು, ಈ ಪವಿತ್ರ ಮಾಸದ ಕೊನೆಯಲ್ಲಿ ಅಲ್ಲಿನ ಗುರುಸಿದ್ದೇಶ್ವರ ರ ಜಾತ್ರೆ ನಡೆದು ಮತ್ತೇ ಅಲ್ಲಿಂದ ತಂಗಡಗಿಗೆ ಪಲ್ಲಕ್ಕಿ ಮೂಲಕ ಮಲ್ಲಿಕಾರ್ಜುನ ದೇವರ ಮೂರ್ತಿ ತಂದು ಗ್ರಾಮದ ಅಗಸಿ ಸ್ವಾಗತಿಸಿ ಮೆರವಣಿಗೆ ಮೂಲಕ ದೇವಾಲಯದಲ್ಲಿ ಪ್ರತಿಷ್ಠಾಪಿಸಲಾಗಿದೆ ಎಂದು ಅವರು ಶಾಸಕರು ಹೇಳಿದರು. ಈ ವೇಳೆ ಮಾತನಾಡಿದ ದೇವಾಲಯದ ಅರ್ಚಕ ಶರಣಪ್ಪ ಪುಜಾರಿ, ಬರುವ ಭಾನುವಾರ ದೇವಾಲಯದಲ್ಲಿ 24 ತಾಸುಗಳ ನಿರಂತರ ಭಜನೆ ಕಾರ್ಯಕ್ರಮ ಮಾಡುವ ಮೂಲಕ ಸೋಮವಾರದಂದು ಶ್ರಾವಣಮಾಸದ ಮುಕ್ತಾಯವನ್ನು ಖಾಂಡ ಮೂಲಕ ಸಂಪನ್ನಗೊಳಿಸಲಾಗುವುದೆಂದರು.

ಈ ವೇಳೆ ಗ್ರಾಮಸ್ಥರಾದ ಗ್ರಾಮದ ಹಿರಿಯರಾದ ಹೊಸಮನಿ ಪರ್ವತರೆಡ್ಡಿ, ಮಾಲಿಗೌಡ ಶರ-ಣಗೌಡ, ಮಲ್ಲಣ್ಣಗೌಡ, ಬೋಳಾರಿ ಮಲ್ಲಣ್ಣಗೌಡ, ಶಿವರಾಜಪ್ಪಗೌಡ, ಗ್ರಾಮ ಎಲ್ಲಾ ಸಮಾಜದ ಹಿರಿಯ ಮುಖಂಡರು ಭಾಗವಹಿಸಿದ್ದರು.

# ಶಿವಲಿಂಗೇಗೌಡ ವರ್ತನೆಗೆ ಬಂಜಾರ ಸಮಾಜ ಅಸಮಾಧಾನ : ಸುರೇಶ್ ಬಳೂಟಗಿ



ಮಲ್ಲಮ್ಮ ನುಡಿವಾರ್ತೆ

ಕುಕನೂರ:ಅ.26:ಇತ್ತೀಚಿಗೆ ಸದನದಲ್ಲಿ ಅರಸಿಕೆರೆ ಶಾಸಕ ಶಿವಲಿಂಗೇಗೌಡ ಉಪಸಭಾಪತಿ ರುದ್ರಪ್ಪ ಲಮಾಣಿ ಕುರಿತು ಅವಹೇಳನಕಾರಿಯಾಗಿ ಮಾತನಾಡಿರುವುದು ಇಡೀ ಬಂಜಾರ ಸಮಾಜಕ್ಕೆ ಮಾಡಿದ ಅವಮಾನವಾಗಿದೆ ಎಂದು ಗೋರಸೇನಾ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ಸುರೇಶ ಬೊಳಟಗಿ ಹೇಳಿದರು.


ಕುಕನೂರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯನ್ನು ಕುರಿತು ಸುರೇಶ್ ಬೋಳೊಟಗಿ ಮಾತನಾಡಿದ ಕಾಂಗ್ರೆಸ್ ಪಕ್ಷದಿಂದ ಸತತವಾಗಿ ಬಂಜಾರ ಸಮಾಜದ ಕಡೆಗಣನೆ ಆಗುತ್ತಿದ್ದು ಇದಕ್ಕೆ ಇತ್ತೀಚಿಗೆ ಸದನದಲ್ಲಿ ಜರುಗಿದ ಶಿವಲಿಂಗೇಗೌಡ ಅವರ ವರ್ತನೆ ಪ್ರಮುಖ ಸಾಕ್ಷಿಯಾಗಿದ್ದು, ಒಬ್ಬ ಶಾಸಕರಾಗಿ ಉಪ ಸಭಾಪತಿಗಳ ಜೊತೆಗೆ ಯಾವ ರೀತಿ ವರ್ತಿಸಬೇಕೆಂಬ ಸಾಮಾನ್ಯ ಜ್ಞಾನವಿಲ್ಲದವರಂತೆ ಮಾತನಾಡಿರುವುದು ನಿಜಕ್ಕೂ ಬೇಸರದ ಸಂಗತಿಯಾಗಿದ್ದು ಶಿವಲಿಂಗೇಗೌಡ ಅವರ ನಾಲಿಗೆ ಮತ್ತು ಮೆದುಳುಗೆ ಸಂಪರ್ಕವೇ ಇಲ್ಲ ಎಂಬ ರೀತಿಯಲ್ಲಿ ವರ್ತನೆ ನಡೆಸಿರುತ್ತಾರೆ. ಜೊತೆಗೆ ಕಾಂಗ್ರೆಸ್ ಪಕ್ಷ ಸತತ ಬಂಜಾರರ ಹವಯೇಳನ ಮಾಡುತ್ತಿದ್ದು ಇದಕ್ಕೆ ತಾಜಾ ಉದಾಹರಣೆ ಎಂದರೆ ಮಂತ್ರಿಮಂಡಲದಲ್ಲಿ ಬಂಜಾರ ಸಮಾಜಕ್ಕೆ ಯಾವುದೇ ರೀತಿಯ ಮಂತ್ರಿ ಸ್ಥಾನ ನೀಡದೆ ಇರುವುದು ಜೊತೆಗೆ ಸಮಾಧಾನಕ್ಕೆ ಎಂದು ಉಪ ಸಭಾಪತಿ ಸ್ಥಾನ ನೀಡಿದ್ದರು ಸಹ ಉಪ ಸಭಾಪತಿ ಸ್ಥಾನಕ್ಕೆ ಗೌರವವಿಲ್ಲದಂತೆ ನಡೆದುಕೊಂಡಿರುವುದು ನೋಡಿದಾಗ ಅಂಬೇಡ್ಕರ್ ರವರನ್ನೇ ಕಡೆಗಣಿಸಿದ ಕಾಂಗ್ರೆಸ್ ಪಕ್ಷಕ್ಕೆ ಇನ್ನು ಉಳಿದವರು ಯಾವ ಲೆಕ್ಕ ಎಂಬ ಧೋರಣೆ ಕಾಣುತ್ತಿದೆ ಜೊತೆಗೆ ಒಳಮಿಸಲಾತಿ ವಿಷಯದಲ್ಲೂ ಸಹ ನಾಗಮೋಹನ್ ದಾಸ್ ಅವರ ವರದಿ ಬಂದಮೇಲೆ ಉತ್ತಮ ಫಲಿತಾಂಶ ದೊರೆಯುವ ವಿಶ್ವಾಸವಿದ್ದರೂ ಸಹ ಕೇವಲ 5% ಮೀಸಲಾತಿಯನ್ನು ನೀವು ನೂರಾರು ಸಮುದಾಯವನ್ನು ಒಗ್ಗೂಡಿಕೊಂಡು ನೀಡಿರುವುದು ಬಂಜಾರ ಸಮುದಾಯಕ್ಕೆ ಮಾಡಿರುವ ಅನ್ಯಾಯವಾಗಿದೆ ಎಂದು ಹೇಳಿದರು.

ಇದೆ ವೇಳೆಯಲ್ಲಿ ಇತ್ತೀಚೆಗೆ ಬಳ್ಳಾರಿ ರಾಯಚೂರು, ಕೊಪ್ಪಳ ವಿಜಯನಗರ ಹಾಲು ಒಕ್ಕೂಟಕ್ಕೆ ಶಾಸಕ ರಾಘವೇಂದ್ರ ಹಿಟ್ನಾಳ್ ಅವರನ್ನು ಮುಂಚೂಣಿಗೆ ತರವಲ್ಲಿ ಕಾಂಗ್ರೆಸ್ ಸರ್ಕಾರ ಪ್ರಯತ್ನಿಸಿ ಅಲ್ಲಿ ಅಧ್ಯಕ್ಷರಾಗಿದ್ದ ಬಂಜಾರ ಸಮಾಜದ ಮಾಜಿ ಶಾಸಕ ಭೀಮಾ ನಾಯಕ್ ಅವರನ್ನು ಹತ್ತಿಕುವ ಪ್ರಯತ್ನವಾಗಿದೆ ಎಂದು ಆರೋಪಿಸಿದರು. ಈ ಎಲ್ಲಾ ವಿಷಯವನ್ನು ವಿರೋಧಿಸಿ ಇದೆ 29 ಆಗಸ್ಟ್ 2025 ರಂದು ಶುಕ್ರವಾರ ಸರ್ಕಾರದ ಹಾಗೂ ಕಾಂಗ್ರೆಸ್ ಪಕ್ಷದ ಧೋರಣೆಯನ್ನು ವಿರೋಧಿಸಿ ಕುಕನೂರು ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದರು ಈ ವೇಳೆಯಲ್ಲಿ ಪ್ರಮುಖರಾದ ಪ್ರಕಾಶ್ ಬಳಗೇರಿ, ಯಮನೂರಪ್ಪ ಬಾಣಪುರ, ಓಬಣ್ಣ ಚೌಹಾಣ್, ಕುಮಾರ್ ಬಳಗೇರಿ, ಹನುಮಂತಪ್ಪ ಚವಾಣ್, ವಿಶ್ವನಾಥ್ ಕುಣಕೇರಿ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು

## ದುಬಲಗುಂಡಿ ವಲಯ ಮಟ್ಟದ ಕ್ರೀಡಾಕೂಟ



ಹುಮನಾಬಾದಗ್ರಾ:ಅ.26:ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಓತಗಿ ಇವರಸಂಯುಕ್ತಾಶ್ರಯದಲ್ಲಿ 2025–2026ನೇ ಸಾಲಿನ ದುಬಲಗುಂಡಿ ವಲಯ ಮಟ್ಟದ ಪ್ರಾಥಮಿಕ ಶಾಲಾ ಕ್ರೀಡಾಕೂಟವನ್ನು ಮಾಣಿಕ್ ಪ್ರಭು ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಓತಗಿ ಸರ್ಕಾರಿ ಶಾಲೆಯಮುಖ್ಯ ಶಿಕ್ಷಕ ಆನಂದರಾವ್‌ರವರುವಹಿಸಿಕೊಂಡಿದ್ದರು. ಮುಖ್ಯ ಅತಿಥಿಯಾಗಿ ಕಾಶಿನಾಥ್ ಬೋರಾಳೆ, ಕಿರಣ್ ಕುಲಕರ್ಣಿ, ಅತಿಥಿಗಳಾಗಿ ಸೂರ್ಯಕಾಂತ್, ಅನೀಲ್, ವಿಶ್ವನಾಥ್, ಅತಿಶ್, ಸುಭಾಷ್ ವಹಿಸಿಕೊಂಡಿದ್ದರು. ಕಾರ್ಯಕ್ರಮವನ್ನು ಧ್ಯಾನಚಂದ್ ಭಾವಚಿತ್ರಕ್ಕೆ ಪೂಜೆ ಮತ್ತು ಧ್ವಜಾರೋಹಣೆಯೊಂದಿಗೆಉದ್ಘಾಟಿಸಲಾಯಿತು. ಕಾರ್ಯಕ್ರಮದಲ್ಲಿ ಸುಮಾರು 12 ಶಾಲೆಯಿಂದ ಕ್ರೀಡಾಪಟುಗಳು ಮತ್ತು ದೈಹಿಕ ಶಿಕ್ಷಕರು ನಿರ್ಣಾಯಕರಾಗಿ ಭಾಗವಹಿಸಿದರು. ಕಾರ್ಯಕ್ರಮವನ್ನು ಓತಗಿ ಶಾಲೆಯ ಶಿಕ್ಷಕ ಬಸವರಾಜ್ ನಿರೂಪಿಸಿ ವಂದಿಸಿದರು.




ಹುಮನಾಬಾದ:ಕಲ್ಬುರ್ಗಿ ಪ್ರಾದೇಶಿಕ ಅರಣ್ಯ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಯಾಗಿ ಇತ್ತೀಚಿಗೆ ಅಧಿಕಾರ ವಹಿಸಿಕೊಂಡಿರುವ ಬಸವರಾಜ್ಯ ಡಾಂಗೆವರಿಗೆ ಪರಿಸರವಾದಿ ಶೈಲೇಂದ್ರ ಕಾವಡಿ ಸನ್ಮಾನಿಸಿ ಗೌರವಿಸಿದರು.

## ಯೂತ್ ಕಾಂಗ್ರೆಸ್ ಸಮಿತಿ ವತಿಯಿಂದ "Stop ಮತ ಕಳ್ಳತನ" ಎಂಬ ಘೋಷವಾಕ್ಯದಡಿ ಸ್ಟಿಕರ್ ಅಭಿಯಾನ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.26: ಮತ ಕಳ್ಳತನವು ಪ್ರಜಾಪ್ರಭುತ್ವದ ಮೇಲೆ ನಡೆಯುವ ಅತ್ಯಂತ ದೊಡ್ಡ ದ್ರೋಹ. ಜನರ ವಿಶ್ವಾಸ, ಹಕ್ಕು ಮತ್ತು ಮತದಾನ ಪವಿತ್ರತೆಯನ್ನು ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯ ಎಂಬ ಸಂದೇಶವನ್ನು ಈ ಅಭಿಯಾನದ ಮೂಲಕ ಸಾರ್ವಜನಿಕರಿಗೆ ತಲುಪಿಸಲಾಯಿತು.

ಈ ಸಂದರ್ಭದಲ್ಲಿ ಗಾಳೆಪ್ಪ ಪೂಜಾರ, ಮಂಜುನಾಥ್ ಜಿ ಗೊಂಡಬಾಳ, ಕಾಟನ್ ಪಾಷ್, ಲಿಂಗೇಶ್ ಕಲ್ಗುಡಿ, ಹಾಗೂ ಮಲ್ಲು ಪೂಜಾರ, ಜ್ಯೋತಿ ಗೊಂಡಬಾಳ, ಸಲೀಂ ಅಳವಂಡಿ, ಗವಿಸಿದ್ದನಗೌಡ ಮುದ್ದಾಬಳ್ಳಿ, ಪರಶುರಾಮ ಕೆರೆಹಳ್ಳಿ, ವಸಂತ್ ಹೊರತಟ್ನಾಳ, ಶಿಲ್ಪಾ ಗುಡ್ಲಾನೂರು, ಪ್ರಕಾಶ್ ಕಿನ್ನಾಳ, ದಾಸರೆಡ್ಡಿ ಅಳವಂಡಿ, ನಿಂಗೂ ಬೆಣಕಲ್, ಗಾಳೆಪ್ಪ ಪೂಜಾರ ಹಂದ್ರಾಳ, ಆನಂದ

ದೊಡ್ಡಮನಿ, ವೆಂಕಟೇಶ್ ಅಲ್ಲಾನಗರ, ಬೀರಪ್ಪ ಹಳೆಮನೆ, ಕೆ. ರೈನಾ ಪೂಜಾರ, ಗವಿ ಹೂಗಾರ, ಪರಶುರಾಮ ಪೂಜಾರ ಸೇರಿದಂತೆ ಅನೇಕ ನಾಯಕರು ಹಾಗೂ ಕಾರ್ಯಕರ್ತರು ಭಾಗವಹಿಸಿ ಕಾರ್ಯಕ್ರಮವನ್ನುಯಶಸ್ವಿಗೊಳಿಸಿದರು.

## ಗುಣಮಟ್ಟದ ಕಾಮಗಾರಿಗಳ ಅನುಷ್ಠಾನಕ್ಕೆ ಅಧಿಕಾರಿಗಳು ಗಮನ ನೀಡಿ : ಶಾಸಕ ಕಂದಕೂರ ಸೂಚನೆ




ಯಾದಗಿರಿ :ಅ.26: ಪ್ರಸಕ್ತ ದಿನಗಳಲ್ಲಿಗುರುಮಿಠಕಲ್ ಮತಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಗಳಿಂದ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು, ಅಂದಾಗ ಮಾತ್ರ ಜನರಿಗೆಬಹು ವರ್ಷ ಉಪಯೋಗಕ್ಕೆ ಅನುಕೂಲವಾಗುತ್ತದೆ, ಈ ನಿಟ್ಟಿನಲ್ಲಿ ಅಧಿಕಾರಿಗಳು ಎಚ್ಚರಿಕೆವಹಿಸಬೇಕೆಂದು ಗುರುಮಿಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಎಚ್ಚರಿಕೆ ನೀಡಿದರು.ಗುರುಮಿಠಕಲ್ ಮತಕ್ಷೇತ್ರದ ಸೌದಾಗರ ತಾಂಡಾದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಹಮ್ಮಿಕೊಂಡಿದ್ದ ಲೋಕೊಪಯೋಗಿ ಇಲಾಖೆಯಿಂದ ಹತ್ತಿಕುಣಿ ಗ್ರಾಮದಿಂದ–ಹತ್ತಿಕುಣಿ ಕ್ಯಾಂಪ್‌ವರೆಗೆ ರಾಜ್ಯ ಹೆದ್ದಾರಿ ರಸ್ತೆ 3 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸುವುದು, 1 ಕೋಟಿ ರೂ. ವೆಚ್ಚದಲ್ಲಿ ಸೌದಾಗಾರ ಕ್ರಾಸ್ ತಿರುವಿನಲ್ಲಿ ಅಪಘಾತ ವಲಯ ರಸ್ತೆ ಸುಧಾರಣೆ ಹಾಗೂ ಸೌದಾಗಾರ ತಾಂಡಾದ ಶಾಲೆಯಲ್ಲಿ 58 ಲಕ್ಷ ರೂ. ವೆಚ್ಚದಲ್ಲಿ 4 ಶಾಲಾ ಕೋಣೆಗಳ ನಿರ್ಮಾಣ ಕಾಮಗಾರಿಗಳಿಗೆ ಅಡಿಗಲ್ಲು ನೆರವೇರಿಸಿ ಮಾತನಾಡಿದರು.ಕೆಲ ತಿಂಗಳ ಹಿಂದೆ ಯಾದಗಿರಿ–ಸೇಡಂ ರಾಜ್ಯ ಹೆದ್ದಾರಿ 6 ಕಿ.ಮಿ ಚಾಮನಳ್ಳಿ ಕ್ರಾಸ್‌ನಿಂದ ಯಡ್ಡಳ್ಳಿ ಗ್ರಾಮದವರೆಗೆ 6 ಕೋಟಿ ರೂ, ವೆಚ್ಚದಲ್ಲಿ ರಸ್ತೆ ಅಭಿವೃದ್ಧಿಪಡಿಸುವ ಕಾಮಗಾರಿ ಕೈಗೊಳ್ಳಲಾಗಿತ್ತು, ಆದರೆ ನಾನು ಇಂದು ಇಲ್ಲಿಗೆ ಬರುವಾಗ ಆ ರಸ್ತೆಯಲ್ಲಿ ಅಲ್ಲಲ್ಲಿ ತಗ್ಗು–ಗುಂಡಿಗಳು ಬಿದ್ದೀವೆ, ಇದರಿಂದ ವಾಹನ ಸಂಚಾರರಿಗೆ ತೊಂದರೆಯಾಗಿದೆ, ಜನರು ನನ್ನನ್ನು ಪ್ರಶ್ನಿಸುತ್ತಾರೆ, ನಾನು ಇದರ ಬಗ್ಗೆ ಅಧಿಕಾರಿಗಳೊಂದಿಗೆ ಮಾತನಾಡಿ ಅಸಮಧಾನ ವ್ಯಕ್ತಪಡಿಸಿ ದುರಸ್ಥಿಗೆ ಸೂಚಿಸಿದ್ದೇನೆ, ಇಂದು ಸರ್ಕಾರದಿಂದ ಕ್ಷೇತ್ರಕ್ಕೆ ಅನುದಾನ ತರಲು ಎಷ್ಟು ತೊಂದರೆಯಿದೆ ಎಂಬುದು ಎಲ್ಲರಿಗೂ ತಿಳಿದಿದೆ, ನಾನು ವಿಧಾನಸಭೆ ಹೊರಗೆ ಹಾಗೂ ಒಳಗೆ ನಿಮ್ಮೆಲ್ಲರ ಧ್ವನಿಯಾಗಿ ಮಾತನಾಡಿ, ಅನುದಾನ ಬಿಡುಗಡೆಗೆ ಹಾಗೂ ಕ್ಷೇತ್ರದ ಬದಲಾವಣೆಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ, ನನ್ನ ಏಳಿಗೆ ಸಹಿಸದ ವಿರೋಧ ಪಕ್ಷದ ಕೆಲ ಮುಖಂಡರು ಸುಳ್ಳು ಆರೋಪ ಮಾಡುತ್ತಿದ್ದಾರೆ, ನಾನು ಅದಕ್ಕೆ ವಿಚಲಿತನಾಗದೇ ನಿರಂತರ ನಿಮ್ಮೆಲ್ಲರ ಕೆಲಸ ಮಾಡಲು ಆದ್ಯತೆ ನೀಡುತ್ತೇನೆ, ಬರುವ ದಿನಗಳಲ್ಲಿ ನಾವು ಮಾಡಿರುವ ಅಭಿವೃದ್ಧಿ ಕಾರ್ಯಗಳೇ ಅವರಿಗೆ ಉತ್ತರ ನೀಡಲಿವೆ ಎಂದರು. ಸೇಡಂನಲ್ಲಿ ಹಾಗೂ ಕೊಡ್ಲಾದಲ್ಲಿ ಸಿಮೆಂಟ್ ಕಾರ್ಖಾನೆಗಳು ಇರುವುದರಿಂದ ಈ ಹೆದ್ದಾರಿ ರಸ್ತೆಯ ಮೇಲೆ ಭಾರಿ ವಾಹನಗಳು ಹೆಚ್ಚಿನ ಸಂಖ್ಯೆಯಲ್ಲಿ ಸಂಚಾರ ಮಾಡುತ್ತವೆ, ಕಾರಣ ಗುತ್ತಿಗೆದಾರರು ಉತ್ತಮವಾಗಿ ರಸ್ತೆ ನಿರ್ಮಾಣ ಮಾಡಿ, ಈ ವಿಷಯದಲ್ಲಿ ಲೋಪವಾದರೇ ಅಧಿಕಾರಿಗಳ ಮೇಲೆ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಆಕ್ರೋಶ ವ್ಯಕ್ತಪಡಿಸಿ, ಬರುವ ದಿನಗಳಲ್ಲಿ ಕ್ಷೇತ್ರದ ಗಡಿ ಭಾಗದ ಅಂತ್ಯದವರೆಗೆ ರಸ್ತೆ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರಕ್ಕೆ ಕಳುಹಿಸಲಾಗಿದೆ ಎಂದು ತಿಳಿಸಿದರು.

ಕ್ಷೇತ್ರದಲ್ಲಿರುವ ತಾಂಡಾದಲ್ಲಿರುವ ಜನರು ಪರಿಶ್ರಮ ಜೀವಿಗಳು ಹಲವಾರು ಕಷ್ಟಗಳ ಮದ್ಯೆ ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುತ್ತಿದ್ದಾರೆ, ಇದು ಉತ್ತಮ ಬೆಳವಣಿಗೆ ಈ ಭಾಗದಲ್ಲಿರುವ ತಾಂಡಾಗಳ ಮಕ್ಕಳಿಗೆ ಶೈಕ್ಷಣಿಕ ಬೆಳವಣಿಗೆ ಪೂರಕವಾಗಿ ಶಾಲೆ ಕೋಣೆಗಳ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ, ಬರುವ ದಿನಗಳಲ್ಲಿ ಈ ಶಾಲೆಯನ್ನು ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

# ಡಾ. ಸುಧಾ ಮೂರ್ತಿ ಪದವಿ ಪೂರ್ವ ಮತ್ತು ಮಹಿಳಾ ಪದವಿ ಕಾಲೇಜಿನ ಸ್ವಾಗತ ಸಮಾರಂಭ



ಲಿಂಗಸಗೂರು:ಅ.26:ಸ್ಥಳೀಯಡಾ. ಸುಧಾ ಮೂರ್ತಿ ಪದವಿಪೂರ್ವ ಮತ್ತು ಮಹಿಳಾ ಪದವಿ ಕಾಲೇಜಿನ 2025–26 ನೇ ಸಾಲಿನ ಪ್ರವಾಶಾತಿ ಪಡೆದ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭವನ್ನು ದಿನಾಂಕ 25,8 ,2025 ರಂದು ಬೃಂದಾವನ ಇಂಟರ್ನ್ಯಾಷನಲ್ ಪಬ್ಲಿಕ್ ಶಾಲೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು "ಕನಸಿನಂಗಳ' ಎಂಬ ವೇದಿಕೆಯ ಘನ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಅರ್ಪಿತ. ಕೆ. ಬಾವಿಮನಿಯವರು ವಹಿಸಿದ್ದರು. ಈ ಕಾರ್ಯಕ್ರಮವನ್ನು ಸರಕಾರಿ ಪದವಿಪೂರ್ವ ಕಾಲೇಜಿನ ನಿವೃತ್ತ ಪ್ರಾಚಾರ್ಯರಾದ ಶ್ರೀಮತಿ ಗಂಗಮ್ಮ ಸತ್ಯಂಪೇಟ ರವರು ಉದ್ಘಾಟಿಸಿ ಮಾತನಾಡಿದ ಅವರು ಈ ದೇಶ ಕಂಡ ಸರಳ ಸಜ್ಜನಿಕೆಯ ಸಾಧಕಿ, ಜಾತಿ ಧರ್ಮ ಮತ ಪಂಥವನ್ನು ಮೀರಿ ಸಾಧಿಸುವುದೇ ನಿಜವಾದ ಪ್ರತಿಭೆ, ಅಂತ ಕಾಲೇಜಿನ ಪ್ರವೇಶಾತಿ ಹೊಂದಿದ ತಾವುಗಳು ಪ್ರತಿಭೆಯನ್ನು ನಿರೂಪಿಸಿಕೊಂಡು ಶಿಕ್ಷಣದ ಜೊತೆಗೆ ಒಳ್ಳೆಯ ಸಂಸ್ಕೃತಿಯನ್ನು ಬೆಳೆಸಿಕೊಂಡು ಉತ್ತಮ ವ್ಯಕ್ತಿತ್ವ ಹಾಗೂ ಉತ್ತಮ ನಡತೆಯಿಂದ ಸಾಧನೆ ಮಾಡಿ ಎಂದು ಹಾರೈಸಿದರು. ನಂತರ ಲಿಂಗಸೂರು ವಲಯ ಅಬಕಾರಿ ನಿರೀಕ್ಷಕರು ಆದಂತಹ ಶ್ರೀಮತಿ ಲಕ್ಷ್ಮಿ ದೇವಿ ಮಾತನಾಡಿ ಪದವಿ ಶಿಕ್ಷಣ ಕೇವಲ ಪಠ್ಯಕ್ಕೆ ಸೀಮಿತಗೊಳಿಸದೆ ಸ್ಪರ್ಧಾತ್ಮಕ ಗುರಿಗಳನ್ನು ಹೊಂದಿ ಸತತ ಪ್ರಯತ್ನದ ಮೂಲಕ ಕನಸನ್ನು ನನಸಾಗಿಸಬಹುದು ಜೊತೆಗೆ ಮಹಿಳೆಯರ ನಿಜವಾದ ಸ್ವಾತಂತ್ರ್ಯವೆಂದರೆ ಉತ್ತಮ ಶಿಕ್ಷಣ ಜೊತೆಗೆ ಉದ್ಯೋಗವನ್ನು ಹೊಂದಿ ಸಾಧನೆ ಮಾಡುದಾಗಿದೆ. ನಾನು ಗ್ರಾಮೀಣ ಪ್ರತಿಭೆಯಾಗಿದ್ದು ಇತರರಂತೆ ಕೇವಲ ಕನಸನ್ನು ಕಾಣಲಿಲ್ಲ ಕಂಡ ಕನಸನ್ನು ನನಸಾಗಿಸಲು ವಿಭಿನ್ನವಾದ ಪ್ರಯತ್ನ ಮಾಡಿ ಯಶಸ್ವಿಯಾದೆ ಎಂದು ಹೇಳಿದರು.

ಈ ಕಾರ್ಯಕ್ರಮ ದಿವ್ಯಸಾನಿಧ್ಯವನ್ನು ವಹಿಸಿದ ದೇವದುರ್ಗದ *ನೀಲಾಂಬಿಕ ಬಸವ ಶ್ರೀ ಯೋಗಾಶ್ರಮದ ಶ್ರೀ ಶ್ರೀ ವೀರಭದ್ರಯ್ಯ ಮಹಾಸ್ವಾಮಿಗಳು* ತಮ್ಮ ಆಶೀರ್ವಚನವದ ಮೂಲಕ ಮಕ್ಕಳು ಮೂಢನಂಬಿಕೆಯಿಂದ ಹೊರ ಬಂದು ಉತ್ತಮ ಶಿಕ್ಷಣ ಪಡೆದು ಜಾತಿ ಧರ್ಮ ಎಂಬ ಪರಿಕಲ್ಪನೆಗಳನ್ನು ಬಿಟ್ಟು ಸಂವಿಧಾನದ ಆಶೆಯಲ್ಲಿ ನಡೆಯುವ ಪ್ರತಿಭೆಗಳಾಗಬೇಕು ನಿಜವಾದ ಜ್ಞಾನ ತನ್ನನ್ನು ತಾನು ಅರಿಯುವುದು ಹಾಗೂ ಪುಸ್ತಕಗಳು ಬಾಹ್ಯ ಸೌಂದರ್ಯಕ್ಕಿಂತ ಆಂತರಿಕ ಸೌಂದರ್ಯವನ್ನು ಹೆಚ್ಚಾಗಿಸುತ್ತದೆ, ಪುಸ್ತಕ ಮಸ್ತಕಕ್ಕೆ ಸೇರಿದಾಗೆ ಸಾಧನೆ ಶಿಖರಕ್ಕೆರಬಹುದು ಈ ಸ್ವಾಗತ ಸಮಾರಂಭದಲ್ಲಿ ದಿವ್ಯ ಸಾನಿಧ್ಯ ವಹಿಸಿದ್ದು ಹೆಚ್ಚು ಖುಷಿ ತಂದಿದೆ ಇದರಲ್ಲಿ ಉತ್ತಮ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರವನ್ನು ಕಂಡು ಅತ್ಯಂತ ಸಂತೋಷವಾಯಿತು ಹೀಗೆ ಕಾಲೇಜಿನ ಗುರುಗಳು ತಂದೆತಾಯಿಗಳು ನಿಮ್ಮ ಮೇಲೆ ಇಟ್ಟಿರುವ ನಂಬಿಕೆ ಮತ್ತು ವಿಶ್ವಾಸವನ್ನು ನಿಮ್ಮ ನಡತೆ ಮತ್ತು ಸಂಸ್ಕಾರದಿಂದ ಉಳಿಸಿಕೊಳ್ಳಿ ಎಂದು ಆಶೀರ್ವದಿಸಿದರು.

ಈ ಕನಸಿನಂಗಳ ವೇದಿಕೆಯ ಸಂಸ್ಥೆಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಯವರಾದ ಶ್ರೀ ಆಂಜನೇಯ ಎಚ್ ಕಟ್ಟಿಮನಿ ಯವರು ಕಳೆದ ಶೈಕ್ಷಣಿಕ ವರ್ಷದಲ್ಲಿ ಹೆಚ್ಚು ಅಂಕಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿದರು ಈ ಸಂದರ್ಭದಲ್ಲಿ ಶ್ರೀಮತಿ ಗಂಗಮ್ಮ ಕಟ್ಟಿಮನಿ ದೈಹಿಕ ಶಿಕ್ಷಣ ಶಿಕ್ಷಕಿ ಮತ್ತು ಶ್ರೀ ನೂರ್ ಬಾಷಾ ಎನ್ ನಿವೃತ್ತ ಪ್ರಾಚಾರ್ಯರು ಸರಕಾರಿ ಮಹಿಳಾ ಪದವಿ ಕಾಲೇಜು ನಿವೃತ್ತ ಉಪನ್ಯಾಸಕರು ಪದವಿಪೂರ್ವ ಕಾಲೇಜು ಲಿಂಗಸಗೂರು ಇವರನ್ನ ವಿಶೇಷವಾಗಿ ಸಂಸ್ಥೆಯ ಕಡೆಯಿಂದ ಸನ್ಮಾನಿಸಲಾಯಿತು. ಅಲ್ಲದೆ ಸಾಮಾಜ ಸೇವಕರಾದ ಮೌನುದಿನ್ ಬುದಿನಾಳ ರವರು ಸಂಸ್ಥೆಯ ಮೊದಲ ಮೂರು ಸ್ಥಾನ ಪಡೆಯುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನಗದು ಬಹುಮಾನ ಘೋಷಿಸಿದರು.

ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಆಡಳಿತಾಧಿಕಾರಿಗಳು,ಸಂಯೋಜಕರು,ಪ್ರಾಚಾರ್ಯರು,ಉಪನ್ಯಾಸಕ ಬಳಗ ,ಶಿಕ್ಷಕ ವೃಂದ ಸೇರಿ ಪದವಿ ಮತ್ತು ಪದವಿಪೂರ್ವ ವಿದ್ಯಾರ್ಥಿಗಳು ಮತ್ತು ಪಾಲಕರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿ ಗೊಳಿಸಿದರು.

# ಧಾರ್ಮಿಕ ಮೌಲ್ಯ ಪಾಲನೆಯಿಂದ ಶಾಂತಿ




ತಾಳಿಕೋಟಿ:ಅ.26: ಇಂದು ಮನುಷ್ಯನ ಬಳಿ ಸಕಲ ಸೌಲಭ್ಯಗಳು ಇದ್ದರೂ ಅವನ ಜೀವನದಲ್ಲಿ ಶಾಂತಿ ನೆಮ್ಮದಿ ಎಂಬುದಿಲ್ಲ ಇದಕ್ಕೆ ಕಾರಣ ನಾವು ಧರ್ಮದ ಮೌಲ್ಯಗಳಿಂದ ವಿಮುಖರಾಗಿರುವುದಾಗಿದೆ. ಧಾರ್ಮಿಕ ಮೌಲ್ಯಗಳ ಪರಿಪಾಲನೆಯಿಂದಲೇ ಜೀವನದಲ್ಲಿ ಸುಖ ಶಾಂತಿ ನೆಮ್ಮದಿ ಪ್ರಾಪ್ತವಾಗುತ್ತದೆ ಎಂದು ನಾವದಗಿ ಬ್ರಹನ್ಮಠದ ಷ.ಬ್ರ. ಶ್ರೀ ರಾಜಗುರು ರಾಜೇಂದ್ರಒಡೆಯರ್ ಶಿವಾಚಾರ್ಯರು ಹೇಳಿದರು. ತಾಲೂಕಿನ ಕಾರಗನೂರ ಗ್ರಾಮದ ಆರಾಧ್ಯ ದೇವತೆ ಶ್ರೀಮನ್ ಚೌಡೇಶ್ವರಿ ದೇವಿಯ ಜಾತ್ರೋತ್ಸವ ನಿಮಿತ್ಯ ಹಮ್ಮಿಕೊಂಡ ಧರ್ಮ ಜಾಗೃತಿ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿರ್ದರು. ಆಧುನಿಕ ಜಗತ್ತಿನಲ್ಲಿ ಮನುಷ್ಯನ ಮನಸ್ಸು ಬಹಳ ಚಂಚಲವಾಗಿದೆ ಅವನ ಜೀವನದಲ್ಲಿ ಸಮಚಿತ್ತತೆ ಎಂಬುದಿಲ್ಲ ಮನಸ್ಸಿನ ಸ್ಥಿರತೆ ಧರ್ಮದ ಶ್ರೇಷ್ಠ ಮೌಲ್ಯಗಳಿಂದ ಪ್ರಾಪ್ತವಾಗುತ್ತದೆ ನಾವೆಲ್ಲರೂ ಧರ್ಮವನ್ನು ಪರಿಪಾಲಿಸುವುದರ ಜೊತೆಗೆ ಅದನ್ನು ರಕ್ಷಿಸುವ ಕಾರ್ಯ ಮಾಡಬೇಕು ಎಂದರು. ದೇವರ ಹಿಪ್ಪರಗಿಯ ಪೂಜ್ಯ ಶ್ರೀ ಶಿವಯೋಗಿ ಶಿವಾಚಾರ್ಯರು ತಮ್ಮ ಆಶೀರ್ವಚನದಲ್ಲಿ ಬದುಕು ಎಷ್ಟು ಶ್ರೀಮಂತವಾಗಿದೆ ಅನ್ನುವುದಕ್ಕಿಂತ ಎಷ್ಟು ನೆಮ್ಮದಿಯಿಂದ ಇದ್ದೇವೆ ಎಂಬುದು ಮುಖ್ಯ, ಉತ್ತಮ ಭಾವನೆ ಒಳ್ಳೆಯ ಸಂಸ್ಕಾರಗಳು ಬದುಕಿನಲ್ಲಿದ್ದರೆ ಭಾಗ್ಯ ಎನ್ನುವುದು ತನ್ನಿಂತಾನೆ ಬೆನ್ನತ್ತಿ ಬರುತ್ತದೆ ಭಕ್ತಿಯ ಬದುಕು ಶ್ರೇಷ್ಠ ಬದುಕಾಗಿದೆ ಎಂದರು. ಕಲಿಕೇರಿ ಸಿದ್ದರಾಮ ಶಿವಾಚಾರ್ಯರು ಮಾತನಾಡಿ ಗುರುಭಕ್ತಿ ಇಲ್ಲದೆ ಶಿವ ಭಕ್ತಿ ಇಲ್ಲ ಗುರು ಋಣವನ್ನು ಎಂದೂ ಮರೆಯಬಾರದು. ಗುರುವಿಗಿಂತ ತತ್ವ ತಪಸ್ಸವೂ ಶ್ರೇಷ್ಠವಿಲ್ಲ ನಿಮ್ಮೆಲ್ಲರನ್ನು ಸಂಸ್ಕರಿಸುವ ಶ್ರೇಷ್ಠ ಗುರುಗಳಾದ ರಾಜೇಂದ್ರ ಒಡೆಯರು ನಿಮಗೆ ಸಿಕ್ಕಿದ್ದಾರೆ ನೀವು ನಿಜಕ್ಕೂ ಪುಣ್ಯವಂತರು ಎಂದರು. ಕೋಲಾರದ ಪ್ರಭುಕುಮಾರ ಮಹಾಸ್ವಾಮಿಗಳು ಹಾಗೂ ಕೊಡಗಾನೂರದ ಕುಮಾರ ದೇವರು ಸಮ್ಮುಖ ವಹಿಸಿ ಆಶೀರ್ವಚನ ನೀಡಿದರು. ಧರ್ಮಸಭೆಗೂ ಮುನ್ನ ಶ್ರೀಮನ್ ಚೌಡೇಶ್ವರಿ ತಾಯಿಯ ಭಾವಚಿತ್ರದ ಭವ್ಯ ಮೆರವಣಿಗೆ ಶ್ರೀಗಳ ಸಾನಿಧ್ಯದಲ್ಲಿ ಸಕಲ ವಾದ್ಯ ಮೇಳಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಜರುಗಿತು. ಮಹಿಳಾ ಭಕ್ತಾದಿಗಳು ತಾಯಿ ಚೌಡೇಶ್ವರಿಗೆ ಉಡಿ ತುಂಬವ ಕಾರ್ಯಕ್ರಮ ನೆರವೇರಿಸಿಕೊಟ್ಟರು. ಕಾರ್ಯಕ್ರಮದ ವೇದಿಕೆಯಲ್ಲಿ ವೀರಪಾಕ್ಷಯ್ಯ ಹಿರೇಮಠ(ರಾಜನಕೋಳೂರ),ಕಾಶಿನಾಥ ಹಿರೇಮಠ ಮುತ್ಯಾ, ಮಹೇಶ್ವರಯ್ಯ ಹಿರೇಮಠ(ಬಂಟನೂರ) ಇದ್ದರು. ಕಾರ್ಯಕ್ರಮದಲ್ಲಿ ಕಾರಗನೂರ ಒಳಗೊಂಡು ಸಮೀಪದ ಹಲವಾರು ಗ್ರಾಮಗಳ ಭಕ್ತಾದಿಗಳು ಅಪಾರ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ವೇದಿಕೆ ಕಾರ್ಯಕ್ರಮವನ್ನು ಪ್ರಕಾಶ ಪಾಟೀಲ ನಿರೂಪಿಸಿ ವಂದಿಸಿದರು. ಕಾರಗನೂರು ಗ್ರಾಮದ ಶಕ್ತಿ ದೇವತೆಯಾದ ಚೌಡೇಶ್ವರಿ ದೇವಿಯ ದೇವಸ್ಥಾನ ಐತಿಹಾಸಿಕ ಹಿನ್ನೆಲೆಯನ್ನು ಹೊಂದಿದೆ, ಭಕ್ತರು ಈ ದೇವಸ್ಥಾನಕ್ಕೆ ಬರಲು ಸುಸಜ್ಜಿತವಾದ ರಸ್ತೆಗಳಿಲ್ಲ, ಇಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯೂ ಇದೆ ಇದನ್ನು ಈ ಕ್ಷೇತ್ರದ ಶಾಸಕರು ಒದಗಿಸಿ ಕೊಡಬೇಕು. ಪೂಜ್ಯ ರಾಜೇಂದ್ರ ಒಡೆಯರ್ ಶಿವಾಚಾರ್ಯರು.

# ಉಪ ಲೋಕಾಯುಕ್ತರ ಕಾರ್ಯಕ್ರಮಕ್ಕೆ ಸಮನ್ವಯ ಅತ್ಯಗತ್ಯ: ಲೋಕಾಯುಕ್ತ ಎಸ್ಪಿ ಸತೀಶ್ ಎಸ್ ಚಿಟಗುಬ್ಬಿ




ರಾಯಚೂರು ಆ 26 : ಗೌರವಾನ್ವಿತ ನ್ಯಾಯಮೂರ್ತಿ ಹಾಗೂ ಉಪಲೋಕಾಯುಕ್ತರಾದ ಬಿ.ವೀರಪ್ಪ ಅವರು ರಾಯಚೂರ ಜಿಲ್ಲೆಯಲ್ಲಿ ಕೈಗೊಂಡ ಪ್ರವಾಸ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಜಿಲ್ಲಾಡಳಿತದಿಂದ ಅಗತ್ಯ ಸಹಕಾರ ನೀಡಬೇಕು. ಆಯಾ ಇಲಾಖೆಯ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ತಮಗೆ ವಹಿಸಿದ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ರಾಯಚೂರಿನ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಎಸ್ ಚಿಟಗುಬ್ಬಿ ಅವರು ಹೇಳಿದರು.

ರಾಯಚೂರು ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿನ ರಜತ್ ಮಹೋತ್ಸವದ ಸಭಾಂಗಣದಲ್ಲಿ ಆಗಸ್ಟ್ 26ರಂದು ಪೂರ್ವಭಾವಿ ಸಿದ್ಧತಾ ಸಭೆ ನಡೆಸಿ ಅವರು ಮಾತನಾಡಿದರು.

ಗೌರವಾನ್ವಿತ ಉಪಲೋಕಾಯುಕ್ತರಾದ ಬಿ.ವೀರಪ್ಪ ಅವರು ಆಗಸ್ಟ್ 28ರಂದು ರಾಯಚೂರ ನಗರಕ್ಕೆ ಆಗಮಿಸಿ ಮೂರು ದಿನಗಳ ಕಾಲ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿಯಾಗುವರು. ಮಾನ್ಯ ಉಪ ಲೋಕಾಯುಕ್ತರು ಆಗಸ್ಟ್ 28ರಂದು ವಿವಿಧೆಡೆ ಅನಿರೀಕ್ಷಿತ ಭೇಟಿ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಆಗಸ್ಟ್ 29 ಮತ್ತು ಆಗಸ್ಟ್ 30ರಂದು ವಿವಿಧೆಡೆ ಭೇಟಿ ಮತ್ತು ವೇದಿಕೆಯ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು. ಆಗಸ್ಟ್ 29ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1.30ಗಂಟೆವರೆಗೆ ಮತ್ತು ಮಧ್ಯಾಹ್ನ ಊಟದ ವಿರಾಮದ ನಂತರ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸುವರು. ಸಂಜೆ 5.30ರಿಂದ 6.30ರವರೆಗೆ ಕೃಷಿ ವಿವಿಯ ಬಸವೇಶ್ವರ ಸಭಾಂಗಣದಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆಗೆ ಸಂಬಂಧಿಸಿದ ಕಾನೂನು ಸಾಕ್ಷರತಾ ಕಾರ್ಯಕ್ರಮ ನಡೆಯಲಿದೆ. ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಶಿಕ್ಷಣ ಇಲಾಖೆ, ರೇಷ್ಮೆ ಇಲಾಖೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಉಪನೋಂದಣಿ ಕಚೇರಿ, ಆರ್‌ಟಿಓ ಕಚೇರಿ ಸೇರಿದಂತೆ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದಲ್ಲಿ ಈ ಕಾರ್ಯಕ್ರಮ ಆಯೋಜನೆಯಾಗಿದೆ. ಸಾರ್ವಜನಿಕರ ಅಹವಾಲುಗಳ ಸ್ವೀಕಾರ ಕಾರ್ಯಕ್ರಮಕ್ಕೆ ಬರುವ ಸಾರ್ವಜನಿಕರಿಗೆ ಅಚ್ಚುಕಟ್ಟಾಗಿ ಕುಡಿಯುವ ನೀರು, ಊಟದ ವ್ಯವಸ್ಥೆಯಾಗಬೇಕು ಎಂದು ಸೂಚನೆ ನೀಡಿದರು. ಆಗಸ್ಟ್ 30ರಂದು ಬೆಳಿಗ್ಗೆ 11ರಿಂದ 1.45 ಗಂಟೆವರೆಗೆ ಕೃಷಿ ವಿವಿಯ ಬಸವೇಶ್ವರ ಸಭಾಂಗಣದಲ್ಲಿ, ಹಿಂದಿನ ದಿನ ಅಂದರೆ ಆಗಸ್ಟ್ 29ರಂದು ಸಾರ್ವಜನಿಕರು ವ್ಯಕ್ತಪಡಿಸಿ ಬಾಕಿ ಇರುವ ದೂರುಗಳು ಮತ್ತು ಕುಂದುಕೊರತೆಗಳ ಬಗ್ಗೆ ದೂರುದಾರರು ಹಾಗೂ ಪ್ರತಿವಾದಿಗಳ ಸಮ್ಮುಖದಲ್ಲಿ ಮಾನ್ಯ ಉಪ ಲೋಕಾಯುಕ್ತರು ರಾಯಚೂರಿಗೆ ಸಂಬಂಧಿಸಿದ ಬಾಕಿ ಇರುವ ದೂರುಗಳ ವಿಚಾರಣೆ ಮತ್ತು ವಿಲೇವಾರಿ ನಡೆಸುವರು ಎಂದು ತಿಳಿಸಿದರು. ಇದೆ ವೇಳೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಮಾತನಾಡಿ, ಗೌರವಾನ್ವಿತ ಉಪಲೋಕಾಯುಕ್ತರ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಈಗಾಗಲೇ ಸಭೆ ನಡೆಸಿ ಅಧಿಕಾರಿಗಳಿಗೆ ಕಾರ್ಯ ಹಂಚಿಕೆ ಮಾಡಲಾಗಿದೆ. ಅದರಂತೆ ಪ್ರತಿಯೊಂದು ಸಮಿತಿಯಲ್ಲಿನ ಅಧಿಕಾರಿಗಳು ಮುತುವರ್ಜಿಯಿಂದ ಕಾರ್ಯ ನಿರ್ವಹಿಸಬೇಕು ಎಂದು ಸೂಚನೆ ನೀಡಿದರು. ಗೌರವಾನ್ವಿತ ಉಪಲೋಕಾಯುಕರ ಕಾರ್ಯವ್ಯಾಪ್ತಿಗೆ ಒಳಪಡುವ ಪ್ರಕರಣಗಳಲ್ಲಿ ರಾಯಚೂರು ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ತನಿಖೆ ಅಥವಾ ವಿಚಾರಣೆಗೆ ಬಾಕಿಯಿರುವ ಪ್ರಕರಣಗಳ ಬಗ್ಗೆ ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಉಪಲೋಕಾಯುಕ್ತರು ವಿಚಾರಣೆ ನಡೆಸಲಿದ್ದು, ಆಯಾ ಇಲಾಖೆಯ ಅಧಿಕಾರಿಗಳು, ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ತನಿಖೆ ಅಥವಾ ವಿಚಾರಣೆಗೆ ಬಾಕಿಯಿರುವ ಪ್ರಕರಣಗಳ ಬಗ್ಗೆ ವಿಶೇಷ ಗಮನ ಹರಿಸಿ ವಿಚಾರಣೆಗೆ ಹಾಜರಾಗಬೇಕು ಎಂದು ಸಭೆಯ ಮೂಲಕ ಸೂಚನೆ ನೀಡಿದರು. ಸಭೆಯಲ್ಲಿ ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಲೋಕಾಯುಕ್ತ ಡಿಎಸ್ಪಿ ವಸಂತಕುಮಾರ, ಲೋಕಾಯುಕ್ತ ಡಿವೈಎಸ್ಪಿ ರವಿ ಪುರುಷೋತ್ತಮ, ತಹಸೀಲ್ದಾರರಾದ ಸುರೇಶ ವರ್ಮಾ, ಅಮರೇಶ ಬಿರಾದಾರ, ಜಿಲ್ಲಾ ಪಂಚಾಯತ್‌ನ ಮುಖ್ಯ ಯೋಜನಾಧಿಕಾರಿ ಡಾ.ರೋಣಿ ಪಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಅತಿವೃಷ್ಟಿಯಿಂದ ಮೂವರ ಪ್ರಾಣ ಹಾನಿ ಪ್ರಕರಣ ಹಾಗೂ 77 ಜಾನುವಾರು ಪ್ರಾಣ ಹಾನಿಗೆ ಪರಿಹಾರ ವಿತರಣೆ:ಸಚಿವ ಶರಣಬಸಪ್ಪ ದರ್ಶನಾಪುರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆ:26: ಜಿಲ್ಲೆಯಲ್ಲಿ ಕಳೆದ ಏಪ್ರಿಲ್ ಮಾಹೆಯಿಂದ ಈವರೆಗೆ ಒಟ್ಟು ಮೂರು ಪ್ರಾಣ ಹಾನಿ ಹಾಗೂ 77 ಜಾನುವಾರು ಪ್ರಾಣ ಹಾನಿ ಪ್ರಕರಣಗಳಲ್ಲಿ ಜಿಲ್ಲಾಡಳಿತದವತಿಯಿಂದ ಪರಿಹಾರ ವಿತರಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ಹೇಳಿದರು.

ಜಿಲ್ಲೆಯಲ್ಲಿ ಅತಿವೃಷ್ಟಿಯಿಂದಾದ ಹಾನಿಯ ಕುರಿತು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪರಿಶೀಲನಾ ಸಭೆ ನಡೆಸಿದ ಅವರು ಸಿಡಿಲಿನಿಂದ ಮೃತಪಟ್ಟ ಇಬ್ಬರು ಹಾಗೂ ಮರಬಿದ್ದು ಸಾವನ್ನಪ್ಪಿದ ಓರ್ವರ ವಾರಸುದಾರರಿಗೆ ಹಾಗೂ ಮೃತಪಟ್ಟ 77 ಜಾನುವಾರು ಪ್ರಕರಣಗಳಲ್ಲಿ ಪರಿಹಾರ ವಿತರಿಸಲಾಗಿದೆ ಎಂದು ಹೇಳಿದರು.ಅತಿವೃಷ್ಟಿಯಿಂದ ಜಿಲ್ಲೆಯಲ್ಲಿ ಹೆಸರು ಬೆಳೆ,ಹತ್ತಿ,ತೊಗರಿ ಬೆಳೆ(ಭತ್ತ ಹೊರತುಪಡಿಸಿ) ಅಂದಾಜು

25 ಸಾವಿರ.ಹೆ. ನಾಶವಾಗಿದೆ. ಅದರಂತೆ ಸುಮಾರು 187 ಮನೆಗಳು ಭಾಗಶಃ ಬಿದ್ದ ಬಗ್ಗೆ ಮಾಹಿತಿ ಇದ್ದು, ಸಂಪೂರ್ಣ ಸಮೀಕ್ಷೆ ನಡೆಸಿ ವರದಿ ಸಲ್ಲಿಸಲು ಹಾಗೂ ರಸ್ತೆಗಳ ದುರಸ್ತಿಗೆ ಲಭ್ಯ ಇರುವ ಅನುದಾನ ಬಳಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅದರಂತೆ ಅಕ್ಷರ ಅವಿಷ್ಕಾರ ಯೋಜನೆಯಡಿ ಲಭ್ಯವಿರುವ 60 ಕೋ.ರೂ ಗಳು ಸಮರ್ಪಕ ಬಳಕೆಯಾಗಬೇಕು. ಶಾಲೆ,ವಸತಿ ನಿಲಯ, ಅಂಗನವಾಡಿ ಕಟ್ಟಡಗಳ ದುರಸ್ತಿ,ಕುಡಿಯುವ ನೀರು, ಶೌಚಾಲಯಗಳ ದುರಸ್ತಿಗೆ ಪ್ರಥಮ ಆದ್ಯತೆ ನೀಡುವಂತೆ ಅವರು ಸೂಚಿಸಿ, ಆಯಾ ತಾ.ಪಂ ಕಾರ್ಯನಿರ್ವಹಣಾಧಿಕಾರಿಗಳ ಮೂಲಕ ಚರಂಡಿಗಳ ಸ್ವಚ್ಛತೆಗೆ ಹೆಚ್ಚಿನ ಗಮನ ನೀಡುವಂತೆ ನೋಡಿಕೊಳ್ಳಲು ಅವರು ಸೂಚಿಸಿದರು. ಜಿಲ್ಲೆಯಲ್ಲಿ ಸಧ್ಯಕ್ಕೆ ಪ್ರವಾಹ ಪರಿಸ್ಥಿತಿ ಇಲ್ಲದಿದ್ದರೂ ಕೃಷ್ಣ ಹಾಗೂ ಭೀಮಾ ನದಿ ವ್ಯಾಪ್ತಿಯಲ್ಲಿ ಕಟ್ಟೆಚ್ಚರವಹಿಸಲು ಮತ್ತು ನಾರಾಯಣಪುರ ಮತ್ತು ಸನ್ನತಿ ಬ್ಯಾರೇಜ್ಗಳ ನೀರು ಸಮರ್ಪಕ ನಿರ್ವಹಣೆಗೆ ಸೂಚಿಸಿ, ಮಹಾರಾಷ್ಟ್ರದ ಮಳೆ ಆಧಾರದ ಮೇಲೆ ಸೂಕ್ತ ನಿಗಾ ಇಡುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ನದಿ ತೀರಗಳಲ್ಲಿ ಜನ,ಜಾನುವಾರು ಹೋಗದಂತೆ ಎಚ್ಚರಿಕೆ ನೀಡಿ, ನೋಡಲ್ ಅಧಿಕಾರಿಗಳು ತೀವ್ರ ನಿಗಾ ಇಡಬೇಕು.ಸಂಬಂಧಿಸಿದ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿದ್ದು ಕಾರ್ಯನಿರ್ವಹಿಸಲು ಅವರು ಸೂಚಿಸಿದರು.ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ, ಶಾಸಕ ಶರಣಗೌಡ ಕಂದಕೂರ ಅವರು ಅತಿವೃಷ್ಟಿಯಿಂದ ಉಂಟಾದ ಕೃಷಿ ಬೆಳೆ ಹಾನಿ, ವಿದ್ಯುತ್ ಟ್ರಾನ್ಸ್ ಫಾರ್ಮರ್ಗಳ ಹಾನಿ, ರಸ್ತೆ ಹಾನಿ ಕುರಿತು ಸಚಿವರ ಗಮನಕ್ಕೆ ತಂದರು.ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಅತಿವೃಷ್ಟಿಯಿಂದ ಉಂಟಾದ ಹಾನಿ ಹಾಗೂ ಪರಿಹಾರ ಕುರಿತು ವಿವರ ನೀಡಿದರು.ಜಿ.ಪಂ ಸಿಇಓ ಲವೀಶ್ ಒರಡಿಯಾ, ಎಸ್ಪಿ ಪೃಥ್ವಿಕ್ ಶಂಕರ್,ಅಪರ್ ಜಿಲ್ಲಾಧಿಕಾರಿ ರಮೇಶ ಕೋಲಾರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಪ ಲೋಕಾಯುಕ್ತರಾದ ನ್ಯಾ. ಬಿ ವೀರಪ್ಪ ಅವರಿಂದ ಆ. 28ರಂದು ಅನಿರೀಕ್ಷಿತ ಭೇಟಿ

ರಾಯಚೂರು ಆ 26:ಗೌರವಾನ್ವಿತ ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ಪೂರ್ವ ನಿಗದಿಯಂತೆ ಆಗಸ್ಟ್ 28ರಂದು ರಾಯಚೂರ ಪ್ರವಾಸದ ವೇಳೆ ಅನಿರೀಕ್ಷಿತ ಭೇಟಿ ನೀಡಲಿದ್ದಾರೆ.

ಆಗಸ್ಟ್ 27ರಂದು ರಾತ್ರಿ 8.40ಕ್ಕೆ ಬೆಂಗಳೂರಿನ ಕೆಎಸ್ಆರ್ ರೈಲು ನಿಲ್ದಾಣದಿಂದ ಉದ್ಯಾನ ಎಕ್ಸಪ್ರೆಸ್ ರೈಲು ಮೂಲಕ ಹೊರಟು ಆಗಸ್ಟ್ 28ರ ಬೆಳಿಗ್ಗೆ 4.13ಕ್ಕೆ ರಾಯಚೂರು ನಗರಕ್ಕೆ ಆಗಮಿಸುವರು. ಅಲ್ಲಿಂದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಹೊಸ ಅತಿಥಿ ಗೃಹಕ್ಕೆ ತೆರಳಿ ಬೆಳಗ್ಗೆ 6.30ಕ್ಕೆ ಚಹಾ ಸೇವನೆ ನಂತರ ಅನಿರೀಕ್ಷಿತ ಭೇಟಿ ಕಾರ್ಯಕ್ರಮ ಆರಂಭಿಸುವರು. 9 ಗಂಟೆಗೆ ಉಪಹಾರ ಸೇವನೆ ಬಳಿಕ ಬೆಳಿಗ್ಗೆ 9.30 ರಿಂದ ಮಧ್ಯಾಹ್ನ 1.30ರವರೆಗೆ ನಗರದ ಕೆಲವೆಡೆ ಅನಿರಿಕ್ಷೀತ ಭೇಟಿ ಮುಂದುವರೆಸುವರು. ಊಟದ ವಿರಾಮದ ನಂತರ ಮಧ್ಯಾಹ್ನ 2.30 ರಿಂದ ಮತ್ತೆ ನಾನಾ ಪ್ರದೇಶಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಕೃಷಿ ವಿವಿ ಅತಿಥಿ ಗೃಹದಲ್ಲಿ ವಾಸ್ತವ್ಯ ಮಾಡುವರು.

# ಆಲಮಟ್ಟಿ ಜಲಾಶಯ ಎತ್ತರ ಸರಕಾರಕ್ಕೆ ಇಚ್ಛಾಸಕ್ತಿ ಇಲ್ಲ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.26–ಆಲಮಟ್ಟಿ ಅಣೆಕಟ್ಟಿನ ಎತ್ತರ ಹೆಚ್ಚಳ ವಿಷಯದಲ್ಲಿ ಸರ್ಕಾರಕ್ಕೆ ಇಚ್ಛಾಶಕ್ತಿ ಇಲ್ಲವಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಆರೋಪಿಸಿದರು.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಲಮಟ್ಟಿ ಎತ್ತರ ಹೆಚ್ಚಳ, ಭೂಸ್ವಾಧೀನ, ಪರಿಹಾರ ಹಂಚಿಕೆ ಇದಕ್ಕೆ ಪರಿಹಾರದ ಮಾರ್ಗವನ್ನೇ ಸರಕಾರ ಹುಡುಕುತ್ತಿಲ್ಲ. ಪರಿಣಾಮವಾಗಿ ಯೋಜನೆಯ ಅನುಷ್ಠಾಣ ವಿಳಂಬವಾಗುತ್ತಿದೆ ಎಂದರು.

ಯುಕೆಪಿ 3 ನೇ ಹಂತ ಅನುಷ್ಠಾನ ಕುರಿತಂತೆ ಸದನದಲ್ಲಿ ಚರ್ಚೆ ನಡೆಸಲಾಗಿದ್ದು, ಸರ್ಕಾರ ಈ ವಿಷಯದಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿದೆ ಎಂದ ಪೂಜಾರ, ಯುಕೆಪಿ ಯೋಜನೆ ಅನುಷ್ಠಾನಕ್ಕಾಗಿ ಶೀಘ್ರದಲ್ಲೇ ಜನಾಂದೋಲನ ರೂಪಿಸಲಾಗುವುದು ಎಂದು ಹೇಳಿದರು.

ಬಾಗಲಕೋಟೆ ಬಳಿಯ ಮಲ್ಲಯ್ಯನ ಗುಡ್ಡಕ್ಕೆ ರಸ್ತೆ ನಿರ್ಮಾಣಕ್ಕೆ ಪೂರಕವಾದ ಉತ್ತರವನ್ನು

ಪ್ರವಾಸೋದ್ಯಮ ಸಚಿವರು ಸದನದಲ್ಲಿ ಸ್ಪಷ್ಟ ಪಡಿಸಿದ್ದಾರೆ. ಜಿಲ್ಲಾಧಿಕಾರಿಗಳು ಶೀಘ್ರ ಆ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಿದ್ದಾರೆ. ಅದಕ್ಕಾಗಿ ಜಿಲ್ಲಾಧಿಕಾರಿಗಳು ಸಭೆಯೊಂದನ್ನು ಕರೆಯುವ ನಿರೀಕ್ಷೆ ಇದೆ ಎಂದರು.

ಬಾಗಲಕೋಟೆ ಜನತೆ ಇ ಖಾತೆ ಪಡೆಯಲು ಸಿಟಿಜನ್ ಲಾಗಿನ್ ಬಳಕೆ ಮಾಡಿಕೊಳ್ಳಬಹುದಾಗಿದೆ. ಇದರಿಂದ ಸದ್ಯಕ್ಕೆ ಉಂಟಾಗಿರುವ ತೊಂದರ ನಿವಾರಣೆ ಆಗಲಿದೆ ಎಂದು ಪಿ.ಎಚ್.ಪೂಜಾರ ತಿಳಿಸಿದರು.

# ಬಾನು ಮುಷ್ತಾಕಗೆ ಅಹ್ವಾನ ನೀಡಿದ್ದು ತಪ್ಪು:ಶಾಸಕ ಪೂಜಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.26–ಇತಿಹಾಸ ಪ್ರಸಿದ್ಧ ಮೈಸೂರು ದಸರಾ ಉತ್ಸವ ಉದ್ಘಾಟಿಸಲು ಬೂಕರ್ ಪ್ರಶಸ್ತಿ ಪುರಸ್ಕೃತೆ ಬಾನು ಮುಷ್ತಾಕ್ ಅವರಿಗೆ ಸರ್ಕಾರ ಆಹ್ವಾನ ನೀಡಿರುವುದು ಸರಿಯಲ್ಲ ಎಂದು ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ ಹೇಳಿದರು.

ನಗರದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬಾನು ಮುಷ್ತಾಕ್ ಅವರನ್ನು ಸಾಹಿತಿಯಾಗಿ,ಕನ್ನಡತಿಯಾಗಿ ನಾನೂ ಗೌರವಿಸುವೆ. ಕನ್ನಡ ಸಾಹಿತ್ಯಕ್ಕೆ ಅವರ ಕೊಡುಗೆ ಅಪಾರವಾಗಿದೆ. ಅದರಲ್ಲಿ ಎರಡು ಮಾತಿಲ್ಲ. ಅವರೊಬ್ಬ ಎಡಪಂಥಿಯ ಧೋರಣೆಯವರಾಗಿದ್ದು, ಅವರ ಮನೋಭಾವ ಮೈಸೂರು ದಸರಾ ಹಬ್ಬದ ವಿಧಿ ವಿಧಾನಗಳಿಗೆ ಹೊಂದಿಕೆ ಆಗದು. ಹಾಗಾಗಿ ಅವರನ್ನು ಆಹ್ವಾನಿಸಿದ್ದು ತಪ್ಪು ಎಂದರು.

ಹಿಂದೂ ಸಂಸ್ಕೃತಿ, ಸಂಪ್ರದಾಯ, ವಿಧಿ ವಿಧಾನಗಳ ಮೂಲಕ ನಾಡಹಬ್ಬ ಮೈಸೂರು ದಸರಾ ನಡೆದುಕೊಂಡು ಬಂದಿದೆ. ಆ ಪ್ರಕಾರವಾಗಿಯೇ ಅದು ನಡೆಯಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಎಡಪಂಥಿಯ ಸರ್ಕಾರವಾಗಿದ್ದು, ಕೋಮು ವೈಷಮ್ಯ ಹರಡುವ ಕೆಲಸ ಮಾಡುತ್ತಿದೆ ಎಂದರು.

ಹಿಂದೂಗಳ ಶ್ರದ್ಧಾ ಕೇಂದ್ರವಾಗಿರುವ ಧರ್ಮಸ್ಥಳ ವಿಷಯದಲ್ಲಿ ನಡೆದು–ಕೊಂಡ ರೀತಿಯಿಂದ ಸರಕಾರ ಬಹಳಷ್ಟು ಅಪಮಾನಕ್ಕೀಡಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಗೃಹ ಸಚಿವ ಜಿ.ಪರಮೇಶ್ವರ ರಾಜ್ಯದ ಕ್ಷಮೆ ಕೇಳಬೇಕು ಎಂದು ಪೂಜಾರ ಆಗ್ರಹಿಸಿದರು.

ಬಿಜೆಪಿ ಧರ್ಮಸ್ಥಳ ಯಾತ್ರೆ ಹಮ್ಮಿಕೊಂಡಿದೆ. ಬಾಗಲಕೋಟೆ, ವಿಜಯಪುರ ಸೇರಿದಂತೆ ರಾಜ್ಯದ ನಾನಾ ಮೂಲೆಗಳಿಂದ ಹಿಂದೂ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ಮನವಿ ಮಾಡಿದರು.

ದಸರಾ, ಗಣೇಶ ಹಬ್ಬ, ದೀಪಾವಳಿ ಹಬ್ಬಗಳ ಆಚರಣೆ ವಿಷಯದಲ್ಲಿನ ನಿಯಮಗಳಲ್ಲಿ ಸರ್ಕಾರ ಸರಳೀಕರಣ ಮಾಡಬೇಕು. ಅನಗತ್ಯವಾಗಿ ಅಡತಡೆ ಮಾಡಬಾರದು ಎಂದು ಪೂಜಾರ ಹೇಳಿದರು.

ಒಳ ಮೀಸಲು ನಿಗದಿ ವಿಷಯದಲ್ಲಿ ಸರ್ಕಾರ ತಾರತಮ್ಯ ನೀತಿ ಅನುಸರಿಸಿದೆ. ಭೋವಿ, ವಡ್ಡರ, ಬಂಜಾರಾ, ಕೊಂಚ, ಕೊರಮ ಸಮುದಾಯಗಳಿಗೆ ಅನ್ಯಾಯವಾಗಿದೆ. ಇವರಿಗೆ ಶೇ. 7 ರಷ್ಟು ಮೀಸಲಾತಿ ಕೊಡಬೇಕು. ಜೊತೆಗೆ ಬುಡಕಟ್ಟು, ಅಲೆಮಾರಿಗಳಿಗೆ ಶೇ.1 ಮೀಸಲಾತಿ ಹೆಚ್ಚಳವಾಗಬೇಕು ಎಂದು ಅವರು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಶಂಭುಗೌಡ ಪಾಟೀಲ, ಕುಮಾರ ಗಿರಿಜಾ, ರಾಜು ಚಿತ್ತವಾಡಗಿ, ರಾಜು ನಾಗೂರ, ರಾಜು ಶ್ರೀರಾಮ ಇತರರು ಇದ್ದರು.

# ತಾಯಿಗೆ ಉತ್ತಮ ಗ್ರಂಥಪಾಲಕ ಪ್ರಶಸ್ತಿ : ಮಗಳಿಗೆ ಡಾಕ್ಟರ್ ಆಫ್ ಸೈನ್ಸ್ ಗೌರವ





ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.26:ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು,ಬೀದರನ ಗ್ರಂಥಪಾಲಕರಾದ ಪಾರ್ವತಿ ವಿ.ಮೇತ್ರೆ ಅವರಿಗೆ ಕಲ್ಯಾಣ ಕರ್ನಾಟಕ ಗ್ರಂಥಪಾಲಕರ ಸಂಘದ ವತಿಯಿಂದ ಉತ್ತಮ ಗ್ರಂಥಪಾಲಕ ಪ್ರಶಸ್ತಿ ಲಭಿಸಿದೆ.

ಮಸ್ಕಿಯ ದೇವಾನಾಂಪ್ರಿಯ ಅಶೋಕ ಸರಕಾರಿ ಪ್ರಥಮ ದರ್ಜೆ ಕಾಲೇಜು ಸ್ನಾತಕೋತ್ತರ ಕೇಂದ್ರದಲ್ಲಿ ಭಾರತದ ಗ್ರಂಥಾಲಯ ಪಿತಾಮಹ ಪದ್ಮಶ್ರೀ ಡಾ.ಎಸ್.ಆರ್.ರಂಗನಾಥನ್ ಅವರ ಜನ್ಮ ದಿನದ ಅಂಗವಾಗಿ ಹಮ್ಮಿಕೊಂಡಿದ್ದ ಒಂದು ದಿವಸದ ರಾಷ್ಟ್ರೀಯ ಸಮ್ಮೇಳನದಲ್ಲಿ,ವಿಜಯಪುರ ಮಹಿಳಾ ವಿಶ್ವವಿದ್ಯಾಲಯದ ಮುಖ್ಯ ಗ್ರಂಥಪಾಲಕರಾದ ಶಾಂತಾದೇವಿ ಟಿ ಅವರು ಪ್ರಶಸ್ತಿ ಪ್ರದಾನ ಮಾಡಿದರು.

ಇದರ ಜೊತೆಗೆ,ವೆಂಕಟ ಮೇತ್ರೆ ಮತ್ತು ಪಾರ್ವತಿ ಮೇತ್ರೆಯವರ ಪುತ್ರಿಯಾಗಿರುವ ಡಾ.ವಜೇತಾ ಮೇತ್ರೆ,ಹೈದ್ರಾಬಾದನ ಮಲ್ಲಾರೆಡ್ಡಿ ವಿಶ್ವವಿದ್ಯಾಲಯದಲ್ಲಿ ಮಾಸ್ಟರ್ ಆಫ್ ಫಿಸಿಯೋಥೆರಪಿ ಅಂತಿಮ ವರ್ಷದಲ್ಲಿ ಅಭ್ಯಾಸ ಮಾಡುತ್ತಿದ್ದು,ಮಲ್ಲಾರೆಡ್ಡಿ ನಾರಾಯಣ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಭೌತಚಿಕಿತ್ಸೆಯ ರೋಗಿಗಳಿಗೆ ನೀಡಿದ ಚಿಕಿತ್ಸೆ ಹಾಗೂ ಸಂಶೋಧನಾ ಕಾರ್ಯದ ಮೂಲಕ ವಿಶಿಷ್ಟ ಸಾಧನೆ ಮಾಡಿದ್ದಾರೆ.

ಇವರ ಸೇವೆ ಮತ್ತು ಮಾಹಿತಿಯನ್ನು ರಾಜಸ್ಥಾನ ಸರ್ಕಾರ ಹಾಗೂ ಕೇಂದ್ರ ಸರ್ಕಾರದಿಂದ ಮಾನ್ಯತೆ ಪಡೆದಿರುವ ಅಂಕ್ಯುಪ್ರೇಶರ್ /ಅಕ್ಯುಪಂಚರ್ ಮತ್ತು ಆಲ್ಟರ್ನೇಟಿವ್ ಮೆಡಿಸಿನ್ ಸಂಸ್ಥೆ, ಜೋಧಪುರ ಪ್ರಕಟಿಸಿದ್ದು,ಅದನ್ನು ಗುರುತಿಸಿ ಡಾ.ವಜೇತಾ ಮೇತ್ರೆ ಅವರಿಗೆ ಡಾಕ್ಟರ್ ಆಫ್ ಸೈನ್ಸ್ ಅವಾರ್ಡ್ ನೀಡಲಾಗಿದೆ.ಕುಟುಂಬದ ಸದಸ್ಯರು, ಬಂಧು ಬಳಗದವರು, ಹಿತೈಷಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

# ಬಹುವಾರ್ಷಿಕ ಬೆಳೆ ಬೆಳೆಯುವತ್ತ ರೈತರು ಗಮನಹರಿಸಬೇಕು:ಡಾ.ಎಸ್.ವಿ.ಪಾಟೀಲ್



ಬೀದರ, ಅ 26 : ರೈತರು ಬಹುವಾರ್ಷಿಕ ಬೆಳೆಗಳನ್ನು ಬೆಳೆಯುವತ್ತ ಗಮನಹರಿಸಬೇಕೆಂದು ಬೀದರ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ.ಎಸ್.ವಿ.ಪಾಟೀಲ್ ಹೇಳಿದರು.

ಅವರು ಇತ್ತೀಚಿಗೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆ, ತೋಟಗಾರಿಕೆ ವಿಸ್ತರಣಾ ಶಿಕ್ಷಣ ಘಟಕ, ತೋಟಗಾರಿಕೆ ಮಹಾವಿದ್ಯಾಲಯ ಬೀದರ ಮತ್ತು ತೋಟಗಾರಿಕೆ ಇಲಾಖೆ ಬೀದರ ಇವರುಗಳ ಸಹಯೋಗದೊಂದಿಗೆ 2025–26 ನೇ ಸಾಲಿನ ಮೊದಲನೆ ತ್ರೈಮಾಸಿಕ ತೋಟಗಾರಿಕೆ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ತಮ್ಮ ಜಮೀನುಗಳಲ್ಲಿ ನೀರಾವರಿ ಸೌ;ಭ್ಯಗಳನ್ನು ಹೊಂದಿರುವಂತಹ ರೈತರು ತಾಳೆ ಎಣ್ಣೆ ಬೆಳೆಯಲು ಹೆಚ್ಚು ಒತ್ತು ಕೊಡಬೇಕು ಇದರಿಂದ ರೈತರು ಆರ್ಥಿಕವಾಗಿ ಸ್ವಾವಲಂಬಿಯಾಗುವುದರ ಜೊತೆಗೆ ನಮ್ಮ ದೇಶವು ಹೊರ ದೇಶಗಳಿಂದ ತಾಳೆ ಎಣ್ಣೆಯನ್ನು ಆಮದು ಮಾಡಿಕೊಳ್ಳುವುದು ಕ್ರಮೇಣ ಕಡಿತಗೊಳಿಸಿ ದೇಶದ ಆರ್ಥಿಕತೆಯು ಸುಧಾರಿಸುವ ನಿಟ್ಟಿನಲ್ಲಿ ತಮ್ಮ ಕೊಡುಗೆಯನ್ನು ನೀಡಬಹುದು ಹಾಗೂ ಬೀದರ ಜಿಲ್ಲೆಯ ರೈತರು ತೋಟಗಾರಿಕೆ ಬೆಳೆಗಳ ಬಗ್ಗೆ ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಪರಿಹಾರ ಒದಗಿಸುವ ನಿಟ್ಟಿನಲ್ಲಿ ಸಮಗ್ರವಾದಂತಹ ಮಾಹಿತಿಯನ್ನು ಪಡೆದು ರೈತರಿಗೆ ಸೂಕ್ತವಾದಂತಹ ಸಲಹೆ ಸೂಚನೆಗಳನ್ನು ಆಯಾ ಕ್ಷೇತ್ರದ ಸಹಾಯಕ ತೋಟಗಾರಿಕೆ ಅಧಿಕಾರಿಗಳು ಒದಗಿಸಬೇಕು ಎಂದು ಸೂಚಿಸಿದರು. ಬೀದರ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರಾದ ಮಲ್ಲಿಕಾರ್ಜುನ ಬಾವುಗೆ ಮಾತನಾಡಿ, ಬೀದರನಲ್ಲಿ ಸುಮಾರು 40 ಸಾವಿರ ಹೆಕ್ಟೇರ್ ಭೂ ಪ್ರದೇಶವನ್ನು ಹೊಂದಿದ್ದು, ಇದರಲ್ಲಿ ಶೇ. 50 ರಷ್ಟು ಕಬ್ಬಿನ ಬೆಳೆಯಿದ್ದು ಇನ್ನೂಳಿದಂತಹ ಭೂ ಪ್ರದೇಶದಲ್ಲಿ ನೀರಾವರಿ ಸೌಲಭ್ಯವನ್ನು ಪಡೆದುಕೊಂಡು ತಾಳೆ ಎಣ್ಣೆ ಬೆಳೆ ಬೆಳೆದರೆ ಕಬ್ಬಿಗಿಂತ ಹೆಚ್ಚಾಗಿ ಆರ್ಥಿಕ ಲಾಭವನ್ನು ಕಂಡುಕೊಳ್ಳಬಹುದು ಹಾಗೂ ಬೀದರ ಜಿಲ್ಲೆಯಲ್ಲಿ ಇತ್ತಿಚಿಗೆ ನರ್ಸರಿಗಳ ಬೆಳವಣಿಗೆ ಕಂಡುಬಂದಿದ್ದು, ಇನ್ನಷ್ಟು ಪ್ರೋತ್ಸಾಹ ನೀಡುವಂತೆ ಕರೆ ನೀಡಿದರು.

ಕಾರ್ಯಾಗಾರದಲ್ಲಿ ಬೀದರ ಜಿಲ್ಲೆಯ 52 ಸಹಾಯಕ ತೋಟಗಾರಿಕೆ ಅಧಿಕಾರಿಗಳು ಉಪಸ್ಥಿತರಿದ್ದು ಇದರ ಲಾಭ ಪಡೆದರು.

ಈ ಸಂದರ್ಭದಲ್ಲಿ ಬೀದರ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಿಕ

ಸುನೀಲ ಗಂಗಶ್ರೀ, ಡಾ. ವಿ.ಪಿ. ಸಿಂಗ್., ವಿಸ್ತರಣಾ ಮುಂದಾಳು, ತೋಟಗಾರಿಕೆ ವಿಸ್ತರಣಾ ಶಿಕ್ಷಣ ಘಟಕ, ಬೀದರ ಕಾರ್ಯಕ್ರಮದ ಪ್ರಾಸ್ತಾವಿಕ ನುಡಿ ಹೇಳಿ ಎಲ್ಲಾ ಗಣ್ಯರಿಗೆ ಸ್ವಾಗತಿಸಿದರು.ಡಾ.ಪ್ರಿಯಾಂಕ ಮುಲಗೆ, ಸಹಾಯಕ ಪ್ರಾಧ್ಯಾಪಕರು ಇವರು ಕಾರ್ಯಕ್ರಮವನ್ನು ನಿರೂಪಿಸಿದರು. ಡಾ.ವಿಜಯಮಹಾಂತೇಶ,ಸಹಾಯಕ ಪ್ರಾಧ್ಯಾಪಕರು, ಇವರು ವಂದಿಸಿದರು.

# ಟಿವಿಎಸ್‌ಗೆ ಗೂಡ್ಸ್ ವಾಹನ ಡಿಕ್ಕಿ: ತಾಯಿ, ಮಗಳ ಸಾವು



ಬೀದರ್,ಆ.26:ವೇಗವಾಗಿ ಬಂದ ಗೂಡ್ಸ್‌ಗಾಡಿಯೊಂದು ಎದುರಿಗೆ ಬರುತ್ತಿದ್ದ ಬೈಕ್ಗೆ ಡಿಕ್ಕಿ ಹೊಡೆದ ಪರಿಣಾಮ ತಾಯಿ, ಪುತ್ರಿ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನ ಉಮಾಪುರ ಗ್ರಾಮದ ಬಳಿ ಸಂಭವಿಸಿದೆ. ಮೃತರನ್ನು ಬೋಸ್ಲಾ ಗ್ರಾಮದ ಮೂಲದವರಾದ ತಾಯಿ ತುಕ್ಕಮ್ಮ ಕಿಶನ್ (56) ಹಾಗೂ ಪುತ್ರಿ ಸುರೇಖಾ ಗುಂಡಪ್ಪ (30) ಎಂದು ಗುರುತಿಸಲಾಗಿದೆ.

ಮಹಾರಾಷ್ಟ್ರಕ್ಕೆ ಹೋಗಿದ್ದ ಇಬ್ಬರು ದ್ವಿಚಕ್ರವಾಹನದ ಮೇಲೆ ಸ್ವಗ್ರಾಮಕ್ಕೆ ವಾಪಸ್ ಆಗುತ್ತಿದ್ದರು. ಈ ವೇಳೆ ವೇಗವಾಗಿ ಬಂದ ಹಾಲಿನ ಗೂಡ್ಸ್ ಗಾಡಿ ಟಿವಿಎಸ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಸದ್ಯ ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲಿಸಿದರು. ಈ ಕುರಿತು ಬಸವಕಲ್ಯಾಣ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಮುಂದುವರೆದಿದೆ.

# ಮಳೆ ಹಾನಿ ಸ್ಥಳಕ್ಕೆ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.26:ತಾಲೂಕಿನಲ್ಲಿ ಕಳೆದ ವಾರ ಸುರಿದ ಭಾರಿ ಮಳೆಯಿಂದ ತಾಲೂಕಿನ ಅನೇಕ ಗ್ರಾಮಗಳಲ್ಲಿ ಬೆಳೆ, ರಸ್ತೆ, ಸೇತುವೆ ಹಾಗೂ ಕೆರೆ, ಕಟ್ಟೆಗಳಿಗೆ ಗಂಭೀರ ಹಾನಿ ಸಂಭವಿಸಿದೆ. ಈ ಹಿನ್ನಲೆಯಲ್ಲಿ ಹಾನಿ ಪ್ರದೇಶಗಳಿಗೆ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಅಕನಾಪುರ್,ಮುತಖೇಡ್,ಹಾಗೂ ನಂದಿ ಬಿಜಲಗಾವ್ ಗ್ರಾಮಗಳಿಗೆ ಭೇಟಿ ನೀಡಿ ಹಾನಿಗೊಳಗಾದ ಪ್ರದೇಶಗಳನ್ನು ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಹಾನಿಯ ವಿವರಗಳನ್ನು ಸರ್ಕಾರದ ಗಮನಕ್ಕೆ ತಂದು ತ್ವರಿತ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳುವುದಾಗಿ ಹಾಗೂ ರೈತರಿಗೆ ವಿಮಾ ಕಂಪನಿಗಳ ಮೂಲಕ ಬೆಳೆ ವಿಮೆ ದೊರಕುವಂತೆ ಸಹ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಇದೇ ವೇಳೆ ಪೌರಾಡಳಿತ ಸಚಿವರಾದ ರಹೀಮ್ ಖಾನ್ ಸರ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹಾಗೂ ಜಿಲ್ಲಾ ಪಂಚಾಯತ್ ನ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿರೀಶ ಬದೋಲೆ ಸರ್, ಎಸ್.ಪಿ. ಪ್ರದೀಪ ಗುಂಟೆ ಸರ್, ಎ.ಸಿ. ಮಹಮ್ಮದ್ ಶಕೀಲ್ ಸರ್, ತಾ.ಪಂ.ನ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ ಕೌಟಗೆ ಸರ್, ಮಾನ್ಯ ತಹಶೀಲ್ದಾರ್ ಅಮೀತಕುಮಾರ ಕುಲಕರ್ಣಿ ಸರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.


ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರು.
ಆಸ್ತಿ ಅಧಿಕಾರಿಗಳು ಕೃವಿವಿ ರಾಯಚೂರು.

ನಂ. ಆಅ/ಕೃವಿವಿವಿರಾ/ಟೆ.ನೋ.–187 /2025–26 ದಿನಾಂಕ:–22–08–2025

ಇ–ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ

ಕೆ.ಪಿ.ಡಬ್ಲ್ಯೂ.ಡಿ. ಹಾಗೂ ಸಿ.ಪಿ.ಡಬ್ಲ್ಯೂ.ಡಿ.ಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಸ್ಟ್ಯಾಂಡರ್ಡ್ ಟೆಂಡರ ಡಾಕುಮೆಂಟ್ಸ (ಕೆ.ಡಬ್ಲ್ಯೂ–II) ಅನುಸಾರವಾಗಿ ದ್ವಿ–ಲಕೋಟೆ ಪದ್ಧತಿಯಲ್ಲಿ ಕೃವಿವಿ ರಾಯಚೂರು ಪರವಾಗಿ ಕೃಷಿ ಮಹಾವಿದ್ಯಾಲಯ ಭೀಮರಾಯನಗುಡಿಯಲ್ಲಿ ಸಿವ್ಹಿಲ್ ಕಾಮಗಾರಿಯನ್ನು ನಿರ್ವಹಿಸಲು ಇ–ಪ್ರೊಕ್ಯೂರ್‌ಮೆಂಟ್ ಟೆಂಡರ್‌ನ್ನು ಅಹ್ವಾನಿಸಲಾಗಿದೆ. ಟೆಂಡರ್ ಪ್ರಕಟಣೆಯ ಹೆಚ್ಚಿನ ವಿವರಗಳು ವೆಬ್‌ಸೈಟ್ ವಿಳಾಸ https://kppp.karnataka.gov.in ನಲ್ಲಿ ಲಭ್ಯವಿರುತ್ತದೆ. ಟೆಂಡರ್ ವೇಳಾ ಪಟ್ಟಿ:– (1) ತುಂಬಿದ ಟೆಂಡರನ್ನು ವೆಬ್‌ಸೈಟ್‌ನ ಮೂಲಕ ಸಲ್ಲಿಸುವ ಕೊನೆಯ ದಿನಾಂಕ:–08–09–2025 ಸಾಯಂಕಾಲ 4.00 ಗಂಟೆಯವರೆಗೆ (2) ತಾಂತ್ರಿಕ ಬಿಡ್ಡನ್ನು ತೆರೆಯುವ ದಿನಾಂಕ:–09–09–2025 ಸಾಯಂಕಾಲ 4.10 ಗಂಟೆಗೆ (3) ಆರ್ಥಿಕ ಬಿಡ್ಡನ್ನು ತೆರೆಯುವ ದಿನಾಂಕ:–13–09–2025 ಬೆಳಿಗ್ಗೆ 11.00 ಗಂಟೆಗೆ. ಹೆಚ್ಚಿನ ವಿವರಗಳಿಗಾಗಿ ಕೆಲಸದ ದಿನಗಳಂದು ಸದರಿ ಕಛೇರಿಯನ್ನು ಸಂಪರ್ಕಿಸಿ ಮಾಹಿತಿಯನ್ನು ಪಡೆಯಬಹುದು (Ph. No. 08532 – 220640) ಅಥವಾ ಇ–ಪ್ರೊಕ್ಯೂರ್‌ಮೆಂಟ್‌ನ ಜಾಲತಾಣ https://kppp.karnataka.gov.in ನಲ್ಲಿ ಇಲ್ಲವೆ ಹೆಲ್ಪಡೆಸ್ಕನಿಂದ (ಸಹಾಯವಾಣಿ ಸಂಖ್ಯೆ: 080–25501216 ಮತ್ತು 25501227) ಪಡೆಯಬಹುದು.

ಸಹಿ/– ಆಸ್ತಿ ಅಧಿಕಾರಿಗಳು, ಕೃ.ವಿ.ವಿ.ವಿ. ರಾಯಚೂರು.

DIP/RCR/358/KSMCA/359/2025-26


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.